22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 333 | ನವದೆಹಲಿ | ಬೆಲೆ ₹ 10 | ಜೂನ್ 11, 2025, ಬುಧವಾರ




ಶ್ರೀ ನರೇಂದ್ರ ಮೋದಿ
ಸನ್ಮಾನ್ಯ ಪ್ರಧಾನ ಮಂತ್ರಿಗಳು
ಭಾರತ ಸರ್ಕಾರ

सत्यमेव जयते

## ಇಂಧನ ಇಲಾಖೆ
## ಕರ್ನಾಟಕ ಸರ್ಕಾರ



ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ



ಶ್ರೀ ಡಿ.ಕೆ. ಶಿವಕುಮಾರ್
ಮಾನ್ಯ ಉಪಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ

# ಪ್ರಧಾನಮಂತ್ರಿ - ಕಿಸಾನ್ ಉರ್ಜಾ ಸುರಕ್ಷಾ ಏವಂ ಉತ್ಥಾನ್ ಮಹಾಭಿಯಾನ್ (ಪಿಎಂ-ಕುಸುಮ್) ಕಾಂಪೊನೆಂಟ್ - ಸಿ

(ಕೇಂದ್ರ ಸರ್ಕಾರದ ಶೇಕಡ 30ರ ಸಹಾಯಧನದೊಂದಿಗೆ)

## ರೈತ ಬಾಂಧವರಿಗೆ ವರದಾನ



**ಪ್ರಧಾನ ಮಂತ್ರಿ ಕಿಸಾನ್ ಊರ್ಜಾ ಸುರಕ್ಷಾ ಏವಂ ಉತ್ಥಾನ್ ಮಹಾಭಿಯಾನ್(ಪಿಎಂ ಕುಸುಮ್)- ಕಾಂಪೋನೆಂಟ್- ಸಿ: ರೈತರ ಕೃಷಿ ಪಂಪ್ ಸೆಟ್ ಗಳಿಗೆ ಸುಸ್ಥಿರ ವಿದ್ಯುತ್ ಪೂರೈಕೆ**

1) ಈ ಯೋಜನೆಯಡಿಯಲ್ಲಿ ವಿಕೇಂದ್ರಿತ ಸೌರ ಘಟಕಗಳನ್ನು ಸ್ಥಾಪಿಸಿ, ಕೃಷಿ ಫೀಡರ್ ಗಳಿಗೆ ವಿದ್ಯುತ್ ಪೂರೈಸಲಾಗುವುದು ಹಾಗೂ ಈ ಮೂಲಕ ಸಾಂಪ್ರದಾಯಿಕ ಇಂಧನ ಮೂಲಗಳ ಮೇಲಿನ ಅವಲಂಬನೆಯಲ್ಲಿ ಇಳಿಕೆ.
2) ಈ ಯೋಜನೆಯು ಹಗಲಿನ ವೇಳೆಯಲ್ಲಿ ಸುಸ್ಥಿರ ವಿದ್ಯುತ್ತನ್ನು ಕೃಷಿ ಪಂಪ್ ಸೆಟ್ ಗಳಿಗೆ ಪೂರೈಸಲು ಸಹಕಾರಿಯಾಗಿದೆ.
3) ಈ ಯೋಜನೆಯಡಿಯಲ್ಲಿ ಸೋಲಾರ್ ಘಟಕ ಗಳ ಸ್ಥಾಪನೆಯು ಭಾರತದ ಸೋಲಾರ್ ವಿದ್ಯುತ್ ಸಾಮರ್ಥ್ಯವನ್ನು ಹೆಚ್ಚು ಮಾಡುವ ಮತ್ತು ಕಾರ್ಬನ್ ಎಮಿಶನ್ ತಗ್ಗಿಸಲು ಸಹಕಾರಿಯಾಗಿದೆ.

## ಇಂಧನ ಇಲಾಖೆಯ ಮಹತ್ವದ ಮೈಲಿಗಲ್ಲು

- ಸಾಮರ್ಥ್ಯ **2,400 ಮೆ.ವ್ಯಾ**
- ಉಪಕೇಂದ್ರಗಳು **389**
- ಕೃಷಿ ಫೀಡರ್ ಗಳು **1,555**
- ಕೃಷಿ ಐ.ಪಿ. ಸೆಟ್ ಗಳು **6,32,794**

# ಪ್ರಧಾನಮಂತ್ರಿ - ಕಿಸಾನ್ ಉರ್ಜಾ ಸುರಕ್ಷಾ ಏವಂ ಉತ್ಥಾನ್ ಮಹಾಭಿಯಾನ್ (ಪಿಎಂ - ಕುಸುಮ್) ಕಾಂಪೊನೆಂಟ್ - ಸಿ ಯೋಜನೆಗೆ ಚಾಲನೆ

11.06.2025 | ಬೆಳಿಗ್ಗೆ 10.30 ಗಂಟೆಗೆ | ನೇತಾಜಿ ತಾಲ್ಲೂಕು ಕ್ರೀಡಾಂಗಣ ಗೌರಿಬಿದನೂರು, ಚಿಕ್ಕಬಳ್ಳಾಪುರ ಜಿಲ್ಲೆ

**: ಉದ್ಘಾಟನೆ :**

**ಶ್ರೀ ಸಿದ್ದರಾಮಯ್ಯ**
ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

**: ಗೌರವಾನ್ವಿತ ಉಪಸ್ಥಿತಿ :**

**ಶ್ರೀ ಪ್ರಲ್ಹಾದ ಜೋಶಿ**
ಮಾನ್ಯ ಕೇಂದ್ರ ಸಚಿವರು, ನವ ಮತ್ತು ನವೀಕರಿಸಬಹುದಾದ ಇಂಧನ ಹಾಗೂ ಗ್ರಾಹಕ ವ್ಯವಹಾರ, ಆಹಾರ ಮತ್ತು ಪಡಿತರ ವಿತರಣೆ, ಭಾರತ ಸರ್ಕಾರ

**ಶ್ರೀ ಡಿ.ಕೆ. ಶಿವಕುಮಾರ್**
ಮಾನ್ಯ ಉಪ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ

**ಶ್ರೀ ಶ್ರೀಪಾದ್ ಯೇಸೋ ನಾಯಕ್**
ಮಾನ್ಯ ರಾಜ್ಯ ಸಚಿವರು, ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವಾಲಯ
ಭಾರತ ಸರ್ಕಾರ

**: ಲೋಕಾರ್ಪಣೆ :**

**ಶ್ರೀ ಕೆ.ಜೆ. ಜಾರ್ಜ್**
ಮಾನ್ಯ ಇಂಧನ ಸಚಿವರು, ಕರ್ನಾಟಕ ಸರ್ಕಾರ

**: ಘನ ಉಪಸ್ಥಿತಿ :**

**ಶ್ರೀ ಕೃಷ್ಣ ಭೈರೇಗೌಡ**
ಮಾನ್ಯ ಕಂದಾಯ ಸಚಿವರು
ಕರ್ನಾಟಕ ಸರ್ಕಾರ

**ಡಾ|| ಎಂ.ಸಿ. ಸುಧಾಕರ್**
ಮಾನ್ಯ ಉನ್ನತ ಶಿಕ್ಷಣ ಸಚಿವರು, ಕರ್ನಾಟಕ ಸರ್ಕಾರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವರು

**: ಅಧ್ಯಕ್ಷತೆ :**

**ಶ್ರೀ ಕೆ. ಹೆಚ್. ಪುಟ್ಟಸ್ವಾಮಿ ಗೌಡ**
ಮಾನ್ಯ ಶಾಸಕರು, ಗೌರಿಬಿದನೂರು ವಿಧಾನಸಭಾ ಕ್ಷೇತ್ರ



ಮಾನ್ಯ ನವ ಮತ್ತು ನವೀಕರಿಸಬಹುದಾದ ಇಂಧನ ಹಾಗೂ ಗ್ರಾಹಕ ವ್ಯವಹಾರ, ಆಹಾರ ಮತ್ತು ಪಡಿತರ ವಿತರಣೆ, ಕೇಂದ್ರ ಸಚಿವರಾದ **ಶ್ರೀ ಪ್ರಲ್ಹಾದ ಜೋಶಿ** ಯವರು ಸೌರ ಘಟಕವನ್ನು ವೀಕ್ಷಿಸುತ್ತಿರುವುದು.



ಮಾನ್ಯ ಮುಖ್ಯಮಂತ್ರಿಗಳಾದ **ಶ್ರೀ ಸಿದ್ದರಾಮಯ್ಯ** ರವರೊಂದಿಗೆ ಮಾನ್ಯ ಇಂಧನ ಸಚಿವರಾದ **ಶ್ರೀ ಕೆ.ಜೆ. ಜಾರ್ಜ್** ರವರು ಸೌರ ಘಟಕವನ್ನು ವೀಕ್ಷಿಸುತ್ತಿರುವುದು.

**ಸರ್ವರಿಗೂ ಆದರದ ಸ್ವಾಗತ**

**ಡಾ. ಶಾಲಿನಿ ರಜನೀಶ್,** ಭಾ.ಆ.ಸೇ.
ಮುಖ್ಯ ಕಾರ್ಯದರ್ಶಿಗಳು
ಕರ್ನಾಟಕ ಸರ್ಕಾರ

**ಶ್ರೀ ಗೌರವ್ ಗುಪ್ತ,** ಭಾ.ಆ.ಸೇ.
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಇಂಧನ ಇಲಾಖೆ, ಕರ್ನಾಟಕ ಸರ್ಕಾರ ಹಾಗೂ
ವ್ಯವಸ್ಥಾಪಕ ನಿರ್ದೇಶಕರು, ಕ.ವಿ.ನಿ.ನಿ

**ಶ್ರೀ ಪಂಕಜ್ ಕುಮಾರ್ ಪಾಂಡೆ,** ಭಾ.ಆ.ಸೇ.
ವ್ಯವಸ್ಥಾಪಕ ನಿರ್ದೇಶಕರು,
ಕ.ವಿ.ಪ್ರ.ನಿ.ನಿ.

**ಡಾ. ಎನ್. ಶಿವಶಂಕರ,** ಭಾ.ಆ.ಸೇ.
ವ್ಯವಸ್ಥಾಪಕ ನಿರ್ದೇಶಕರು,
ಬೆ.ವಿ.ಕಂ.

KREDL — ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ
BESCOM — ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ
C.E.S.C. MYSORE — ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ
KPTCL — ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ
HESCOM — ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ
GESCOM — ಗುಲ್ಬರ್ಗ ವಿದ್ಯುತ್ ಸರಬರಾಜು ಕಂಪನಿ ನಿಯಮಿತ
MESCOM — ಮಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ

"ದೇಶದ ಕಾಡು, ವನ್ಯಜೀವಿ, ನದಿಗಳು ಸೇರಿ ಪರಿಸರ ಉಳಿಸುವುದು"
-ಪ್ರತಿಯೊಬ್ಬ ಭಾರತೀಯನ ಸಂವಿಧಾನ ಬದ್ಧ ಮೂಲಭೂತ ಕರ್ತವ್ಯ.

BESCOM 24x7 HELPLINE 1912

ಕರ್ನಾಟಕದ ನವ ನಿರ್ಮಾಣಕ್ಕೆ
ಗ್ಯಾರಂಟಿ ಸರ್ಕಾರ

ಶಕ್ತಿ — ಮಹಿಳೆಯರಿಗೆ ಬಸ್ ಪ್ರಯಾಣ ಉಚಿತ
ಗೃಹಜ್ಯೋತಿ — ಪ್ರತಿ ಮನೆಗೆ 200 ಯೂನಿಟ್‌ವರೆಗೆ ವಿದ್ಯುತ್ ಉಚಿತ
ಅನ್ನಭಾಗ್ಯ — 10 kg
ಗೃಹಲಕ್ಷ್ಮಿ — ₹2000
ಯುವನಿಧಿ — ₹3000 ₹1500

## ನಿತ್ಯ ಪಂಚಾಂಗ 11.06.2025 ಬುಧವಾರ



ಶ್ರೀ ವಿಶ್ವವಸು ನಾಮ ಸಂವತ್ಸರ,
ಜೇಷ್ಠ ಶುದ್ಧ ನವಮಿ
ಉತ್ತರ ನಕ್ಷತ್ರ

**ಉಪೋಷ್ಣಾದೇವಿ ಪೂಜಾ, ಶ್ರೀರಂಗಪಟ್ಟಣ ರಥ, ಶ್ರೀಶೈಲ ಸದಾರಂಗ ಮಠ ಪುಣ್ಯ ದಿನ**

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಪ್ರಧಾನಿ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರದ 11 ವರ್ಷದ ಆಡಳಿತದಲ್ಲಿ ದೇಶದಲ್ಲಿ ಸುಸ್ಥಿರ ಆಡಳಿತದ ಜತೆಗೆ ಆರ್ಥಿಕ ಪ್ರಗತಿ: ಪ್ರಲ್ಹಾದ ಜೋಷಿ



**ಬೆಂಗಳೂರು,ಜೂ10:** ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರದ 11 ವರ್ಷದ ಆಡಳಿತದಲ್ಲಿ ದೇಶದಲ್ಲಿ ಸುಸ್ಥಿರ ಆಡಳಿತದ ಜತೆಗೆ ಆರ್ಥಿಕ ಪ್ರಗತಿಯೂ ಆಗಿದೆ. ದೇಶದ ಬಡತನ ಶೇ. 25ರಿಂದ ಶೇ.5ಕ್ಕೆ ಇಳಿಕೆಯಾಗಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಷಿ ಹೇಳಿದರು. ಪ್ರಧಾನಿ ಮೋದಿ ನೇತೃತ್ವದ ಸರ್ಕಾರ 3ನೇ ಅವಧಿಯಲ್ಲಿ 1 ವರ್ಷ ಪೂರೈಸಿದ ಹಿನ್ನಲೆಯಲ್ಲಿ ಬಿಜೆಪಿ ಕಚೇರಿಯಲ್ಲಿ ಮೋದಿ ಸರ್ಕಾರದ ಸಾಧನೆಗಳ ಬಗ್ಗೆ ಸುದ್ದಿಗೋಷ್ಠಿಯಲ್ಲಿ ಸುದೀರ್ಘವಾಗಿ ವಿವರಿಸಿದ ಜೋಷಿ ಅವರು, ದೇಶದ ಬಡತನ ಶೇ. 25 ರಿಂದ ಶೇ. 5ಕ್ಕೆ ಇಳಿದಿದೆ,. 26 ಕೋಟಿ ಜನ ಬಡತನ ರೇಖೆಗಿಂತ ಹೊರ ಬಂದಿದ್ದಾರೆ. ಇದು ನಮ್ಮ ಅಂಕಿ–ಅಂಶ ಅಲ್ಲ, ವಿಶ್ವಬ್ಯಾಂಕ್ ಅಂಕಿ–ಅಂಶ ಎಂದು ತಮ್ಮ ಮಾತಿಗೆ ಸಮರ್ಥನೆ ಒದಗಿಸಿದರು.ಭಾರತವು ಇದೀಗ ಜಗತ್ತಿನ ನಾಲ್ಕನೇ ಅತಿದೊಡ್ಡ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಿದೆ ಎಂದು ಕೇಂದ್ರ ಗ್ರಾಹಕ ವ್ಯವಹಾರ, ಆಹಾರ ಮತ್ತು ಸಾರ್ವಜನಿಕ ವಿತರಣೆ, ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ಅವರು ತಿಳಿಸಿದ್ದಾರೆ. ಒಂದು ಟ್ರಿಲಿಯನ್ ದೇಶವಾಗಲು ಸುಮಾರು 30–40 ವರ್ಷ ಬೇಕಾಯಿತು. 2 ಟ್ರಿಲಿಯನ್ ದೇಶವಾಗಲು ಸುಮಾರು 62–63 ವರ್ಷವೇ ಬೇಕಾಯಿತು. ಸ್ಥಿರತೆಯ ಪರಿಣಾಮವಾಗಿ 2 ಟ್ರಿಲಿಯನ್‌ನಿಂ ದ 4 ಟ್ರಿಲಿಯನ್‌ಗೂ ಹೆಚ್ಚು ಸಾಧನೆ ಮಾಡಿದ್ದೇವೆ ಎಂದು ವಿವರಿಸಿದರು. ಸ್ಥಿರ ಸರಕಾರದ ಪರಿಣಾಮವಾಗಿ ಸಮರ್ಥ ಸರಕಾರ–ಆಡಳಿತ ನೀಡಲು ಸಾಧ್ಯವಾಗಿದೆ. ಸ್ಥಿರ ಸರಕಾರವು ಎಲ್ಲ ಕ್ಷೇತ್ರಗಳಲ್ಲಿ ಸಾಧನೆಗೆ ಕಾರಣವಾಗಿದೆ ಎಂದು ವಿಶ್ಲೇಷಿಸಿದರು.

**ರಕ್ಷಣಾ ವ್ಯವಸ್ಥೆಯ ಸುಧಾರಣೆ**

ರಕ್ಷಣಾ ವ್ಯವಸ್ಥೆಯ ಸುಧಾರಣೆಯೂ ಪ್ರಮುಖ ಸಂಗತಿ. ರಕ್ಷಣಾ ವಿಭಾಗದ ಮುಖ್ಯಸ್ಥರ ಹುದ್ದೆ (ಸಿಡಿಎಸ್) ಕುರಿತಂತೆ ನಿರ್ಧರಿಸಲಾಗದ ಸರಕಾರ ಹಿಂದೆ ನಮ್ಮಲ್ಲಿತ್ತು. ಗಡಿ ಭಾಗದಲ್ಲಿ ಮೂಲಭೂತ ಸೌಕರ್ಯ ಅಭಿವೃದ್ಧಿ ಮಾಡಿದರೆ ಅದನ್ನು ನಮ್ಮ ಶತ್ರು ದೇಶಗಳು ಬಳಸಿಕೊಳ್ಳುತ್ತವೆ ಎಂದು ತೋಣಿಯವರು ಸಂಸತ್ತಿನಲ್ಲೇ ಅಧಿಕೃತ ಹೇಳಿಕೆ ನೀಡಿದ್ದರು. ಗಡಿ ಭಾಗದ ಲಸೌಕರ್ಯದಿಂದ ಸಿಡಿಎಸ್ ವರೆಗೆ ಸಮರ್ಥ ನಿರ್ಧಾರ ಮಾಡಿದ್ದೇವೆ. ಸಿಡಿಎಸ್ ಪರಿಣಾಮವಾಗಿ ಆಪರೇಷನ್ ಸಿಂದೂರ, ಈ ಕಾರ್ಯಾಚರಣೆ ಬಳಿಕ ಪಾಕಿಸ್ತಾನದ ನಡವಳಿಕೆಗೆ ದಿಟ್ಟ ಉತ್ತರ ನೀಡಲು ಸಾಧ್ಯವಾಯಿತು ಎಂದು ಪ್ರಲ್ಹಾದ್ ಜೋಶಿ ಅವರು ಹೇಳಿದರು. 3 ರಕ್ಷಣಾ ದಳಗಳ ಸಮನ್ವಯತೆಯ ಮೂಲಕ ಭಯೋತ್ಪಾದನೆಗೆ ಸಂಬಂಧಿಸಿದ 9 ಸ್ಥಳಗಳನ್ನು ಗುರುತಿಸಿ ಅದೇ ಜಾಗಕ್ಕೆ ಕ್ಷಿಪಣಿ ದಾಳಿ ಮಾಡಲು ಸಾಧ್ಯವಾಗಿದೆ. ರಕ್ಷಣಾ ಕ್ಷೇತ್ರದ ಎಲ್ಲ ಉತ್ಪನ್ನಗಳನ್ನು ಆಮದು ಮಾಡಿಕೊಳ್ಳಲಾಗುತ್ತಿತ್ತು. ಈಗ ನಾವು 5 ಸಾವಿರ ಉತ್ಪನ್ನಗಳನ್ನು ಮೇಡ್ ಇನ್ ಇಂಡಿಯ, ಮೇಕ್ ಇನ್ ಇಂಡಿಯದಲ್ಲಿ ಉತ್ಪಾದಿಸುತ್ತಿದ್ದೇವೆ. 25 ಸಾವಿರ ಕೋಟಿ ಮೌಲ್ಯದ ಶಸ್ತ್ರಾಸ್ತ್ರ ಮತ್ತಿತರ ಉತ್ಪನ್ನಗಳನ್ನು ರಫ್ತು ಮಾಡಿದ್ದು, ಈ ದೇಶದಲ್ಲಿ ಇದೇ ಮೊದಲು ಎಂದು ನುಡಿದರು.

ಕಡು ಬಡತನ ಪ್ರಮಾಣವು ಶೇ 21ರಿಂದ ಶೇ 5ಕ್ಕೆ ಇಳಿದಿದೆ. 26 ಕೋಟಿ ಜನರು ಕಡು ಬಡತನ ರೇಖೆಯಿಂದ ಹೊರಕ್ಕೆ ಬಂದಿದ್ದಾರೆ. ಇದು ಭಾರತದ ಏಜೆನ್ಸಿಗಳ ಅಂಕಿ ಅಂಶವಲ್ಲ; ಇದು ವಿಶ್ವ ಬ್ಯಾಂಕಿನ ಅಂಕಿ ಅಂಶಗಳು ಎಂದು ಸ್ಪಷ್ಟಪಡಿಸಿದರು. ಸಮರ್ಥ ನಾಯಕತ್ವ, ಸ್ಥಿರ ಸರಕಾರದ ಪರಿಣಾಮವಾಗಿ ದೇಶದ ರಕ್ಷಣಾ ವ್ಯವಸ್ಥೆ ಬಗ್ಗೆ ಕೂಡ ನಿರ್ದಿಷ್ಟ– ದಿಟ್ಟ ಹೆಜ್ಜೆ ಇಟ್ಟಿದ್ದೇವೆ ಎಂದು ವಿವರ ನೀಡಿದರು. ಇದಕ್ಕೆ ಇತ್ತೀಚಿನ ಆಪರೇಷನ್ ಸಿಂದೂರ ಒಂದು ಉದಾಹರಣೆ ಎಂದು ತಿಳಿಸಿದರು.

**ಶೂನ್ಯತೆಯತ್ತ ಭಯೋತ್ಪಾದನಾ ಕೃತ್ಯಗಳು..**

ದೇಶದ ಗಡಿ ಪ್ರದೇಶ ಹೊರತುಪಡಿಸಿ ಇತರೆಡೆಗಳಲ್ಲಿ ಭಯೋತ್ಪಾದನಾ ಕೃತ್ಯಗಳು ಬಹುತೇಕ ಶೂನ್ಯವಾಗಿವೆ. ಕಾಶ್ಮೀರದಲ್ಲಿ ಇಂಥ ಘಟನೆಗಳು ನಡೆಯುತ್ತಿವೆ. ಅವುಗಳಿಗೆ ಅತ್ಯಂತ ಪ್ರಖರ– ಸ್ಪಷ್ಟ ಉತ್ತರ ಕೊಟ್ಟಿದ್ದೇವೆ ಎಂದು ಹೇಳಿದರು. ನೇಪಾಳದ ಪಶುಪತಿಯಿಂದ ತಿರುಪತಿವರೆಗೆ ರೆಡ್ ಕಾರಿಡಾರ್ ಮೂಲಕ ಭಾರತದ ಆಡಳಿತವನ್ನು ನೆಲಕಚ್ಚಿಸುವ ತೀರ್ಮಾನ ಉಗ್ರರದ್ದಾಗಿತ್ತು. ಇವತ್ತು ದೇಶದಲ್ಲಿ ಶೇ 70ರಷ್ಟು ನಕ್ಸಲ್‌ವಾದ ಕಡಿಮೆ ಆಗಿದೆ. 2026ರ ಮಾರ್ಚ್ ವೇಳೆಗೆ ಈ ದೇಶದಲ್ಲಿ ನಕ್ಸಲಿಸಂ ಅನ್ನು ಸಂಪೂರ್ಣವಾಗಿ ತೊಡೆದುಹಾಕುವ ಕುರಿತು ನಮ್ಮ ಗೃಹ ಸಚಿವರು ಪ್ರಕಟಿಸಿದ್ದಾರೆ ಎಂದು ವಿವರ ನೀಡಿದರು.

**ಕೋವಿಡ್ ನಂತರದ ಬೆಳವಣಿಗೆ..**

ಜಗತ್ತಿನ ಎಲ್ಲಿಯೇ ಭಾರತೀಯರಿಗೆ ತೊಂದರೆ ಆದರೆ, ಅವರನ್ನು ರಕ್ಷಿಸಿದ್ದೇವೆ. ರಷ್ಯಾ– ಉಕ್ರೇನ್ ಯುದ್ಧ, ಅಫಘಾನಿಸ್ತಾನದ ಸಮಸ್ಯೆ ಆದಾಗ ನಮ್ಮ ಜನರನ್ನು ವಾಪಸ್ ಕರೆಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದೇವೆ. ಕೋವಿಡ್ ಸಂದರ್ಭದಲ್ಲಿ ಭಾರತದಲ್ಲಿ ಕೋಟ್ಯಂತರ ಜನರ ಸಾವು ಸಂಭವಿಸುವ ಹಾಗೂ ದೇಶವು ನೆಲಕಚ್ಚುವ ಮಾತುಗಳು ಕೇಳಿ ಬರುತ್ತಿದ್ದವು. ಮೋದೀಜೀ ಅವರ ಹೇಳಿಕೆಯಂತೆ, ಭಾರತವು ಕೋವಿಡ್‌ನಂತರ ದಿನಗಳಲ್ಲಿ ಅತ್ಯಂತ ವೇಗವಾಗಿ ಬೆಳೆಯುವ ದೇಶವಾಗಿ ಹೊರಹೊಮ್ಮಿದೆ, ಈಗಲೂ ಅದು ಮುಂದುವರೆದಿದೆ ಎಂದು ವಿಶ್ಲೇಷಿಸಿದರು. 140 ಕೋಟಿ ಜನರಿಗೆ 240 ಕೋಟಿಗಿಂತ ಹೆಚ್ಚು ಡೋಸ್ ಲಸಿಕೆ ಕೊಟ್ಟ ಏಕೈಕ ದೇಶ ಭಾರತ; ಇದಲ್ಲದೆ ರಫ್ತು ಮಾಡಲೂ ಸಾಧ್ಯವಾಗಿದೆ ಎಂದು ತಿಳಿಸಿದರು. ಭಾರತವು ಶೀಘ್ರವೇ ಜಗತ್ತಿನ ಮೂರನೇ ಅತಿದೊಡ್ಡ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. 2024ರಲ್ಲಿ ಡಿಜಿಟಲ್ ವ್ಯವಹಾರವು 24 ಲಕ್ಷ ಕೋಟಿಗೆ ಏರಿಕೆ ಕಂಡಿದೆ. ಇದರಲ್ಲಿ ಯುಪಿಐ ಖಾತೆಗಳ ಪಾಲು ಶೇ 83 ಎಂದರು.

ಹಿಂದಿನ ಹಣಕಾಸು ಸಚಿವರು ಈ ವಿಷಯದಲ್ಲಿ ಮೋದಿಯವರನ್ನು ಗೇಲಿ ಮಾಡಿದ್ದರು. ಜನ್ ಧನ್, ಆಧಾರ್ ಮತ್ತು ಮೊಬೈಲ್ ಲಿಂಕ್ ಮೂಲಕ ಇದು ಸಾಧ್ಯವಾಗಿದೆ ಎಂದು ತಿಳಿಸಿದರು. ಫಲಾನುಭವಿಗಳಿಗೆ 44 ಲಕ್ಷ ಕೋಟಿ ರೂಪಾಯಿ ಡಿಬಿಟಿ ಮೂಲಕ ನೇರವಾಗಿ ಖಾತೆಗೆ ವರ್ಗಾವಣೆ ಆಗುತ್ತಿದೆ ಎಂದು ಹೇಳಿದರು. ಇತರ ವಿವಿಧ ಕ್ಷೇತ್ರಗಳಲ್ಲಿ ಮಾಡಿರುವ ಸಾಧನೆ ಕುರಿತು ಅವರು ಮಾಹಿತಿ ನೀಡಿದರು.

ಸಂಸದರಾದ ಗೋವಿಂದ ಕಾರಜೋಳ, ಪಿ.ಸಿ. ಮೋಹನ್, ಜಗ್ಗೇಶ್, ವಿಧಾನಸಭೆಯ ಮುಖ್ಯ ಸಚೇತಕ ದೊಡ್ಡನಗೌಡ ಹೆಚ್. ಪಾಟೀಲ್, ರಾಜ್ಯ ಪ್ರಧಾನ ಕಾರ್ಯದರ್ಶಿ ನಂದೀಶ್ ರೆಡ್ಡಿ, ರಾಜ್ಯ ಉಪಾಧ್ಯಕ್ಷ ರಾಜುಗೌಡ ನಾಯಕ್, ಬೆಂಗಳೂರು ದಕ್ಷಿಣ ಜಿಲ್ಲಾಧ್ಯಕ್ಷ ಮತ್ತು ಶಾಸಕ ಸಿ.ಕೆ.ರಾಮಮೂರ್ತಿ ಮತ್ತು ಬೆಂಗಳೂರು ಕೇಂದ್ರ ಜಿಲ್ಲಾಧ್ಯಕ್ಷ ಸಪ್ತಗಿರಿ ಗೌಡ ಅವರು ಉಪಸ್ಥಿತರಿದ್ದರು.

## ಮಾಜಿ ಸಭಾಪತಿ ಡೇವಿಡ್ ಸಿಮಯೋನ್ ನಿಧನ: ಹೊರಟ್ಟಿ ಸಂತಾಪ



**ಬೆಂಗಳೂರು, ಜೂ.10:** ಬೆಂಗಳೂರಿನಲ್ಲಿ ಇಂದು ನಿಧನ ಹೊಂದಿದ ಕರ್ನಾಟಕ ವಿಧಾನ ಪರಿಷತ್ತಿನ ಮಾಜಿ ಸಭಾಪತಿ ಡೇವಿಡ್ ಸಿಮಯೋನ್ ಅವರ ಅಗಲಿಕೆಗೆ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ತಮ್ಮ ಶೋಕ ಸಂದೇಶದಲ್ಲಿ, ವಿಧಾನ ಪರಿಷತ್ತಿನ ಸದಸ್ಯರಾಗಿ ಕ್ರೀಯಾಶೀಲವಾಗಿ ಕಾರ್ಯ ನಿರ್ವಹಿಸಿರುವ ಡೇವಿಡ್ ಸಿಮಯೋನ್ ಮೂರು ವರ್ಷಗಳ ಕಾಲ ವಿಧಾನ ಪರಿಷತ್ತಿನ ಉಪಸಭಾಪತಿಯಾಗಿ ಹಾಗೂ ಸುಮಾರು ಒಂದೂವರೆ ವರ್ಷಗಳ ಕಾಲ ಹಂಗಾಮಿ ಸಭಾಪತಿಯಾಗಿ ಸದನವನ್ನು ಸಮರ್ಥವಾಗಿ ನಿರ್ವಹಿಸಿದ್ದನ್ನು ಬಸವರಾಜ ಹೊರಟ್ಟಿರವರು ಈ ಸಂದರ್ಭದಲ್ಲಿ ಸ್ಮರಿಸಿದ್ದಾರೆ.

ಎಲ್ಲಾ ಜನಾಂಗಗಳ ಬಗೆಗೂ ಅತೀವ ಪ್ರೀತಿ , ಕಾಳಜಿ ಹೊಂದಿದ್ದ ಅವರು, ಉತ್ತರ ಕರ್ನಾಟಕ ಅದರಲ್ಲೂ ವಿಶೇಷವಾಗಿ ಕಲ್ಯಾಣ ಕರ್ನಾಟಕ ಭಾಗದ ಶೈಕ್ಷಣಿಕ, ಸಾಂಸ್ಕೃತಿಕ, ಸಾಮಾಜಿಕ ಸೇರಿದಂತೆ ಎಲ್ಲಾ ರಂಗಗಳ ಅಭಿವೃದ್ಧಿಗೆ ಅಹರ್ನಿಶಿ ಶ್ರಮಿಸಿರುವ ಡೇವಿಡ್ ಸಿಮಯೋನ್ ತಮ್ಮ ಸರಳತೆ ಹಾಗೂ ಸಜ್ಜನಿಕೆಯಿಂದ ಇಂದಿನ ಯುವ ರಾಜಕಾರಣಿಗಳಿಗೆ ಮಾದರಿಯಾಗಿದ್ದಾರೆ ಎಂದು ಬಸವರಾಜ ಹೊರಟ್ಟಿ ತಮ್ಮ ಶೋಕ ಸಂದೇಶದಲ್ಲಿ ತಿಳಿಸಿದ್ದಾರೆ.

ಡೇವಿಡ್ ಸಿಮಯೋನ್ ಅವರ ಅಗಲಿಕೆಯಿಂದ ಕನ್ನಡ ನಾಡು ಉತ್ತಮ ಸಮಾಜ ಸೇವಕ ಹಾಗೂ ಸಂಸದೀಯ ಪಟುವನ್ನು ಕಳೆದುಕೊಂಡಂತಾಗಿದೆ ಎಂದು ಕಂಬನಿ ಮಿಡಿದಿರುವ ಬಸವರಾಜ ಹೊರಟ್ಟಿ, ಡೇವಿಡ್ ಸಿಮಯೋನ್ ಅವರ ಅಪಾರ ಅಭಿಮಾನಿಗಳು, ಬಂಧು ಮಿತ್ರರು ಹಾಗೂ ಕುಟುಂಬ ವರ್ಗದವರಿಗೆ ಭಗವಂತ ಅವರ ಅಗಲಿಕೆಯ ದುಖಃವನ್ನು ಸಹಿಸುವ ಶಕ್ತಿ ನೀಡಲಿ ಎಂದು ಪ್ರಾರ್ಥಿಸುವುದಾಗಿ ತಿಳಿಸಿದ್ದಾರೆ

## ಕಾಲ್ತುಳಿತ: ನ್ಯಾಯಾಲಯಕ್ಕೆ ವಾಸ್ತವಾಂಶ ತಿಳಿಸುತ್ತೇವೆ: ಗೃಹ ಸಚಿವ ಡಾ.ಪರಮೇಶ್ವರ



**ಬೆಂಗಳೂರು, ಜೂ, 10;** ಬೆಂಗಳೂರಿನಲ್ಲಿ ನಡೆದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ನಿನ್ನೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಮುಖ್ಯ ಕಾರ್ಯದರ್ಶಿ, ಅಡ್ವೋಕೇಟ್ ಜನರಲ್ ಅವರೊಂದಿಗೆ ಚರ್ಚಿಸಿದ್ದಾರೆ. ವಾಸ್ತವಾಂಶ ಏನಿದೆ ಎಂಬುದನ್ನು ನ್ಯಾಯಾಲಯಕ್ಕೆ ತಿಳಿಸಲಾಗುವುದು ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ ತಿಳಿಸಿದ್ದಾರೆ. ಸುದ್ದಿಗಾರರ ಜೊತೆ ಮಾತನಾಡಿದ ಅವರು, ಮಂಗಳೂರಿನ ಹತ್ಯೆ ಪ್ರಕರಣದ ಬಗ್ಗೆ ಪ್ರತಿಕ್ರಿಯಿಸಿ, ಕೇಂದ್ರ ಸರ್ಕಾರದ ಗೃಹ ಇಲಾಖೆಗೆ, ತನಿಖೆಯನ್ನು ಎನ್‌ಐಎ ಗೆ ವಹಿಸುವ ಅಧಿಕಾರವಿದ್ದು, ತನಿಖೆಗೆ ಎಲ್ಲ ಸಹಕಾರ ನೀಡಲಾಗುವುದು ಎಂದು ಹೇಳಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ದೆಹಲಿಗೆ ಭೇಟಿ ಉದ್ದೇಶ ನನಗೆ ತಿಳಿದಿಲ್ಲ ಎಂದು ಗೃಹ ಸಚಿವ ಜಿ. ಪರಮೇಶ್ವರ್ ಅವರು ಮಂಗಳವಾರ ಹೇಳಿದ್ದಾರೆ.ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿಎಂ ಹಾಗೂ ಡಿಸಿಎಂ ದೆಹಲಿಗೆ ಭೇಟಿ ನೀಡಿದ್ದು, ಈ ಭೇಟಿ ಉದ್ದೇಶ ನನಗೆ ತಿಳಿದಿಲ್ಲ. ಬೆಂಗಳೂರು ಕಾಲ್ತುಳಿತ ಘಟನೆ ಬಗ್ಗೆ ಹೈಕಮಾಂಡ್'ಗೆ ಮಾಹಿತಿ ನೀಡಲು ಹೋಗಿರಬಹುದು. ಪಕ್ಷದ ಹೈಕಮಾಂಡ್ ನನಗೆ ಕರೆ ಮಾಡಿಲ್ಲ. ಅವರಿಂದ ಕರೆ ಬಂದಿದ್ದರೆ ನಾನೂ ಕೂಡ ಹೋಗುತ್ತಿದ್ದ ಎಂದು ಹೇಳಿದರು.

## ಸಾವಿನಲ್ಲಿ ರಾಜಕೀಯ ಮಾಡೋದು ಬಿಜೆಪಿಯವರಿಗೆ ಹೊಸದಲ್ಲ: ಹರಿಪ್ರಸಾದ್



**ಬೆಂಗಳೂರು, ಜೂ.10:** ಸಾವಿನಲ್ಲಿ ರಾಜಕೀಯ ಮಾಡೋದು ಬಿಜೆಪಿಯವರಿಗೆ ಹೊಸದಲ್ಲ, ಅದಕ್ಕೆ ತನ್ನದೇ ಆದ ಪರಂಪರೆ ಇದೆ.ಆರ್‌ಸಿಬಿ ಪಂದ್ಯದ ಮೆರವಣಿಗೆಯಲ್ಲಿ ಆದ ಲೋಪಗಳಿಗೆ ಭಾರಿ ಬೆಲೆ ತೆತ್ತಿದ್ದೇವೆ. ಸೂತಕದ ಮನೆಯ ಬೆಂಕಿಯಲ್ಲಿ ಬೇಳೆ ಬೇಯಿಸಿಕೊಳ್ಳಲು ಬರಬೇಡಿ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿಯವರಿಗೆ ವಿಧಾನ ಪರಿಷತ್ ಸದಸ್ಯ ಬಿ.ಕೆ.ಹರಿಪ್ರಸಾದ್ ತಿರುಗೇಟು ನೀಡಿದ್ದಾರೆ.

ಆರ್‌ಸಿಬಿ ತಂಡದ ಐಪಿಎಲ್ ಚಾಂಪಿಯನ್ ವಿಜಯೋತ್ಸವದ ಸಂದರ್ಭ ಸಂಭವಿಸಿದ ಕಾಲ್ತುಳಿತ ದುರಂತದ ಹಿನ್ನೆಲೆಯಲ್ಲಿ ಮಾತನಾಡಿದ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿಯವರು ರಾಜ್ಯ ಇಂಟೆಲಿಜೆನ್ಸ್ ಏನು ಕತ್ತೆ ಕಾಯುತ್ತಾ ಇತ್ತೇ ಎಂದು ಟೀಕಿಸಿದ್ದರು. ಕೇಂದ್ರ ಸಚಿವರ ಟೀಕೆಗೆ ಬಿ.ಕೆ.ಹರಿಪ್ರಸಾದ್ ಅವರು 'ಎಕ್ಸ್'ನಲ್ಲಿ ಸರಣಿ ಪ್ರಶ್ನೆಗಳ ಮೂಲಕ ಖಡಕ್ ಉತ್ತರ ನೀಡಿದ್ದಾರೆ.'ಟೆಲಿಪ್ರಾಂಪ್ಟರ್ ಇಟ್ಕೊಂಡು ಪಾಕಿಸ್ತಾನದ ವಿರುದ್ಧ ಉತ್ತರನ ಪೌರುಷ ತೋರಿಸುವುದು, ಮಾಧ್ಯಮಗಳ ಎದುರು ಕೇಂದ್ರದ ಮಂತ್ರಿಗಳು ತೌಡು ಕುಟ್ಟುವುದು ಬಿಜೆಪಿಯ ನಾಯಕರುಗಳು ಮಾತ್ರ ಸಿದ್ಧಿಸಿಕೊಂಡಿರುವ ಕಲೆ' ಎಂದು ವ್ಯಂಗ್ಯವಾಡಿದ್ದರು.ಪ್ರಹ್ಲಾದ್ ಜೋಶಿ ಅವರೇ, ಸಾವಿನಲ್ಲಿ ರಾಜಕೀಯ ಮಾಡೋದು ಬಿಜೆಪಿಯವರಿಗೆ ಹೊಸದಲ್ಲ, ಅದಕ್ಕೆ ತನ್ನದೇ ಆದ ಪರಂಪರೆ ಇದೆ. ಆರ್ ಸಿಬಿ ಪಂದ್ಯದ ಮೆರವಣಿಗೆಯಲ್ಲಿ ಆದ ಲೋಪಗಳಿಗೆ ಭಾರಿ ಬೆಲೆ ತೆತ್ತಿದ್ದೇವೆ. ಸೂತಕದ ಮನೆಯ ಬೆಂಕಿಯಲ್ಲಿ ಬೇಳೆ ಬೇಯಿಸಿಕೊಳ್ಳಲು ಬರಬೇಡಿ ಎಂದು ತಾಕೀತು ಹೇಳಿದ್ದಾರೆಪುಲ್ವಾಮಾದಲ್ಲಿ ಭಾರತದ ಗಡಿಯಿಂದಲೇ ಉಗ್ರರು 350 ಕೆಜಿ ಆರ್‌ಡಿಎಕ್ಸ್ ಬಾಂಬ್ ದಾಳಿ ನಡೆಸಿ, ಭಾರತೀಯ ನಲವತ್ತು ಸೈನಿಕರನ್ನು ಬಲಿ ಪಡೆದುಕೊಂಡಾಗ ನಿಮ್ಮ ಕೇಂದ್ರದ ಗೃಹ ಇಲಾಖೆ ಕತ್ತೆ ಮೇಯಿಸುತ್ತಿತ್ತಾ ಸೈನಿಕರಿಗೆ ಭದ್ರತೆ ಇಲ್ಲದ ಕೇಂದ್ರದ ಇಂಟಲಿಜೆನ್ಸ್ ಕತ್ತೆ ಮೇಯಿಸುವುದಕ್ಕೂ ಲಾಯಕ್ ಇದಿಯಾ ಎಂದು ಬಿ.ಕೆ.ಹರಿಪ್ರಸಾದ್ ಪ್ರಶ್ನಿಸಿದ್ದಾರೆ. ಪಹಲ್ಗಾಮ್‌ನಲ್ಲಿ ಸಶಸ್ತ್ರಧಾರಿ ಉಗ್ರರು ಅಮಾಯಕ 26 ಪ್ರವಾಸಿಗರನ್ನು ಕಗ್ಗೊಲೆ ಮಾಡುವಾಗ ಕೇಂದ್ರದ ಸುಪರ್ದಿಯಲ್ಲಿರುವ, ಕಾಶ್ಮೀರದಲ್ಲೇ ಬೀಡು ಬಿಟ್ಟಿರುವ ನಿಮ್ಮ ಇಂಟಲಿಜೆನ್ಸ್ ಕತ್ತೆ ಕಾಯ್ತಿದ್ರಾ ಭಾರತದಲ್ಲಿನ ಡ್ರಗ್ಸ್ ದಂಧೆಗೆ ಗುಜರಾತ್ ಹೆಬ್ಬಾಗಿಲಾಗಿದೆ, ಕೇಂದ್ರದ ಇಂಟಲಿಜೆನ್ಸ್ ಕತ್ತೆ ಕಾಯ್ತಿತ್ತಾ. ಸಾವಿನ ಮನೆಯ ರಾಜಕೀಯ ಬಿಡಿ, ಜನರ ಭಾವನೆಗಳನ್ನು ಕೆರಳಿಸಿ ಬೇಳೆ ಬೇಯಿಸಿಕೊಳ್ಳಬೇಡಿ, ಭಾರೀ ಬೆಲೆ ತೆರಬೇಕಾದೀತು ಎಂದು ಬಿಜೆಪಿಗೆ ಹರಿಪ್ರಸಾದ್ ಎಚ್ಚರಿಕೆ ನೀಡಿದ್ದಾರೆ.

## ಕೆಲ ಸಚಿವರಿಗೆ ಕೊಕ್ ನೀಡುವ ಸಾಧ್ಯತೆ

**ಯಾದಗಿರಿ, ಜೂ.10:** ದೆಹಲಿಯಲ್ಲಿ ಕಾಂಗ್ರೆಸ್ ಹೈಕಮಾಂಡ್ ಹೈವೋಲ್ಟೇಜ್ ಸಭೆ ನಡೆಸಿದ್ದು, ರಾಜ್ಯದ ಕೆಲವು ಸಚಿವರಿಗೆ ಕೊಕ್ ನೀಡುವ ಸಾಧ್ಯತೆಯಿದ್ದು, ಹಲವು ಖಾತೆ ಬದಲಾವಣೆಯಾಗುವ ನಿರೀಕ್ಷೆಯಿದೆ. ಇದೇ ವಿಚಾರವಾಗಿ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ 10ರಿಂದ 15 ಸಚಿವರು ಬದಲಾವಣೆ ಆದರೂ ಆಗಬಹುದು ಎಂದು ಸ್ಫೋಟಕ ಹೇಳಿಕೆ ನೀಡಿದ್ದಾರೆ. ಯಾದಗಿರಿಯಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಹೈಕಮಾಂಡ್ ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಅವರನ್ನು ಯಾಕೆ ಕರೆದಿದ್ದಾರೆ ಅನ್ನೋದು ನಮಗೆ ಗೊತ್ತಿಲ್ಲ. ಆದರೆ 10ರಿಂದ 15 ಜನರ ಬದಲಾವಣೆಯಾದರೂ ಆಗಬಹುದು. ಜನರ ತೀರ್ಮಾನದಂತೆ ಸಚಿವ ಸಂಪುಟ ವಿಸ್ತರಣೆ ಆಗಲ್ಲ ಎಲ್ಲವನ್ನು ಪಕ್ಷದ ಹೈಕಮಾಂಡ್ ತೀರ್ಮಾನ ಮಾಡುತ್ತದೆ. ಸಚಿವ ಸ್ಥಾನ ನೀಡುವುದೇ ಆದರೆ 34 ಕ್ಕಿಂತ ಹೆಚ್ಚಿನ ಶಾಸಕರಿಗೆ ಸಚಿವ ಸ್ಥಾನ ನೀಡಲು ಆಗಲ್ಲ. ಸಚಿವ ಸ್ಥಾನ ಯಾರಿಗೆ ನೀಡಬೇಕು ಅನ್ನೋದರ ಕುರಿತು ಸಿಎಂ ತೀರ್ಮಾನಿಸುತ್ತಾರೆ. ಸಚಿವ ಸಂಪುಟ ಪುನರ್ ರಚನೆಯಾದರೆ ಸಚಿವರ ಬದಲಾವಣೆ ಆಗುತ್ತದೆ ಎಂದು ಶರಣಬಸಪ್ಪ ದರ್ಶನಾಪುರ ಹೇಳಿಕೆ ನೀಡಿದರು.

## ಮರು ಜಾತಿಗಣತಿ ನಿರ್ಧಾರಕ್ಕೆ ಶಾಸಕ ದಿನೇಶ್ ಗೂಳಿಗೌಡ ಸ್ವಾಗತ



**ಬೆಂಗಳೂರು, ಜೂ.10:** ಮರು ಜಾತಿ ಗಣತಿ ಮಾಡಲು ಮುಂದಾಗಿರುವ ಸರ್ಕಾರದ ನಿರ್ಣಯವನ್ನು ಸ್ವಾಗತಿಸುತ್ತೇನೆ ಎಂದು ವಿಧಾನ ಪರಿಷತ್ ಶಾಸಕ ದಿನೇಶ ಗೂಳಿಗೌಡ ಹೇಳಿದ್ದಾರೆ. ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಮರು ಜಾತಿ ಗಣತಿ ನಿರ್ಣಯಕ್ಕೆ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ. ಕೆ.ಶಿವಕುಮಾರ್ ಹಾಗೂ ಕಾಂಗ್ರೆಸ್ ವರಿಷ್ಠರಿಗೆ ಅಭಿನಂದನೆ ಸಲ್ಲಿಸಿದ್ದಾರೆ.

ಹಿಂದುಳಿದ ವರ್ಗಗಳ ಆಯೋಗ ಈ ಹಿಂದೆ ನಡೆಸಿದ ಆರ್ಥಿಕ, ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆ(ಜಾತಿ ಗಣತಿ)ಯನ್ನು ಸರ್ಕಾರ ತಾತ್ವಿಕವಾಗಿ ಒಪ್ಪುತ್ತದೆ ಎಂದು ಹೇಳಿತ್ತು. ಆದರೆ, ಆ ಗಣತಿಯ ಬಗ್ಗೆ ಮಠಾಧೀಶರು, ಧಾರ್ಮಿಕ ಮುಖಂಡರು, ವಿವಿಧ ಸಂಘಟನೆಗಳು, ಪ್ರಮುಖ ಜಾತಿ ಸಂಘಟನೆಗಳು ಮರು ಗಣತಿಗೆ ಒತ್ತಾಯಿಸಿದ್ದರು. ಈ ಹಿಂದೆ ಮಾಡಿದ ಜಾತಿ ಗಣತಿಯಲ್ಲಿ ಹಲವು ಗೊಂದಲಗಳಿವೆ ಎಂದು ಆಕ್ಷೇಪಿಸಿದ್ದವು. ಸರ್ಕಾರಕ್ಕೆ ಮನವಿ ಸಲ್ಲಿಸಿ ಮರು ಸಮೀಕ್ಷೆಗೆ ಒತ್ತಾಯಿಸಿದ್ದರು. ಈ ಹಿನ್ನೆಲೆಯಲ್ಲಿ ಹೈಕಮಾಂಡ್ ಸೂಚನೆಯಂತೆ ಸರ್ಕಾರ ಮರು ಸಮೀಕ್ಷೆ ನಿರ್ಣಯ ಪ್ರಕಟಿಸಿರುವುದನ್ನು ಮುಕ್ತ ಮನಸ್ಸಿನಿಂದ ಸ್ವಾಗತಿಸುತ್ತೇನೆ. ಈ ಸಮೀಕ್ಷೆ ನಿಗದಿತ ಕಾಲಾವಧಿಯಲ್ಲಿ ಮುಗಿಯಬೇಕು, ಗೊಂದಲಗಳು ಬಗೆಹರಿಯಬೇಕು ಎಂಬುದು ನಮ್ಮ ಸದಾಶಯ ಎಂದು ದಿನೇಶ್ ಗೂಳಿಗೌಡ ಹೇಳಿದ್ದಾರೆ.

- ಸಿಎಂ ಡಿಸಿಎಂ ಹಾಗೂ ಕಾಂಗ್ರೆಸ್ ವರಿಷ್ಠರಿಗೆ ಶಾಸಕ ದಿನೇಶ್ ಗೂಳಿಗೌಡ ಅಭಿನಂದನೆ
- ಹಿಂದಿನ ಸಮೀಕ್ಷೆಯಲ್ಲಿ ಗೊಂದಲವಿರುವ ಬಗ್ಗೆ ಜಾತಿ ಸಂಘಟನೆಗಳಿಂದ ಆಕ್ಷೇಪ

## ಕಾಂಗ್ರೆಸ್ ಸರ್ಕಾರದ ವಿರುದ್ಧ ಬೃಹತ್ ಹೋರಾಟ: ವಿಜಯೇಂದ್ರ ಘೋಷಣೆ



**ಶಿವಮೊಗ್ಗ, ಜೂ.10:** ಜನವಿರೋಧಿ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಮತ್ತು ಕಾಂಗ್ರೆಸ್ ಸರಕಾರದ ವಿರುದ್ಧ ಬೃಹತ್ ಹೋರಾಟ ಮಾಡಲು ತೀರ್ಮಾನಿಸಲಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ. ವೈ.ವಿಜಯೇಂದ್ರ ಅವರು ಪ್ರಕಟಿಸಿದ್ದಾರೆ.ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಜನವಿರೋಧಿ ಕಾಂಗ್ರೆಸ್ ಸರಕಾರ ಕಿತ್ತೊಗೆಯುವ ವರೆಗೂ ಹೋರಾಟ ಮುಂದುವರೆಸಲು ನಿರ್ಧರಿಸಿದ್ದೇವೆ. ಜೂನ್ 13ರಂದು ಬೆಂಗಳೂರು ಮಹಾನಗರದ ಫ್ರೀಡಂ ಪಾರ್ಕಿನಲ್ಲಿ ಪ್ರತಿಭಟನೆ ಇದೆ. ಬಿಜೆಪಿ ಕಾರ್ಯಕರ್ತರು, ಘಟನೆಯಲ್ಲಿ ನೊಂದ ಕುಟುಂಬಗಳ ಸದಸ್ಯರು, ನೊಂದವರು ಬರಲಿದ್ದಾರೆ. ಸುಮಾರು 15– 20 ಸಾವಿರ ಸಂಖ್ಯೆಯಲ್ಲಿ ಪ್ರತಿಭಟನಾಕಾರರು ಸೇರಲಿದ್ದಾರೆ ಎಂದು ವಿವರಿಸಿದರು. ಆರ್‌ಸಿಬಿ ಗೆಲುವಿನ ಸಂಭ್ರಮಾಚರಣೆಯಲ್ಲಿ ನಡೆದ ಕಾಲ್ತುಳಿತ, 11 ಸಾವಿನ ಸಂಬಂಧ ದುರ್ಘಟನೆಯಲ್ಲಿ ಆರೋಪಿ ನಂಬರ್ 1 ಆರ್‌ಸಿಬಿ ಅಲ್ಲ; ಆರ್‌ಸಿಬಿ, ಕೆಎಸ್‌ಸಿಎ, ಡಿಎನ್‌ಎ ಅವರು ಕೂಡ ಆರೋಪಿಗಳೇ ಆಗಿದ್ದಾರೆ. ಮುಖ್ಯಮಂತ್ರಿಗಳೇ ಆರೋಪಿ ನಂಬರ್ 1, ಉಪ ಮುಖ್ಯಮಂತ್ರಿಗಳು ಎಡರನೇ ಆರೋಪಿ, ಕೈಕಟ್ಟಿ ಕುಳಿತಿದ್ದ ಗೃಹ ಸಚಿವ ಪರಮೇಶ್ವರ್ ಅವರು ಆರೋಪಿ ನಂಬರ್ 3; ನಂತರದ ಹೊಣೆಗಾರರು ಆರ್‌ಸಿಬಿ, ಕೆಎಸ್‌ಸಿಎ, ಡಿಎನ್‌ಎ ಎಂದು ತಿಳಿಸಿದರು. ಕರ್ತವ್ಯನಿರತ ಹೈಕೋರ್ಟ್ ನ್ಯಾಯಮೂರ್ತಿಗಳಿಂದ ಈ ಪ್ರಕರಣದ ತನಿಖೆ ನಡೆಸಬೇಕೆಂದು ಬಿಜೆಪಿ ಆಗ್ರಹಿಸಿತ್ತು. ಸಿಐಡಿ ತನಿಖೆಗೆ ಕೊಟ್ಟರು. ಮತ್ತೊಂದು ಕಡೆ ನಿವೃತ್ತ ಹೈಕೋರ್ಟ್ ನ್ಯಾಯಮೂರ್ತಿಗಳಿಂದ ತನಿಖೆಗೆ ಆದೇಶಿಸಿದ್ದಾರೆ. ಅವರಿಗೆ ಬೇಕಾದವರನ್ನು ನೇಮಿಸಿ ರಾಜ್ಯ ಸರಕಾರಕ್ಕೆ ಕ್ಲೀನ್‌ಚಿಟ್ ಕೊಟ್ಟು ಅಧಿಕಾರಿಗಳ ಮೇಲೆ ಗೂಬೆ ಕೂರಿಸಿ ಹೊಣೆಯಿಂದ ತಪ್ಪಿಸಿಕೊಳ್ಳಲೆಂದೇ ಹೀಗೆ ಮಾಡಿದ್ದಾರೆ ಎಂದು ಆರೋಪಿಸಿದರು. ರಾಜ್ಯ ಸರಕಾರಕ್ಕೆ ಕಿಂಚಿತ್ತಾದರೂ ಮಾನಮರ್ಯಾದೆ ಇದ್ದರೆ ಹೈಕೋರ್ಟ್‌ನ ಸಿಟ್ಟಿಂಗ್ ನ್ಯಾಯಮೂರ್ತಿಗಳಿಂದ ಈ ಪ್ರಕರಣದ ತನಿಖೆ ನಡೆಸಲಿ ಎಂದು ವಿಜಯೇಂದ್ರ ಅವರು ಆಗ್ರಹಿಸಿದರು.



ಕೇರಳ ಕರಾವಳಿಯಲ್ಲಿ ಮಂಗಳವಾರ ಸಿಂಗಾಪುರ ಮೂಲದ ವಾನ್ ಹೈ 503 ಹಡಗು ಬೆಂಕಿಗೆ ಆಹುತಿಯಾದ ನಂತರ, ಭಾರತೀಯ ಕರಾವಳಿ ರಕ್ಷಣಾ ಪಡೆ ಹಡಗುಗಳಾದ ಸಮುದ್ರ ಪ್ರಹರಿ ಮತ್ತು ಸಚೇತ್ ಅಗ್ನಿಶಾಮಕ ಕಾರ್ಯಾಚರಣೆ ನಡೆಸುತ್ತಿವೆ.

## ಕಾಲ್ತುಳಿತದಿಂದ ಮೃತಪಟ್ಟ ಭೂಮಿಕ್ ಮನೆಗೆ ಅಶೋಕ್ ಭೇಟಿ



**ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಆರ್‌ಸಿಬಿ ಕಾಲ್ತುಳಿತ ಪ್ರಕರಣ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ರಾಜೀನಾಮೆ ಪಡೆಯದಿದ್ದರೆ ಕಾಂಗ್ರೆಸ್ ಹೈಕಮಾಂಡ್ ಖಾಲಿ ಕಮಾಂಡ್ ಆಗುತ್ತದೆ ಎಂದು ಆರ್.ಅಶೋಕ್ ಎಚ್ಚರಿಕೆ ಕೊಟ್ಟಿದ್ದಾರೆ.**

**ಹಾಸನ, ಜೂ.10:** ಆರ್‌ಸಿಬಿ ಗೆಲುವಿನ ಸಂಭ್ರಮಾಚರಣೆಯ ವೇಳೆ ಕಾಲ್ತುಳಿತದಿಂದ ಮೃತಪಟ್ಟ ಹಾಸನ ಜಿಲ್ಲೆಯ ಬೇಲೂರು ತಾಲೂಕಿನ ಭೂಮಿಕ್ ಅವರ ಮನೆಗೆ ಪ್ರತಿಪಕ್ಷ ನಾಯಕರಾದ ಆರ್.ಅಶೋಕ ಹಾಗೂ ಛಲವಾದಿ ನಾರಾಯಣಸ್ವಾಮಿ ಭೇಟಿ ನೀಡಿ, ಕುಟುಂಬ ಸದಸ್ಯರಿಗೆ ಸಾಂತ್ವನ ಹೇಳಿದರು.

ಮೃತ ವಿದ್ಯಾರ್ಥಿ ಭೂಮಿಕ್ ಅವರ ತಂದೆ ಡಿ.ಟಿ.ಲಕ್ಷ್ಮಣ ಅವರೊಂದಿಗೆ ಆರ್.ಅಶೋಕ ಮಾತನಾಡಿ, ಹೋದ ಜೀವವನ್ನು ಮರಳಿ ತರಲು ಸಾಧ್ಯವಿಲ್ಲ. ಆದರೆ ಇದಕ್ಕೆ ನ್ಯಾಯ ಕೊಡಿಸುವುದಾಗಿ ಭರವಸೆ ನೀಡಿದರು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಆರ್. ಅಶೋಕ, ಎಂಜಿನಿಯರಿಂಗ್ ವಿದ್ಯಾರ್ಥಿ ಭೂಮಿಕ್ ಮೃತಪಟ್ಟಿದ್ದರಿಂದ ಕುಟುಂಬದವರಿಗೆ ಬಹಳ ದುಃಖವಾಗಿದೆ. ಈ ಕುಟುಂಬದವರ ಜಮೀನಿನಲ್ಲಿ 30 ಜನರು ಕೆಲಸ ಮಾಡುತ್ತಿದ್ದಾರೆ. ಇವರ ಆರ್ಥಿಕ ಸ್ಥಿತಿ ಉತ್ತಮವಾಗಿಯೇ ಇದೆ. ಆದರೆ, ಈಗ ಒಬ್ಬನೇ ಮಗ ಮೃತಪಟ್ಟಿದ್ದು, ಆ ಜೀವವನ್ನು ಮರಳಿ ತರಲು ಸಾಧ್ಯವಿಲ್ಲ. ಆರ್‌ಸಿಬಿ ಸಂಭ್ರಮಾಚರಣೆಯನ್ನು ಎರಡು ಮೂರು ದಿನ ಮುಂದೂಡಿದ್ದರೆ ಯಾರಿಗೂ ಸಮಸ್ಯೆಯಾಗುತ್ತಿರಲಿಲ್ಲ ಎಂದು ಈ ಕುಟುಂಬ ಸೇರಿದಂತೆ ಎಲ್ಲರೂ ಹೇಳುತ್ತಿದ್ದಾರೆ. ಕ್ರಿಕೆಟ್ ಸಂಭ್ರಮಾಚರಣೆ ಜನರಿಗೆ ನೋವು ತಂದಿದೆ. ಈ ಸಾವುಗಳಿಗೆ ನ್ಯಾಯ ಸಿಗಬೇಕು ಎಂದರು.

ಇಂತಹ ಸ್ಥಿತಿ ಯಾವ ತಂದೆ ತಾಯಿಗೂ ಬರಬಾರದು ಎಂದು ಭೂಮಿಕ್ ಅವರ ತಂದೆ ಹೇಳುತ್ತಿದ್ದಾರೆ. ಭೂಮಿಕ್ ಅವರ ತಂದೆ ಸಮಾಧಿಯ ಬಳಿಯೇ ದುಃಖದಿಂದ ಎರಡು ಮೂರು ದಿನ ಕಳೆದಿದ್ದಾರೆ. ಮುಂದೆ ಈ ರೀತಿಯ ಅನಾಹುತ ನಡೆಯಬಾರದು. ಕಾರ್ಯಕ್ರಮ ಮಾಡುವುದು ಬೇಡವೆಂದು ಪೊಲೀಸರು ಸೂಚನೆ ನೀಡಿದ್ದರೂ, ಅದನ್ನು ಪಾಲಿಸಿಲ್ಲ ಎನ್ನುವುದು ಎಲ್ಲರಿಗೂ ಗೊತ್ತಾಗಿದೆ. ಇದು ಸೂಕ್ತವಾದ ತನಿಖೆಗೆ ಒಳಪಡಬೇಕು. ನ್ಯಾಯ ಕೊಡಿಸಲು ನಾವೆಲ್ಲರೂ ಹೋರಾಟ ಮುಂದುವರಿಸುತ್ತೇವೆ ಎಂದರು.

ಮೃತ ಭೂಮಿಕ್ ತಂದೆ ಲಕ್ಷ್ಮಣ ಮಾತನಾಡಿ, ಇಷ್ಟು ಜನಸಂದಣಿ ಇರುವಾಗ ಇಂತಹ ಕಾರ್ಯಕ್ರಮ ಮಾಡಬಾರದು ಎಂದು ಸರ್ಕಾರಕ್ಕೆ ಯಾಕೆ ಗೊತ್ತಾಗಲಿಲ್ಲ ನಮ್ಮಂತಹವರ ಮಕ್ಕಳ ಪ್ರಾಣ ಹೋಗಿದೆ. ಸರ್ಕಾರವೇನೋ ಪರಿಹಾರ ನೀಡಿದೆ. ಆದರೆ ಆ ಹಣ ನಮ್ಮನ್ನು ನೋಡಿಕೊಳ್ಳುತ್ತದೆಯೇ ಎಂದು ಪ್ರಶ್ನೆ ಮಾಡಿದರು.

ಆರ್.ಅಶೋಕ ಸೇರಿದಂತೆ ಎಲ್ಲ ಮುಖಂಡರು ನಮಗೆ ಸಹಾಯ ಮಾಡಿದ್ದಾರೆ. ಎಲ್ಲ ತಂದೆ ತಾಯಿಗಳಿಗೆ ಇವರು ಸ್ಪಂದಿಸಿದ್ದಾರೆ. ಘಟನೆ ನಡೆದ ಕೂಡಲೇ ಅಗತ್ಯವಾದ ವ್ಯವಸ್ಥೆ ಮಾಡಿಕೊಟ್ಟಿದ್ದಾರೆ. ಇದು ರಾಜಕೀಯವಲ್ಲ. ಮಾನವೀಯತೆ ದೃಷ್ಟಿಯಿಂದ ಇವರು ಸಹಾಯ ಮಾಡಿದ್ದಾರೆ ಎಂದು ಶ್ಲಾಘಿಸಿದರು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

ಜೂನ್ 11, 2025, ಬುಧವಾರ

## ಒಳಪುಟಗಳಲ್ಲಿ

ಪಾಕ್ ವಿರುದ್ಧ ಜಾಗತಿಕ ಭಯೋತ್ಪಾದನಾ ವಿರೋಧಿ ಅಭಿಯಾನ ಅಂತ್ಯ: ಸರ್ವಪಕ್ಷ ನಿಯೋಗಗಳಿಂದ ಪ್ರಧಾನಿ ಮೋದಿ ಭೇಟಿ- ಪು.4

ಕಾಲ್ತುಳಿತದ ಪ್ರಕರಣದಲ್ಲಿ ಮುಖ್ಯಮಂತ್ರಿ ರಾಜೀನಾಮೆ ಅವಶ್ಯವಿಲ್ಲ: ಖರ್ಗೆ - ಪು.5

ಯಾವುದೇ ಕ್ಷಣದಲ್ಲಾದರೂ ಸರ್ಕಾರದ ಪತನ: ವಿಶ್ವೇಶ್ವರ ಕಾಗೇರಿ ಭವಿಷ್ಯ - ಪು.6

# ಕಾಲಮಿತಿಯಲ್ಲಿ ಜಾತಿಗಣತಿ ಮರು ಸಮೀಕ್ಷೆಗೆ ಕಾಂಗ್ರೆಸ್ ವರಿಷ್ಠರ ಸೂಚನೆ

## ವಿಧಾನಪರಿಷತ್ ನಾಮನಿರ್ದೇಶನ, ಸಚಿವ ಸಂಪುಟ ಪುನಾರಚನೆ ಕುರಿತು ಚರ್ಚೆ

**ಬೆಂಗಳೂರು, ಜೂ, 10:** ಕಳೆದ ವಾರ ನಡೆದ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿಯ ಕಾಲ್ತುಳಿತ ಪ್ರಕರಣ ,ವಿಧಾನ ಪರಿಷತ್ ಸದಸ್ಯರು ನಾಮನಿರ್ದೇಶನ, ಜಾತಿ ಜನಗಣತಿ,ಸಚಿವ ಸಂಪುಟ ಪುನಾರಚನೆ ಸೇರಿದಂತೆ ವಿವಿಧ ವಿಷಯಗಳ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ದೆಹಲಿಯಲ್ಲಿ ಮಂಗಳವಾರ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಎಂ. ಮಲ್ಲಿಕಾರ್ಜುನ ಖರ್ಗೆ ಹಾಗೂ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರೊಂದಿಗೆ ಸುದೀರ್ಘ ಸಮಾಲೋಚನೆ ನಡೆಸಿದರು. ಈ ವೇಳೆ ಪಕ್ಷದ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ,ರಾಜ್ಯ ಕಾಂಗ್ರೆಸ್ ಉಸ್ತುವರಿ ರಣದೀಪ್ ಸಿಂಗ್ ಸುರ್ಜೇವಾಲ ಸೇರಿದಂತೆ ಸೇರಿವೆ.

ನಿರ್ದಿಷ್ಟ ಕಾಲಮಿತಿಯಲ್ಲಿ ಜಾತಿಗಣತಿಯ ಮರು ಸಮೀಕ್ಷೆ ನಡೆಸುವಂತೆ ಸೂಚಿಸಿದ್ದು, 60, 80, 90 ದಿನಗಳ ಕಾಲ ಮಿತಿಯಲ್ಲಿ ವರದಿ ತಯಾರಿಸುವಂತೆ ಸಿದ್ಧಪಡಿಸಲಾಗಿದೆ. ಸಭೆಯ ಬಳಿಕ ಕೆ.ಸಿ.ವೇಣುಗೋಪಾಲ್ ಮಾತನಾಡಿ , ಹತ್ತು ವರ್ಷಗಳ ಹಿಂದೆ ನಡೆದ ಜಾತಿಗಣತಿಯಲ್ಲಿ ಅಂಕಿ-ಸಂಖ್ಯೆಗಳನ್ನು ಸೀಮಿತ ಸಮಯದಲ್ಲಿ ಪುನರ್ ಪರಿಶೀಲಿಸುವ ಸೂಚನೆ ನೀಡಲಾಯಿತು .



ಜಾತಿಗಣತಿ ವರದಿ ವಿಚಾರವಾಗಿ ಜೂನ್ 12 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಶೇಷ ಸಚಿವ ಸಂಪುಟ ಸಭೆ ನಡೆಸಲಿದ್ದಾರೆ ಎಂದು ಮಾಹಿತಿ ನೀಡಲಾಗಿದೆ.

**ಇತ್ತೀಚಿಗೆ ಸಂಭವಿಸಿದ ಕಾಲ್ತುಳಿತ ದುರಂತ ಪ್ರಕರಣದ ಬಗ್ಗೆ ಸಭೆಯಲ್ಲಿ ಚರ್ಚೆ ನಡೆದಿದೆ:**

**ವಿಧಾನ ಪರಿಷತ್‌ನ 4 ಸ್ಥಾನಗಳ ನಾಮನಿರ್ದೇಶನಕ್ಕೆ ಸಂಬಂಧಿಸಿದಂತೆ ಈಗ ಸಿದ್ಧಗೊಳಿಸಿರುವ ನಾಲ್ವರ ಪಟ್ಟಿಗೆ ಆಕ್ಷೇಪಗಳಿದ್ದು, ಎಐಸಿಸಿ ಅಧ್ಯಕ್ಷರ ಜತೆ ಮಾತನಾಡಿ ಪಟ್ಟಿಯನ್ನು ಮಾರ್ಪಾಡು ಮಾಡಿ ಕಾರ್ಯಕರ್ತರಿಗೆ ಆದತೆ ಕೊಡಿ ಎಂದು ರಾಹುಲ್‌ಗಾಂಧಿ ಇದೇ ಸಂದರ್ಭದಲ್ಲಿ ಸೂಚಿಸಿದರು ಎನ್ನಲಾಗಿದೆ.**

ಕಾಲ್ತುಳಿತ ಪ್ರಕರಣದ ದುರಂತಕ್ಕೆ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳು ಮಾಹಿತಿ ನೀಡಿದ್ದು ,ಈ ವೇಳೆ ಸರ್ಕಾರ ಕೈಗೊಂಡ ಕ್ರಮಗಳ ಕುರಿತಂತೆಯೂ ವಿವರಣೆ.ಗೆ ಈ ಸಂಬಂಧ ನ್ಯಾಯಾಂಗ ತನಿಖೆ ನಡೆಯುತ್ತಿದೆ ,ಇದರಲ್ಲಿ ಸರ್ಕಾರ ಯಾವುದೇ ಹಸ್ತಕ್ಷೇಪ ಮಾಡಿದೆ ಎಂದು ಹೇಳಿದರು. ಇದರ ಮಧ್ಯೆ, ಅಹಿತಕರ ಘಟನೆ ತಡೆಗೆ ಶೀಘ್ರವೇ ಹೊಸ ಕಾಯ್ದೆ ತರಲಾಗುವುದು ಎಂದು ಲೋಕಸಭೆಯ ವಿಪಕ್ಷ ನಾಯಕರ ರಾಹುಲ್ ಗಾಂಧಿ ಅವರಿಗೆ ಸಿಎಂ ಭರವಸೆ ನೀಡಿದ್ದಾರೆ. ಸಿಎಂ, ಡಿಸಿಎಂ ಹೈಕಮಾಂಡ್ ಜೊತೆ ಪ್ರತ್ಯೇಕವಾಗಿ ಘಟನೆಗೆ ಸಂಬಂಧಿಸಿದಂತೆ ತಮ್ಮ-ತಮ್ಮ ವರದಿ ಮಂಡಿಸಿದ್ದು, ಮುಂಜಾಗ್ರತಾ ಕ್ರಮ ವಹಿಸುವಂತೆ ರಾಹುಲ್ ಗಾಂಧಿ ಸೂಚನೆ ನೀಡಿದ್ದಾರೆ.

# ಕಾಲ್ತುಳಿತ ಪ್ರಕರಣ: ನಾಲ್ವರ ಬಿಡುಗಡೆ ಕುರಿತ ಮನವಿ ಬಗ್ಗೆ ಇಂದು ವಿಚಾರಣೆ



**ಬೆಂಗಳೂರು, ಜೂ,10:** ಎಲ್ಲ ಮಾಹಿತಿಯನ್ನು ಸ್ಪಷ್ಟವಾಗಿ ಬಹಿರಂಗಪಡಿಸಲು ನಾಳೆಯವರೆಗೆ ಕಾಲಾವಕಾಶ ನೀಡಬೇಕು ಎಂಬ ರಾಜ್ಯ ಸರ್ಕಾರದ ವಿನಮ್ರ ವಾದವನ್ನು ಪರಿಗಣಿಸಿದ ರಾಜ್ಯ ಹೈಕೋರ್ಟ್ ಕಾಲ್ತುಳಿತ ಪ್ರಕರಣದ ಸಂಬಂಧ ಬಂಧಿತರಾಗಿರುವ ನಾಲ್ವರ ಬಿಡುಗಡೆ ಮನವಿಗೆ ಸಂಬಂಧಿಸಿದ ಅರ್ಜಿಯನ್ನು ಬುಧವಾರಕ್ಕೆ ಮುಂದೂಡಿದೆ.

ನ್ಯಾಯಾಲಯವು ಅವರ ಅರ್ಜಿಯ ಮೇಲಿನ ಆದೇಶವನ್ನು ಜೂನ್ 11 ರವರೆಗೆ ಕಾಯ್ದಿರಿಸಿದೆ. ತಮ್ಮ ಬಂಧನ ಅಕ್ರಮವಾಗಿರುವುದರಿಂದ ತಕ್ಷಣ ಬಿಡುಗಡೆ ಮಾಡಬೇಕು ಎಂದು ಕೋರಿ ಆರ್‌ಸಿಬಿ ಮಾರುಕಟ್ಟೆ ವಿಭಾಗದ ನಿಖಿಲ್ ಸೋಸಲೆ, ಡಿಎನ್‌ಎ ಎಂಟರ್ಟೈನ್‌ಮೆಂಟ್ ನೆಟ್‌ವರ್ಕ್‌ನ ನಿರ್ದೇಶಕ ಸುನೀಲ್ ಮ್ಯಾಥ್ಯೂ, ಡಿಎನ್‌ಎ ಮ್ಯಾನೇಜರ್ ಕಿರಣ್ ಕುಮಾರ್ ಮತ್ತು ಸಮಂತ್ ಮಾವಿನಕೆರೆ ಅವರ ಅರ್ಜಿಗಳ ವಿಚಾರಣೆಯನ್ನು ನ್ಯಾಯಮೂರ್ತಿ ಎಸ್ ಆರ್ ಕೃಷ್ಣ ಕುಮಾರ್ ಅವರ ಏಕಸದಸ್ಯ ಪೀಠ ಮಂಗಳವಾರ ವಿಚಾರಣೆ ನಡೆಸಿತು.

ಅರ್ಜಿದಾರರ ಪರ ಹಿರಿಯ ವಕೀಲ ಸಂದೇಶ್ ಚೌಟ ವಾದ ಪೂರ್ಣಗೊಳಿಸುವ ವೇಳೆಗೆ ಪೀಠದ ಮುಂದೆ ಹಾಜರಾದ ಅಡ್ವೋಕೇಟ್ ಜನರಲ್ ಕೆ ಶಶಿಕಿರಣ್ ಶೆಟ್ಟಿ, ಪ್ರಕರಣಕ್ಕೆ ಸಂಬಂಧಿಸಿದ ಎಲ್ಲಾ ವಿಚಾರಗಳನ್ನು ಬಹಿರಂಗಪಡಿಸಲಾಗುವುದು. ಅರ್ಜಿದಾರರ ಆರೋಪಗಳಿಗೆ ವಿಸ್ತೃತವಾಗಿ ವಾದ ಮಂಡನೆ ಮಾಡಬೇಕಿದೆ. ಇದೇ ಕಾರಣಕ್ಕೆ ಹಂಗಾಮಿ ನ್ಯಾಯಮೂರ್ತಿಗಳ ಮುಂದೆ ಇದ್ದ ಸ್ವಯಂಪ್ರೇರಿತ ಪಿಐಎಲ್ ವಿಚಾರಣೆಯನ್ನು ಗುರುವಾರಕ್ಕೆ ಮುಂದೂಡುವಂತೆ ಮನವಿ ಮಾಡಲಾಗಿದೆ.

ನಮ್ಮ ಅಧಿಕಾರಿಗಳು ಬೆಳಗಿನ ಜಾವದವರೆಗೆ ಕೆಲಸ ಮಾಡಿದ್ದಾರೆ. ಎಲ್ಲವನ್ನೂ ಕಪ್ಪು-ಬಿಳುಪಿನ ಮಾದರಿಯಲ್ಲಿ ಪೀಠದ ಮುಂದೆ ಇಡಲಾಗುವುದು. ಇದಕ್ಕೆ ಸಿದ್ಧತೆ ನಡೆಸಬೇಕಿದೆ. ಹೀಗಾಗಿ, ವಿಚಾರಣೆಯನ್ನು ನಾಳೆಗೆ ಮುಂದೂಡಬೇಕು ಎಂದು ಕೋರಿದರು.

# ಜಾತಿಗಣತಿ ವರದಿಗೆ ತಾತ್ವಿಕ ಒಪ್ಪಿಗೆ, ಸಮೀಕ್ಷೆ ಮರುಗಣತಿಗೆ ನಿರ್ಧಾರ: ಸಿಎಂ ಸಿದ್ದರಾಮಯ್ಯ

**ನವದೆಹಲಿ, ಜೂ.10:** ಜಾತಿಗಣತಿ ವರದಿ ಬಗ್ಗೆ ಅಪಸ್ವರ ಎದ್ದಿರುವ ಹಿನ್ನಲೆಯಲ್ಲಿ, ಈಗಾಗಲೇ ಸಲ್ಲಿಕೆಯಾಗಿರುವ ಜಾತಿಗಣತಿ ವರದಿಗೆ ತಾತ್ವಿಕ ಒಪ್ಪಿಗೆ ನೀಡಿ, ಸಮೀಕ್ಷೆಗೆ ಮರುಗಣತಿ ನಡೆಸಲು ನಿರ್ಧಾರ ಕೈಗೊಂಡಿರುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಇಂದು ನವದೆಹಲಿಯ ಕರ್ನಾಟಕ ಭವನದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.

ಕರ್ನಾಟಕದಲ್ಲಿ ನಡೆಯುತ್ತಿರುವ ರಾಜಕೀಯ ಬೆಳವಣಿಗೆಗಳ ಬಗ್ಗೆ ಕಾಂಗ್ರೆಸ್ ಪಕ್ಷದ ವರಿಷ್ಠರೊಂದಿಗೆ ಚರ್ಚಿಸಲಾಗಿದೆ. ವಿವಿಧ ಜಾತಿಗಳ ಸಂಘಸಂಸ್ಥೆಗಳು, ಮಠಾಧೀಶರು, ಸಮುದಾಯದಗಳ ಮುಖಂಡರು, ಸಚಿವರು ಜಾತಿಗಣತಿ ವರದಿ ಬಗ್ಗೆ ಅಪಸ್ವರ ಎತ್ತಿರುವ ಬಗ್ಗೆ ಚರ್ಚಿಸಲಾಗಿ, ಜಾತಿಗಣತಿ ವರದಿಯನ್ನು ತಾತ್ವಿಕವಾಗಿ ಒಪ್ಪಿಕೊಳ್ಳುವುದು ಹಾಗೂ ಜಾತಿ ಗಣತಿಯ ದತ್ತಾಂಶ ಹತ್ತು ವರ್ಷ ಹಳೆಯದಾಗಿರುವುದರಿಂದ ಮರುಗಣತಿ ಮಾಡಲು ತೀರ್ಮಾನಿಸಲಾಗಿದೆ. ಈಗಾಗಲೇ ಪರಿಶಿಷ್ಟ ಜಾತಿಗಳ ಜನಗಣತಿ ನಡೆದಂತೆ, ಇತರೆ ಜಾತಿಗಳ ಗಣತಿಯನ್ನು ಹೊಸದಾಗಿ ಕೈಗೊಳ್ಳಲು ನಿರ್ಧರಿಸಲಾಗಿದೆ. ಸಮೀಕ್ಷಾ ಕಾರ್ಯವನ್ನು 90 ದಿನದೊಳಗೆ ಪೂರ್ಣಗೊಳಿಸಿ ವರದಿ ನೀಡಬೇಕಾಗುವುದು ಎಂದು ತಿಳಿಸಿದರು.

**ಕಾಲ್ತುಳಿತ ಪ್ರಕರಣ:** ಸರ್ಕಾರದ ಕ್ರಮಗಳ ಬಗ್ಗೆ ವರಿಷ್ಠರಿಗೆ ವಿವರಣೆ

ಬೆಂಗಳೂರಿನಲ್ಲಿ ಇತ್ತೀಚೆಗೆ ನಡೆದ ಕಾಲ್ತುಳಿತ ಪ್ರಕರಣದ ಬಗ್ಗೆ ಚರ್ಚಿಸಿ, ಸರ್ಕಾರ ತೆಗೆದುಕೊಂಡ ಕ್ರಮಗಳ ಬಗ್ಗೆ ವರಿಷ್ಠರಿಗೆ ವಿವರಿಸಲಾಗಿದೆ. ಪ್ರಕರಣದ ತನಿಖೆಗೆ ಜಿಲ್ಲಾಧಿಕಾರಿಗಳ ನೇತೃತ್ವದ ಮ್ಯಾಜಿಸ್ಟ್ರಿಯಲ್ ತನಿಖೆ, ನಿವೃತ್ತ ನ್ಯಾಯಮೂರ್ತಿ ನೇತೃತ್ವದ ಏಕಸದಸ್ಯ ಆಯೋಗ ರಚನೆ ಮೈಕೆಲ್ ಡಿ'ಕುನ್ಹಾ, ಐದು ಪೊಲೀಸ್ ಅಧಿಕಾರಿಗಳ ಅಮಾನತು , ಗುಪ್ತಚರ ಇಲಾಖೆಯ ಮುಖ್ಯಸ್ಥರ ಬದಲಾವಣೆ , ರಾಜಕೀಯ ಕಾರ್ಯದರ್ಶಿಗಳ ಬದಲಾವಣೆಯಂತಹ ಸರ್ಕಾರದ ಕ್ರಮಗಳು ಸಮರ್ಪಕವಾಗಿರುವ ಬಗ್ಗೆ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಏಕಸದಸ್ಯ ಆಯೋಗದ ತನಿಖಾ ವರದಿಯನ್ನು ಆಧರಿಸಿ, ತಪ್ಪಿತಸ್ಥರ ಮೇಲೆ ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು ಎಂದು ತಿಳಿಸಿದರು.



**ಸಚಿವ ಸಂಪುಟ ಪುನಾರಚನೆಯ ಬಗ್ಗೆ ಚರ್ಚೆಯಾಗಿಲ್ಲ**

ಇದೇ ತಿಂಗಳ 13 ರಂದು 16 ನೇ ಹಣಕಾಸಿನ ಆಯೋಗದ ಅಧ್ಯಕ್ಷರನ್ನು ಭೇಟಿಯಾಗಲು ನವದೆಹಲಿಗೆ ಆಗಮಿಸಲಿದ್ದೇನೆ. ಸಚಿವ ಸಂಪುಟ ಪುನರ್‌ರಚನೆಯ ಬಗ್ಗೆ ಯಾವುದೇ ಚರ್ಚೆಯಾಗಿಲ್ಲ ಎಂದರು.

ಕುಂಭಮೇಳದ ಕಾಲ್ತುಳಿತ ಘಟನೆ- ಅಲ್ಲಿನ ಸಿಎಂ ಜವಾಬ್ದಾರರಲ್ಲವೇ

ಕೇಂದ್ರದ ಸಂಸತ್ ನಲ್ಲಿ ಬೆಂಗಳೂರಿನ ಕಾಲ್ತುಳಿತದ ಘಟನೆ ಚರ್ಚೆಗೆ ಬರುವ ಸಾಧ್ಯತೆಯಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಕೇಂದ್ರ ಸರ್ಕಾರ ಮೊದಲು ಕುಂಭಮೇಳದಲ್ಲಿ ನಡೆದ ಕಾಲ್ತುಳಿತ , ಪ್ರಧಾನಿಯವರು ಉದ್ಘಾಟಿಸಿದ ಸೇತುವೆ ಕುಸಿದು ಜನ ಮೃತಪಟ್ಟ ಘಟನೆಯ ಬಗ್ಗೆ ಸಂಸತ್ತಿನಲ್ಲಿ ಚರ್ಚೆ ನಡೆಯಲಿ. ಬೆಂಗಳೂರಿನಲ್ಲಿ ನಡೆದ ಘಟನೆ ನಡೆದಿರುವುದಕ್ಕೆ ಸರ್ಕಾರಕ್ಕೆ ದುಃಖದ ಸಂಗತಿಯಾಗಿದೆ. ಯುವಜನರ ಸಾವು ಎಲ್ಲರಿಗೂ ನೋವು ತರುವ ವಿಚಾರ. ಕುಂಭಮೇಳದ ಘಟನೆಯಲ್ಲಿ ಜನರ ಸಾವು ಪ್ರಕರಣದಲ್ಲಿ ಮುಖ್ಯಮಂತ್ರಿ ಯೋಗಿ ಆದಿತ್ಯನಾಥರ ಜವಾಬ್ದಾರಿಯಲ್ಲವೇ ಎಂದು ಪ್ರಶ್ನಿಸಿದರು. ಇಡಿ ತನಿಖಾ ಸಂಸ್ಥೆ 100ಕೋಟಿ ಮೌಲ್ಯದ ಆಸ್ತಿಯನ್ನು ಮುಟ್ಟುಗೋಲು ಹಾಕಿಕೊಂಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಕಾನೂನು ಕ್ರಮ ತೆಗೆದುಕೊಂಡಿರುವುದಕ್ಕೆ ಯಾವುದೇ ಆಕ್ಷೇಪವಿಲ್ಲ ಎಂದರು.

# ಲೋಕಸಭಾ ಉಪಸಭಾಪತಿ ನೇಮಕ ಮಾಡಲು ಪ್ರಧಾನಿಗೆ ಖರ್ಗೆ ಒತ್ತಾಯ

**ನವದೆಹಲಿ, ಜೂ.10:** ಸತತ ಎರಡು ಅವಧಿಗಳಿಂದ ಖಾಲಿ ಇರುವ ಲೋಕಸಭೆಯ ಉಪಸಭಾಪತಿ ಹುದ್ದೆಯನ್ನು ನೇಮಕ ಮಾಡುವ ಪ್ರಕ್ರಿಯೆಯನ್ನು ತಕ್ಷಣವೇ ಪ್ರಾರಂಭಿಸುವಂತೆ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮಂಗಳವಾರ ಪ್ರಧಾನಿ ನರೇಂದ್ರ ಮೋದಿಯವರನ್ನು ಒತ್ತಾಯಿಸಿದರು.

ಮೊದಲನೆ ಲೋಕಸಭೆಯಿಂದ ಹದಿನಾರನೇ ಲೋಕಸಭೆಯವರೆಗೆ ಪ್ರತಿ ಸದನವು ಉಪಸಭಾಪತಿಯನ್ನು ಹೊಂದಿತ್ತು ಮತ್ತು ಪ್ರಮುಖ ವಿರೋಧ ಪಕ್ಷದ ಸದಸ್ಯರಿಂದ ಉಪಸಭಾಪತಿಯನ್ನು ನೇಮಿಸುವುದು ದೀರ್ಘಕಾಲದ ಸಂಪ್ರದಾಯವಾಗಿದೆ ಎಂದು ಖರ್ಗೆ ಪ್ರಧಾನಿಗೆ ಬರೆದ ಪತ್ರದಲ್ಲಿ ಎತ್ತಿ ತೋರಿಸಿದ್ದಾರೆ. ಆದಾಗ್ಯೂ, ಸ್ವತಂತ್ರ ಭಾರತದ ಇತಿಹಾಸದಲ್ಲಿ ಮೊದಲ ಬಾರಿಗೆ, ಈ ಸ್ಥಾನವು ಸತತ ಎರಡು ಅವಧಿಗಳಿಗೆ ಖಾಲಿಯಾಗಿದೆ. ಹದಿನೇಳನೇ ಲೋಕಸಭೆಯ ಅವಧಿಯಲ್ಲಿ ಯಾವುದೇ ಉಪಸಭಾಪತಿ ಆಯ್ಕೆ ಮಾಡಲಾಗಿಲ್ಲ, ಮತ್ತು ಈ ಪೂರ್ವ ನಿದರ್ಶನವು ಪ್ರಸ್ತುತ ಹದಿನೆಂಟನೇ ಲೋಕಸಭೆಯಲ್ಲೂ ಮುಂದುವರೆದಿದೆ ಎಂದು ಖರ್ಗೆ ಹೇಳಿದರು.



ಈ ನಿರ್ಣಾಯಕ ಸಾಂವಿಧಾನಿಕ ಹುದ್ದೆಯ ಖಾಲಿ ಹುದ್ದೆಯು ಸಂಸದೀಯ ಸಂಪ್ರದಾಯಗಳಿಗೆ ವಿರುದ್ಧವಾಗಿದೆ ಮಾತ್ರವಲ್ಲದೆ ಸಂವಿಧಾನದ ನಿಬಂಧನೆಗಳನ್ನು ಉಲ್ಲಂಘಿಸುತ್ತದೆ ಎಂದು ಅವರು ಒತ್ತಿ ಹೇಳಿದರು. ಇದು ಭಾರತದ ಪ್ರಜಾಪ್ರಭುತ್ವ ರಾಜಕೀಯಕ್ಕೆ ಒಳ್ಳೆಯ ಶಕುನವಲ್ಲ ಮತ್ತು ನಮ್ಮ ಸಂಸದೀಯ ಪ್ರಜಾಪ್ರಭುತ್ವದ ಗೌರವಾನ್ವಿತ ಸಂಪ್ರದಾಯಗಳನ್ನು ಹಾಳು ಮಾಡುತ್ತದೆ" ಎಂದು ಖರ್ಗೆ ಪತ್ರದಲ್ಲಿ ತಿಳಿಸಿದ್ದಾರೆ. ಲೋಕಸಭೆಯ ಉಪಸಭಾಪತಿಯನ್ನು ಆಯ್ಕೆ ಮಾಡುವ ಪ್ರಕ್ರಿಯೆಯನ್ನು ತ್ವರಿತವಾಗಿ ಪ್ರಾರಂಭಿಸುವ ಮೂಲಕ ಸದನದ ಪ್ರಜಾಪ್ರಭುತ್ವ ನೀತಿ ಮತ್ತು ಸಂಪ್ರದಾಯಗಳನ್ನು ಎತ್ತಿಹಿಡಿ ಯುವಂತೆ ಅವರು ಪ್ರಧಾನಿಯನ್ನು ಒತ್ತಾಯಿಸಿದರು.

# ಕಾಲ್ತುಳಿತ: ಸರ್ಕಾರದ ಪ್ರತಿಕ್ರಿಯೆ ಬಂದ ಬಳಿಕ ಮಧ್ಯಂತರ ಅರ್ಜಿ ಬಗ್ಗೆ ತೀರ್ಮಾನ

**ಬೆಂಗಳೂರು,ಜೂ10:**ವಿಜಯೋತ್ಸವದ ವೇಳೆ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಸಂಭವಿಸಿದ ಕಾಲ್ತುಳಿತದಲ್ಲಿ ಆರ್ಸಿಬಿಯ 11 ಅಭಿಮಾನಿಗಳ ಸಾವು ಸಂಬಂಧ ಸ್ವಯಂಪ್ರೇರಿತ ಪ್ರಕರಣ ದಾಖಲಿಸಿಕೊಂಡ ಹೈಕೋರ್ಟ್ ಸರ್ಕಾರದ ಪ್ರತಿಕ್ರಿಯೆ ಬಂದ ಬಳಿಕ ಮಧ್ಯಂತರ ಅರ್ಜಿ ಬಗ್ಗೆ ತೀರ್ಮಾನ ಕೈಗೊಳ್ಳಲಾಗುವುದು ಎಂದು ಯಾವುದೇ ನಿರ್ದೇಶನ ನೀಡದೇ ಅರ್ಜಿಗಳ ವಿಚಾರಣೆಯನ್ನು ಜೂ.12 ಮಧ್ಯಾಹ್ನ 2.30ಕ್ಕೆ ಮುಂದೂಡಿದೆ. ದುರಂತದ ಬಳಿಕ ಯಾವುದೇ ಪ್ರಕರಣಗಳನ್ನು ದಾಖಲಾಗಿರಲಿಲ್ಲ. ಹೈಕೋರ್ಟ್‌ಗೆ ಸ್ವಯಂಪ್ರೇರಿತವಾಗಿ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ದಾಖಲಿಸಿಕೊಂಡಿತ್ತು. ಹಲವರಿಂದ ಹೈಕೋರ್ಟ್‌ಗೆ ಮಧ್ಯಂತರ ಅರ್ಜಿ ವಿಚಾರಣೆಗೆ ಮನವಿ ಹಿನ್ನೆಲೆಯಲ್ಲಿ ನ್ಯಾ.ವಿ. ಕಾಮೇಶ್ವರ ರಾವ್ ಮತ್ತು ನ್ಯಾ.ಸಿ.ಎಂ.ಜೋಶಿ ಅವರ ಪೀಠದಿಂದ ಇಂದು ವಿಚಾರಣೆ ಮಾಡಿದ್ದು, ಸರ್ಕಾರದ ಪ್ರತಿಕ್ರಿಯೆ ಬಂದ ಬಳಿಕ ತೀರ್ಮಾನ ನೀಡುವುದಾಗಿ ಹೇಳಿ ಜೂ.12 ಮಧ್ಯಾಹ್ನ 2.30ಕ್ಕೆ ವಿಚಾರಣೆಯನ್ನು ಮುಂದೂಡಲಾಗಿದೆ. ಜೂನ್ 5ರಂದು ನಡೆದ ವಿಚಾರಣೆಯಲ್ಲಿ ಘಟನೆಯ ಸಂಪೂರ್ಣ ವರದಿ ಸಲ್ಲಿಸುವಂತೆ ಸರ್ಕಾರಕ್ಕೆ ಕೋರ್ಟ್ ಸೂಚಿಸಿತ್ತು. ಆದರೆ ಸರ್ಕಾರ ಯಾವುದೇ ವರದಿ ಸಲ್ಲಿಸಿಲ್ಲ. ವಿಚಾರಣೆ ವೇಳೆ ಸರ್ಕಾರದಿಂದ ಇನ್ನೂ ವರದಿ ಏಕೆ ಸಲ್ಲಿಸಿಲ್ಲ ಎಂದು ಹೈಕೋರ್ಟ್ ಪ್ರಶ್ನೆ ಮಾಡಿದೆ. ಮ್ಯಾಜಿಸ್ಟೀರಿಯಲ್ ತನಿಖೆ, ನ್ಯಾಯಾಂಗ ತನಿಖೆ ವರದಿ ಸಲ್ಲಿಸುತ್ತೇವೆ. ತನಿಖೆಗೆ ಮೊದಲೇ ಸರ್ಕಾರ ತೀರ್ಮಾನಿಸಿದೆ ಎಂದು ವಿವಾದ ಬೇಡ. ಹೀಗಾಗಿ ಒಂದು ತಿಂಗಳು ಕಾಲಾವಕಾಶ ನೀಡುವಂತೆ ಎಜಿ ಶಶಿಕಿರಣ್ ಶೆಟ್ಟಿ ಮನವಿ ಮಾಡಿದರು. ಜೂನ್ 12ರೊಳಗೆ ಮುಚ್ಚಿದ ಲಕೋಟೆಯಲ್ಲಿ ವರದಿ ನೀಡುವಂತೆ ಹೈಕೋರ್ಟ್ ಸೂಚಿಸಿದೆ.

# ಜಾತಿಗಣತಿ ವಿಚಾರವಾಗಿ ಎದ್ದಿರುವ ಅಪಸ್ವರ, ಗೊಂದಲ ನಿವಾರಣೆಗೆ ಮತ್ತೆ ಅವಕಾಶ: ಡಿಸಿಎಂ ಡಿಕೆಶಿ

**ನವದೆಹಲಿ,ಜೂ.10:** ಜಾತಿ ಗಣತಿ ವಿಚಾರವಾಗಿ ಎದ್ದಿರುವ ಅಪಸ್ವರ, ಸಮುದಾಯಗಳ ಅಂಕಿಅಂಶಗಳ ಬಗ್ಗೆ ಇರುವ ಗೊಂದಲ ನಿವಾರಣೆಗೆ ತೀರ್ಮಾನಿಸಲಾಗಿದೆ. ಮನೆ ಮನೆ ಸಮೀಕ್ಷೆ ಹಾಗೂ ಆನ್‌ಲೈನ್ ಮೂಲಕ ಎಲ್ಲರೂ ತಮ್ಮ ಮಾಹಿತಿಯನ್ನು ಮತ್ತೊಮ್ಮೆ ಸಲ್ಲಿಸಲು ಅವಕಾಶ ನೀಡಲಾಗುವುದು. ಈ ಪ್ರಕ್ರಿಯೆಯನ್ನು ಪಾರದರ್ಶಕವಾಗಿ ನಡೆಸಲಾಗುವುದು ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ನವದೆಹಲಿಯಲ್ಲಿ ಎಐಸಿಸಿ ನಾಯಕರ ಸಭೆ ಬಳಿಕ ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಶಿವಕುಮಾರ್ ಅವರು ಮಾಧ್ಯಮಗಳ ಜತೆ ಮಂಗಳವಾರ ಮಾತನಾಡಿದರು.

ಮಂಗಳವಾರದಂದು ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ, ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ವೇಣುಗೋಪಾಲ್ ಹಾಗೂ ರಣದೀಪ್ ಸಿಂಗ್ ಸುರ್ಜೇವಾಲ ಅವರು ನನ್ನನ್ನು ಹಾಗೂ ಮುಖ್ಯಮಂತ್ರಿಗಳನ್ನು ಕರೆಸಿ ಪಕ್ಷ ಸಂಘಟನೆ ವಿಚಾರವಾಗಿ, ರಾಜ್ಯ ರಾಜಕಾರಣ ಹಾಗೂ ಇತ್ತೀಚಿನ ಕಾಲ್ತುಳಿತ ಪ್ರಕರಣದ ಬಗ್ಗೆ ಚರ್ಚೆ ಮಾಡಲಾಯಿತು ಎಂದು ಹೇಳಿದರು.

ಜಾತಿಗಣತಿ ವಿಚಾರವಾಗಿ ಇದೇ ತಿಂಗಳ 12ರಂದು ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ ಅಂತಿಮ ತೀರ್ಮಾನ ಮಾಡಲು ನಿರ್ಧರಿಸಿದ್ದೆವು. ಈ ವಿಚಾರವಾಗಿ ಸಂಸದರು, ಶಾಸಕರು, ಸಂಘ ಸಂಸ್ಥೆಗಳು ನಮ್ಮ ವರಿಷ್ಠರ ಜತೆ ಚರ್ಚೆ ಮಾಡಿದ್ದಾರೆ. ಕೆಲವು ಸಂಘಟನೆ ಹಾಗೂ ಸಮಾಜಗಳಿಂದ ಈ ಜಾತಿ ಗಣತಿಗೆ ಅಪಸ್ವರ ಬಂದಿರುವ ಹಿನ್ನೆಲೆಯಲ್ಲಿ ಎಲ್ಲರಿಗೂ



ನ್ಯಾಯಬದ್ಧವಾಗಿ ಅವಕಾಶ ಕಲ್ಪಿಸಿಕೊಡಬೇಕು ಎಂದು ವರಿಷ್ಠರು ನಮಗೆ ಮಾರ್ಗದರ್ಶನ ನೀಡಿದ್ದಾರೆ. ಈ ಜಾತಿ ಗಣತಿಯಲ್ಲಿ ಯಾರನ್ನೂ ಬಿಡಬಾರದು, ಎಲ್ಲರನ್ನು ಒಳಗೊಳ್ಳಬೇಕು ಎಂದು ತೀರ್ಮಾನಿಸಲಾಗಿದೆ. ಯಾರ ಅಪಸ್ವರವೂ ಇಲ್ಲದಂತೆ ನೋಡಿಕೊಳ್ಳಲು ಮುಖ್ಯಮಂತ್ರಿಗಳಿಗೆ ನಿರ್ದೇಶನ ನೀಡಿದ್ದಾರೆ ಎಂದು ಮಾಹಿತಿ ನೀಡಿದರು.

ಸಾಮಾಜಿಕ ನ್ಯಾಯದ ಬಗ್ಗೆ ಸರ್ಕಾರದ ಬದ್ಧತೆ ಇದೆ. ಜಾತಿಗಣತಿಯಲ್ಲಿ ಅಂಕಿ ಅಂಶಗಳ ಬಗ್ಗೆ ಅನೇಕ ಸಮಾಜಗಳು ಅಪಸ್ವರ ಎತ್ತಿದ್ದು, ಈ ಬಗ್ಗೆ ಎಲ್ಲರಿಗೂ ಸ್ಪಷ್ಟನೆ ನೀಡಲು ಅವಕಾಶ ಮಾಡಿಕೊಡಬೇಕು ಎಂದು ತೀರ್ಮಾನಿಸಲಾಗಿದೆ. ಸಾರ್ವಜನಿಕರು ನ್ಯಾಯಬದ್ಧವಾಗಿ ಯಾವ ಸಮಾಜಕ್ಕೆ ಸೇರಿದ್ದೀರಿ ಎಂಬುದನ್ನು ವ್ಯಕ್ತಪಡಿಸಿಕೊಳ್ಳಬೇಕು. ಈ ಅವಕಾಶವನ್ನು ಎಲ್ಲರೂ ಬಳಸಿಕೊಳ್ಳಬೇಕು. ಸಮಾಜದ ಮುಖಂಡರು ಹಾಗೂ ಮಠಾಧೀಶರು ಇದಕ್ಕೆ ಸಹಕರಿಸಬೇಕು ಎಂದು ಮನವಿ ಮಾಡಿದರು. ಕಳೆದ ಎರಡು ತಿಂಗಳಿನಿಂದ ಒಳಮೀಸಲಾತಿ ವಿಚಾರವಾಗಿ ಪರಿಶಿಷ್ಟ ಜಾತಿ ಅವರ ಜನಗಣತಿ ಮಾಡುತ್ತಿದ್ದೇವೆ. ಹೀಗಾಗಿ ಈ ಪ್ರಕ್ರಿಯೆ ಸುದೀರ್ಘವಾಗಿ ನಡೆಯುವುದರಿಂದ ಇದನ್ನು ಸಂಪುಟದಲ್ಲಿ ಚರ್ಚಿಸಿ ತೀರ್ಮಾನ ಮಾಡುತ್ತೇವೆ. ನಾವು ಎಲ್ಲರನ್ನು ವಿಶ್ವಾಸಕ್ಕೆ ಪಡೆದು ಎಲ್ಲರಿಗೂ ನ್ಯಾಯ ಒದಗಿಸಿಕೊಡಲಾಗುವುದು. ಇದರಲ್ಲಿ ಯಾವುದೇ ಆತಂಕ ಬೇಡ. ನಮ್ಮ ಈ ಪ್ರಯತ್ನದ ಮೂಲಕ ಜಾತಿಗಣತಿ ವಿಚಾರವಾಗಿ ಇರುವ ಅಪಸ್ವರವನ್ನು ಸರಿಪಡಿಸಲಾಗುವುದು. ನಮ್ಮ ರಾಜ್ಯದವರು ಎಲ್ಲೇ ಇದ್ದರೂ ಈ ಬಗ್ಗೆ ಆನ್ಲೈನ್ ಮೂಲಕ ಮಾಹಿತಿ ನೀಡಲು ಅವಕಾಶ ಕಲ್ಪಿಸಲಾಗುವುದು ಎಂದು ತಿಳಿಸಿದರು. ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಚರ್ಚೆಯಾಯಿತೇ ಎಂದು ಕೇಳಿದಾಗ, ಈ ವಿಚಾರವಾಗಿ ಚರ್ಚೆ ಮಾಡಲಾಯಿತು. ಈ ದುರ್ಘಟನೆಯನ್ನು ನಮ್ಮ ಪಕ್ಷ ಗಂಭೀರವಾಗಿ ಪರಿಗಣಿಸಿದೆ. ಪ್ರಕರಣದ ಬಗ್ಗೆ ವರಿಷ್ಠರಿಗೆ ಸಂಪೂರ್ಣ ಮಾಹಿತಿ ನೀಡಿ ಸತ್ಯಾಸತ್ಯತೆಯನ್ನು ವಿವರಿಸಿದ್ದೇವೆ ಎಂದು ತಿಳಿಸಿದರು.

ಸಚಿವ ಸಂಪುಟ ಮರುವಿಂಗಡಣೆ ಬಗ್ಗೆ ಚರ್ಚೆಯಾಯಿತೇ ಎಂದು ಕೇಳಿದಾಗ, ಈ ವಿಚಾರವಾಗಿ ಯಾವುದೇ ಚರ್ಚೆ ಆಗಿಲ್ಲ ಎಂದು ತಿಳಿಸಿದರು. ವಿಧಾನ ಪರಿಷತ್ ಸ್ಥಾನಕ್ಕೆ ನಾಮನಿರ್ದೇಶನದ ಬಗ್ಗೆ ಕೇಳಿದಾಗ, ಈ ವಿಚಾರವಾಗಿ ಹೈಕಮಾಂಡ್ ಪರಿಶೀಲಿಸಿ ಮುಖ್ಯಮಂತ್ರಿಗಳಿಗೆ ಮಾಹಿತಿ ನೀಡಲಿದೆ ಎಂದು ತಿಳಿಸಿದರು.

# ಭಾರತದ ಗಗನಯಾತ್ರಿ ಶುಭಾಂಶು ಶುಕ್ಲಾ ಇಂದು ಬಾಹ್ಯಾಕಾಶ ಯಾತ್ರೆ

**ನವದೆಹಲಿ, ಜೂ.10:** ಫ್ಲೋರಿಡಾದ ಕೆನಡಿ ಬಾಹ್ಯಾಕಾಶ ಕೇಂದ್ರದಿಂದ ಸ್ಪೇಸ್‌ಎಕ್ಸ್ನ ಫಾಲ್ಕನ್-9 ಉಪಗ್ರಹ ಬುಧವಾರ ಸಂಜೆ ಉಡಾವಣೆಗೊಳ್ಳಲಿದೆ. ಭಾರತೀಯ ಗಗನಯಾತ್ರಿ ಶುಭಾಂಶು ಶುಕ್ಲಾ ಬಾಹ್ಯಾಕಾಶ ಯಾತ್ರೆ ಆರಂಭಿಸಲಿದ್ದಾರೆ.

ಶುಕ್ಲಾ ಅವರ ಜೊತೆಗೆ ಇತರೆ ಮೂವರು ಗಗನಯಾತ್ರಿಗಳು ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಪ್ರಯಾಣ ಬೆಳೆಸಲು ಸಿದ್ಧರಾಗಿದ್ದಾರೆ. 1984 ರಲ್ಲಿ ಸೋವಿಯತ್ ರಷ್ಯಾದ ಸೋಯುಜ್ ಬಾಹ್ಯಾಕಾಶ ನೌಕೆಯಲ್ಲಿ ಬಾಹ್ಯಾಕಾಶಕ್ಕೆ ಪ್ರಯಾಣ ಬೆಳೆಸುವ ಮೂಲಕ ರಾಕೇಶ್ ಶರ್ಮಾ ಇತಿಹಾಸ ಬರೆದಿದ್ದರು. 41 ವರ್ಷಗಳ ನಂತರ ಶುಕ್ಲಾ ಅವರು ಇತಿಹಾಸ ಬರೆಯಲು ಸಜ್ಜಾಗಿದ್ದಾರೆ.

ಲಖನೌದವರಾದ ಶುಕ್ಲಾ, ಆಕ್ಸಿಯಮ್ ಸ್ಪೇಸ್‌ನ ಇಸ್ರೋ-ನಾಸಾ ಬೆಂಬಲಿತ ವಾಣಿಜ್ಯ ಬಾಹ್ಯಾಕಾಶ ಹಾರಾಟದ ಭಾಗವಾಗಿದ್ದಾರೆ. ಫ್ಲೋರಿಡಾದ ಕೆಎಸ್ಸಿಯ ಲಾಂಚ್ ಕಾಂಪ್ಲೆಕ್ಸ್ 39ಎ ನಿಂದ ಲಿಫ್ಟ್-ಆಫ್ ಮಾಡಲು ಹೊಂದಿಸಲಾದ ಆಕ್ಸಿಯಮ್-4 (ಆಕ್ಸ್-4) ಕಾರ್ಯಾಚರಣೆಯಲ್ಲಿ ಕಮಾಂಡರ್ ಪೆಗ್ಗಿ ವಿಟ್ಸನ್, ಪೈಲಟ್ ಶುಕ್ಲಾ, ತಜ್ಞರಾದ ಹಂಗೇರಿಯ ಟಿಗೋರ್ ಕಾಪು ಮತ್ತು ಪೋಲೆಂಡ್‌ನ ಸ್ಲಾವೋಸ್ಜ್ ಉಜ್ನಾನ್ಸ್ಕಿ ಇದ್ದಾರೆ.

ಭಾನುವಾರ ಉಡಾವಣೆಗೆ ಮುನ್ನ ಆಕ್ಸ್-4 ಸಿಬ್ಬಂದಿ ಮತ್ತು ಸ್ಪೇಸ್‌ಎಕ್ಸ್ ತಂಡಗಳು ಉಡಾವಣಾ ದಿನದ ಚಟುವಟಿಕೆಗಳ ಸಂಪೂರ್ಣ ಪೂರ್ವಾಭ್ಯಾಸವನ್ನು ಪೂರ್ಣಗೊಳಿಸಿವೆ. ಇದು ಭಾರತದ ಬಾಹ್ಯಾಕಾಶ ಸಾಮರ್ಥ್ಯಗಳ ಹೆಮ್ಮೆಯ



ಜಾಗತಿಕ ಸ್ವೀಕೃತಿ. ಸ್ಥಾಪಕ ಪಿತಾಮಹರಾದ ವಿಕ್ರಮ್ ಸಾರಾಭಾಯ್ ಮತ್ತು ಸತೀಶ್ ಧವನ್ ಅವರಿಗೆ ಸಲ್ಲಿಸುವ ಗೌರವ ಎಂದು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಜಿತೇಂದ್ರ ಸಿಂಗ್ ತಿಳಿಸಿದ್ದಾರೆ. ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ 14 ದಿನಗಳ ಕಾರ್ಯಾಚರಣೆ ನಡೆಸುವ ಆಕ್ಸ್ -4 ಗಗನಯಾತ್ರಿಗಳು, ಪ್ರಧಾನಿ ನರೇಂದ್ರ ಮೋದಿ, ಶಾಲಾ ವಿದ್ಯಾರ್ಥಿಗಳು ಮತ್ತು ಬಾಹ್ಯಾಕಾಶ ಉದ್ಯಮದ ಪ್ರಮುಖರೊಂದಿಗೆ ಸಂವಹನ ನಡೆಸುವ ನಿರೀಕ್ಷೆಯಿದೆ. ಆಕ್ಸಿಯಮ್ ಮಿಷನ್ 4 ನಲ್ಲಿನ ಶುಕ್ಲಾ ಅವರ ಅನುಭವವನ್ನು 2027 ಕ್ಕೆ ಯೋಜಿಸಲಾಗಿರುವ ಗಗನಯಾನ ಕಾರ್ಯಾಚರಣೆಯಲ್ಲಿ ಉತ್ತಮವಾಗಿ ಬಳಸಿಕೊಳ್ಳಲಾಗುವುದು. ಆಕ್ಸಿಯಮ್ -4 ಕಾರ್ಯಾಚರಣೆಗಾಗಿ ಇಸ್ರೋ 550 ಕೋಟಿ ರೂ.ಗಳನ್ನು ಖರ್ಚು ಮಾಡಿದೆ.

**ಏನಿದು ಕಾರ್ಯಾಚರಣೆ:** ಸ್ಪೇಸ್‌ಎಕ್ಸ್‌ಗೆ ಸೇರಿದ ಫಾಲ್ಕಂ 9 ರಾಕೆಟ್ ಈ ಗಗನನೌಕೆಯನ್ನು ಆಗಸಕ್ಕೆ ಹೊತ್ತಯ್ಯಲಿದೆ. ಆ್ಯಕ್ಸಿಯಮ್ ಮಿಷನ್-4, 28 ಗಂಟೆ ಕಾಲ ಆಗಸದಲ್ಲಿ ಪ್ರಯಾಣಿಸಿದ್ದು, ನಂತರ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣ ತಲುಪಲಿದೆ. ಈ ಗಗನನೌಕೆಯಲ್ಲಿ ಶುಭಾಂಶು ಶುಕ್ಲಾ, ಅಮೆರಿಕಾ, ಹಂಗೇರಿ ಹಾಗೂ ಪೋಲೆಂಡ್ನ ನಾಲ್ವರು ಗಗನಯಾತ್ರಿಗಳು ಅಂತರಾಷ್ಟ್ರೀಯ ಬ್ಯಾಹಾಕಾಶಕ್ಕೆ ಪಯಣ ಬೆಳೆಸಿದ್ದಾರೆ.

ಮಂಗಳವಾರ ನಡೆಯಬೇಕಿದ್ದ ಈ ಉಪಗ್ರಹ ಉಡಾವಣೆ ಬುಧವಾರ ಹವಮಾನ ವೈಪರೀತ್ಯದಿಂದ ಮುಂದೂಡಲಾಗಿದೆ. 14 ದಿನಗಳ ಕಾಲ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಪ್ರಯೋಗಗಳನ್ನು ನಡೆಸಲಿದ್ದಾರೆ. ಪ್ರಮುಖವಾಗಿ ಬಾಹ್ಯಾಕಾಶದ ಗುರುತ್ವಾಕರ್ಷಣೆ, ಲೈಫ್, ಬಯೋಲಾಜಿಕಲ್, ಭೂಮಿ ವೀಕ್ಷಣೆ, ಮೆಟೀರಿಯಲ್ ಸೈನ್ಸ್ ಬಗ್ಗೆ ಅಧ್ಯಯನ ಸಂಶೋಧನೆ ನಡೆಯಲಿದೆ.

# ಪಾಕ್ ವಿರುದ್ಧ ಜಾಗತಿಕ ಭಯೋತ್ಪಾದನಾ ವಿರೋಧಿ ಅಭಿಯಾನ ಅಂತ್ಯ: ಸರ್ವಪಕ್ಷ ನಿಯೋಗಗಳಿಂದ ಪ್ರಧಾನಿ ಮೋದಿ ಭೇಟಿ



**ನವದೆಹಲಿ, ಜೂನ್ 10 :** ಆಪರೇಷನ್ ಸಿಂಧೂರ್ ನಂತರ ಭಯೋತ್ಪಾದನೆಯ ವಿರುದ್ಧ ಭಾರತದ ದೃಢ ನಿಲುವನ್ನು ಪ್ರಸ್ತುತಪಡಿಸಲು ಇತ್ತೀಚೆಗೆ 30 ಕ್ಕೂ ಹೆಚ್ಚು ದೇಶಗಳಿಗೆ ಭೇಟಿ ನೀಡಿದ ಏಳು ಬಹುಪಕ್ಷ ನಿಯೋಗಗಳ ಸದಸ್ಯರನ್ನು ಪ್ರಧಾನಿ ನರೇಂದ್ರ ಮೋದಿ ಮಂಗಳವಾರ ಭೇಟಿಯಾದರು.

ಭಯೋತ್ಪಾದನೆಯ ವಿರುದ್ಧ ದೇಶದ ಕಳವಳಗಳನ್ನು ಅವರು ಎಷ್ಟು ಪರಿಣಾಮಕಾರಿಯಾಗಿ ಧ್ವನಿಸಿದ್ದಾರೆ ಎಂಬುದರ ಬಗ್ಗೆ ಭಾರತಕ್ಕೆ "ಹೆಮ್ಮೆ" ಇದೆ ಎಂದು ಪ್ರಧಾನಿ ಮಾಹಿತಿ ಹಂಚಿಕೊಂಡಿದ್ದಾರೆ

"ವಿಶ್ವದಾದ್ಯಂತ ಭಾರತವನ್ನು ಪ್ರತಿನಿಧಿಸಿದ ವಿವಿಧ ನಿಯೋಗಗಳ ಸದಸ್ಯರನ್ನು ಭೇಟಿ ಮಾಡಿ, ಶಾಂತಿಗೆ ನಮ್ಮ ಅಚಲ ಬದ್ಧತೆ ಮತ್ತು ಭಯೋತ್ಪಾದನೆಯನ್ನು ನಿರ್ಮೂಲನೆ ಮಾಡುವ ತುರ್ತು ಅಗತ್ಯವನ್ನು ತಿಳಿಸಿದರು. ಅವರು ಭಾರತದ ಕಳವಳಗಳನ್ನು ಎಷ್ಟು ಪರಿಣಾಮಕಾರಿಯಾಗಿ ಧ್ವನಿಸಿದ್ದಾರೆ ಎಂಬುದರ ಬಗ್ಗೆ ನಮಗೆ ಹೆಮ್ಮೆ ಇದೆ" ಎಂದು ಪ್ರಧಾನಿ ಫಿ ನಲ್ಲಿ ಹೇಳಿದರು. ಪ್ರಧಾನ ಮಂತ್ರಿಗಳ ಅಧಿಕೃತ ನಿವಾಸ 7, ಲೋಕ ಕಲ್ಯಾಣ್ ಮಾರ್ಗದಲ್ಲಿ ಒಟ್ಟುಗೂಡಿದ ನಿಯೋಗಗಳು ತಮ್ಮ ಅನುಭವಗಳು ಮತ್ತು ಜಾಗತಿಕ ಕಾರ್ಯಕ್ರಮಗಳಿಂದ ಪ್ರತಿಕ್ರಿಯೆಯನ್ನು ಹಂಚಿಕೊಂಡವು. ವಿದೇಶಗಳಲ್ಲಿ ತಮ್ಮ ಸಭೆಗಳಲ್ಲಿ, ಭಯೋತ್ಪಾದನೆಗೆ ಭಾರತದ ಶೂನ್ಯ ಸಹಿಷ್ಣುತೆಯ ನಿಲುವನ್ನು ಅವರು ಒತ್ತಿ ಹೇಳಿದರು, ವಿಶೇಷವಾಗಿ ಭಾರತವನ್ನು ಗುರಿಯಾಗಿಸಿಕೊಂಡು ಪಾಕಿಸ್ತಾನದ ನಿರಂತರ ಬೆಂಬಲ ಮತ್ತು ಭಯೋತ್ಪಾದಕ ಜಾಲಗಳ ಬಳಕೆಯ ಬಗ್ಗೆ ಗಮನ ಸೆಳೆದರು. ಪಾಕಿಸ್ತಾನವನ್ನು ಹಣಕಾಸು ಕ್ರಿಯಾ ಕಾರ್ಯಪಡೆ ಬೂದು ಪಟ್ಟಿಗೆ ಮರು ಸೇರಿಸಬೇಕೆಂದು ಹಲವಾರು ನಿಯೋಗಗಳು ಒತ್ತಾಯಿಸಿದವು. ಇದಕ್ಕೂ ಮೊದಲು, 50ಕ್ಕೂ ಹೆಚ್ಚು ಸದಸ್ಯರನ್ನು ಒಳಗೊಂಡ ನಿಯೋಗಗಳು, ಮುಖ್ಯವಾಗಿ ಹಾಲಿ ಸಂಸತ್ ಸದಸ್ಯರು – ಸಂಘಟಿತ ರಾಜತಾಂತ್ರಿಕ ಸಂಪರ್ಕದಲ್ಲಿ ಅವರ ಪಾತ್ರಕ್ಕಾಗಿ ಕೇಂದ್ರವು ಶ್ಲಾಘಿಸಿತ್ತು. ಈ ತಂಡಗಳಲ್ಲಿ 33 ಜಾಗತಿಕ ರಾಜಧಾನಿಗಳು ಮತ್ತು ಯುರೋಪಿಯನ್ ಒಕ್ಕೂಟದ ಪ್ರಧಾನ ಕಚೇರಿಗೆ ಪ್ರಯಾಣಿಸಿದ ಮಾಜಿ ಸಂಸದರು ಮತ್ತು ರಾಜತಾಂತ್ರಿಕರು ಕೂಡ ಸೇರಿದ್ದಾರೆ. ವಿದೇಶಾಂಗ ಸಚಿವ ಎಸ್. ಜೈಶಂಕರ್ ಈ ಹಿಂದೆ ಪ್ರತಿನಿಧಿಗಳನ್ನು ಭೇಟಿಯಾಗಿ, ಜಾಗತಿಕ ವೇದಿಕೆಗಳಲ್ಲಿ ಭಾರತದ ಸ್ಥಾನವನ್ನು ವರ್ಧಿಸುವಲ್ಲಿ ಮತ್ತು ಭಯೋತ್ಪಾದನಾ ನಿಗ್ರಹ ಸಹಕಾರದ ಕಾರ್ಯತಂತ್ರದ ಅಗತ್ಯವನ್ನು ಎತ್ತಿ ತೋರಿಸುವಲ್ಲಿ ಅವರ ಕಾರ್ಯವನ್ನು ಶ್ಲಾಘಿಸಿದ್ದರು. ಪ್ರತಿಯೊಂದು ತಂಡವು ಉತ್ತರ ಅಮೆರಿಕಾ ಮತ್ತು ಯುರೋಪ್‌ನಿಂದ ಮಧ್ಯಪ್ರಾಚ್ಯ, ಆಫ್ರಿಕಾ ಮತ್ತು ಆಗ್ನೇಯ ಏಷ್ಯಾದವರೆಗೆ ನಿರ್ದಿಷ್ಟ ಪ್ರದೇಶದ ಮೇಲೆ ಕೇಂದ್ರೀಕರಿಸಿದೆ. ಭಯೋತ್ಪಾದನಾ ನಿಗ್ರಹ ಸಹಯೋಗದ ಕುರಿತು ಚರ್ಚೆಗಳ ಜೊತೆಗೆ, ನಿಯೋಗಗಳು ತಪ್ಪು ಮಾಹಿತಿ ಅಭಿಯಾನಗಳು ಮತ್ತು ಭಾರತದ ಕಾರ್ಯತಂತ್ರದ ಆದ್ಯತೆಗಳಂತಹ ವಿಷಯಗಳನ್ನು ಸಹ ಚರ್ಚಿಸಿದವು. ಪಕ್ಷಗಳ ನಡುವಿನ ಸಹಕಾರದ ಅಪರೂಪದ ಪ್ರದರ್ಶನದಲ್ಲಿ, ನಿಯೋಗಗಳ ನಾಯಕತ್ವವನ್ನು ಆಡಳಿತ ಓಆಂ ಮತ್ತು ವಿರೋಧ ಪಕ್ಷಗಳ ನಡುವೆ ಹಂಚಿಕೊಳ್ಳಲಾಯಿತು. ನಾಲ್ಕು ನಿಯೋಗಗಳನ್ನು ಆಡಳಿತ ಮೈತ್ರಿಕೂಟದ ಸದಸ್ಯರು ನೇತೃತ್ವ ವಹಿಸಿದ್ದರು – ಇಬ್ಬರು ಬಿಜೆಪಿಯಿಂದ ಮತ್ತು ತಲಾ ಒಬ್ಬರು ಜೆಡಿ(ಯು) ಮತ್ತು ಶಿವಸೇನೆಯಿಂದ. ಉಳಿದ ಮೂವರ ನೇತೃತ್ವವನ್ನು ಕಾಂಗ್ರೆಸ್, ಡಿಎಂಕೆ ಮತ್ತು ಎನ್‌ಸಿಪಿ(ಎಸ್‌ಪಿ) ನಾಯಕರು ವಹಿಸಿದ್ದರು.

ಪ್ರಮುಖ ನಿಯೋಗದ ನಾಯಕರಲ್ಲಿ ಬಿಜೆಪಿಯ ರವಿಶಂಕರ್ ಪ್ರಸಾದ್ ಮತ್ತು ಬೈಜಯಂತ್ ಪಾಂಡ್ಯ, ಕಾಂಗ್ರೆಸ್ ಸಂಸದ ಶಶಿ ತರೂರ್, ಜೆಡಿ(ಯು)ನ ಸಂಜಯ್ ಝಾ, ಶಿವಸೇನೆಯ ಶ್ರೀಕಾಂತ್ ಶಿಂಧೆ, ಡಿಎಂಕೆಯ ಕನಿಮೋಳಿ ಮತ್ತು ಎನ್‌ಸಿಪಿ(ಎಸ್‌ಪಿ)ಯ ಸುಪ್ರಿಯಾ ಸುಳೆ ಸೇರಿದ್ದಾರೆ. ಕಾಂಗ್ರೆಸ್ ಸಂಸದ ಶಶಿ ತರೂರ್ ಮತ್ತು ಎಐಎಂಐಎಂ ಸಂಸದ ಅಸಾದುದ್ದೀನ್ ಓವೈಸಿ ಅವರಂತಹ ವಿರೋಧ ಪಕ್ಷದ ವ್ಯಕ್ತಿಗಳು ಆಡಳಿತ ಮೈತ್ರಿಕೂಟದ ಪ್ರತಿನಿಧಿಗಳ ಜೊತೆಗೆ ಇರುವುದು ಭಯೋತ್ಪಾದನೆಯ ವಿಷಯದ ಬಗ್ಗೆ ಏಕೀಕೃತ ರಾಷ್ಟ್ರೀಯ ಮುಂಭಾಗವನ್ನು ಒತ್ತಿಹೇಳುತ್ತದೆ. ಏಪ್ರಿಲ್ 22 ರಂದು ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಗೆ ಪ್ರತಿಕ್ರಿಯೆಯಾಗಿ ಮೇ 7 ರಂದು ಪ್ರಾರಂಭಿಸಲಾದ ಆಪರೇಷನ್ ಸಿಂಧೂರ್ ನಂತರ ಈ ಸಂಪರ್ಕವು ನಡೆಯಿತು. ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಜಮ್ಮು ಮತ್ತು ಕಾಶ್ಮೀರದಲ್ಲಿನ ಭಯೋತ್ಪಾದಕ ಶಿಬಿರಗಳ ಮೇಲೆ ಭಾರತೀಯ ಸಶಸ್ತ್ರ ಪಡೆಗಳು ನಿಖರವಾದ ದಾಳಿಗಳನ್ನು ನಡೆಸಿ, ಜೈಶ್–ಎ–ಮೊಹಮ್ಮದ್, ಲಷ್ಕರ್–ಎ–ತೈಬಾ ಮತ್ತು ಹಿಜ್ಬುಲ್ ಮುಜಾಹಿದ್ದೀನ್ ಸಂಘಟನೆಗಳಿಗೆ ಸೇರಿದ 100 ಕ್ಕೂ ಹೆಚ್ಚು ಉಗ್ರರನ್ನು ನಿರ್ಮೂಲನೆ ಮಾಡಿವೆ.

# ಕಳೆದ 11 ವರ್ಷಗಳಲ್ಲಿ ರಕ್ಷಣಾ ವಲಯದಲ್ಲಿ ಅಭೂತಪೂರ್ವ ಬೆಳವಣಿಗೆಗೆ ಪ್ರಧಾನಿ ಶ್ಲಾಘನೆ



**ನವದೆಹಲಿ, ಜೂನ್ 10 :** ಕಳೆದ 11 ವರ್ಷಗಳಲ್ಲಿ ರಕ್ಷಣಾ ವಲಯದಲ್ಲಿ 'ಅಭೂತಪೂರ್ವ ಬೆಳವಣಿಗೆ' ಕಂಡುಬಂದಿದ್ದು, ಸ್ವಾವಲಂಬನೆ ಮತ್ತು ಆಧುನೀಕರಣವನ್ನು ಬಲಪಡಿಸಲಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಮಂಗಳವಾರ ಶ್ಲಾಘಿಸಿದ್ದಾರೆ. 'ಕಳೆದ 11 ವರ್ಷಗಳಲ್ಲಿ, ಭಾರತವು ತನ್ನ ರಕ್ಷಣಾ ವಲಯದಲ್ಲಿ ಗಮನಾರ್ಹ ಪ್ರಗತಿಯನ್ನು ಕಂಡಿದೆ, ರಕ್ಷಣಾ ಉತ್ಪಾದನೆಯಲ್ಲಿ ಆಧುನೀಕರಣ ಮತ್ತು ಸ್ವಾವಲಂಬನೆಯ ಮೇಲೆ ಸ್ಪಷ್ಟ ಗಮನ ಹರಿಸಲಾಗಿದೆ' ಎಂದು ಪ್ರಧಾನಿ ಹೇಳಿದರು. ಜನರ ಸಾಮೂಹಿಕ ಸಂಕಲ್ಪ ಮತ್ತು ರಕ್ಷಣೆಯಲ್ಲಿ ಹೆಚ್ಚಿನ ಸ್ವಾವಲಂಬನೆ ಮತ್ತು ತಾಂತ್ರಿಕ ಶ್ರೇಷ್ಠತೆಯತ್ತ ಭಾರತವನ್ನು ಮುನ್ನಡೆಸುವ ಅಚಲ ಸಂಕಲ್ಪದ ಬಗ್ಗೆ ಅವರು ಹೆಮ್ಮೆ ವ್ಯಕ್ತಪಡಿಸಿದರು.

MyGovIndia ನ ಫಿ ಪೋಸ್ಟ್‌ಗೆ ಪ್ರತಿಕ್ರಿಯಿಸಿದ ಮೋದಿ, 'ಕಳೆದ 11 ವರ್ಷಗಳಲ್ಲಿ ನಮ್ಮ ರಕ್ಷಣಾ ವಲಯದಲ್ಲಿ ಗಮನಾರ್ಹ ಬದಲಾವಣೆಗಳನ್ನು ಗುರುತಿಸಲಾಗಿದೆ, ರಕ್ಷಣಾ ಉತ್ಪಾದನೆಗೆ ಬಂದಾಗ ಆಧುನೀಕರಣ ಮತ್ತು ಸ್ವಾವಲಂಬಿಯಾಗುವುದು ಎರಡರ ಮೇಲೂ ಸ್ಪಷ್ಟ ಗಮನ ಹರಿಸಲಾಗಿದೆ. ಭಾರತವನ್ನು ಬಲಿಷ್ಠಗೊಳಿಸುವ ಸಂಕಲ್ಪದೊಂದಿಗೆ ಭಾರತದ ಜನರು ಹೇಗೆ ಒಗ್ಗೂಡಿದ್ದಾರೆ ಎಂಬುದನ್ನು ನೋಡಲು ಸಂತೋಷವಾಗುತ್ತದೆ.

# 45 ಕೋಟಿ ಮೌಲ್ಯದ ಮಾದಕ ವಸ್ತು ಜಪ್ತಿ; ನಾಲ್ವರ ಬಂಧನ



**ಗುವಾಹಟಿ, ಜೂ. 10:** ಅಸ್ಸಾಂ ಪೊಲೀಸರು ನಡೆಸಿದ ಮಾದಕ ದ್ರವ್ಯ ವಿರೋಧಿ ಕಾರ್ಯಾಚರಣೆಯಲ್ಲಿ 45 ಕೋಟಿ ಮೌಲ್ಯದ ಮಾದಕ ವಸ್ತುಗಳನ್ನು ವಶಕ್ಕೆ ಪಡೆದಿದ್ದು, ನಾಲ್ವರನ್ನು ಬಂಧಿಸಲಾಗಿದೆ ಎಂದು ಅಸ್ಸಾಂ ಸಿಎಂ ಹಿಮಂತ ಬಿಸ್ವಾ ಶರ್ಮಾ ತಿಳಿಸಿದ್ದಾರೆ. ಈ ಕುರಿತು ಹೇಳಿಕೆ ನೀಡಿರುವ ಅವರು, ಖಚಿತ ಮಾಹಿತಿಯ ಮೇರೆಗೆ ಕಚಾರ್ ಜಿಲ್ಲೆಯ ಎರಡು ಕಡೆ ದಾಳಿ ನಡೆಸಿ 45 ಕೋಟಿ ಮೌಲ್ಯದ 1.5 ಲಕ್ಷ ಯಾಬಾ ಮಾತ್ರೆಗಳನ್ನು ವಶಪಡಿಸಿಕೊಳ್ಳಲಾಗಿದೆ. ಅಲ್ಲದೇ ಮಾದಕವಸ್ತು ಮಾರಾಟ ಮಾಡುತ್ತಿದ್ದ ನಾಲ್ವರನ್ನು ಬಂಧಿಸಲಾಗಿದೆ ಎಂದು ಪೊಲೀಸರ ಕಾರ್ಯಾಚರಣೆಯನ್ನು ಶ್ಲಾಘಿಸಿದ್ದಾರೆ.

ಮಾದಕವಸ್ತು ವ್ಯಾಪಾರವು ಯುವಜನರು ಮತ್ತು ಸಮುದಾಯದ ಸುರಕ್ಷತೆಗೆ ಗಂಭೀರ ಪರಿಣಾಮ ಬೀರುತ್ತದೆ. ಈ ಹಿನ್ನೆಲೆ ನಮ್ಮ ಯುವಕರನ್ನು ರಕ್ಷಿಸುವಲ್ಲಿ ಅಸ್ಸಾಂ ಪೊಲೀಸರು ದೃಢವಾಗಿ ನಿಂತಿದ್ದಾರೆ. ಆರೋಪಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಹಿಮಂತ ಬಿಸ್ವಾ ಶರ್ಮಾ ಹೇಳಿದ್ದಾರೆ.




ಕೇಂದ್ರ ಹಂಕಾಸು ಸಚಿವೆ ನಿರ್ಮಲ ಸೀತಾರಾಮನ್ ಮುಂಬೈನಲ್ಲಿ ಮಂಗಳವಾರ ಹಣಕಾಸು ಸ್ಥಿರತೆ ಮತ್ತು ಅಭಿವೃದ್ಧಿಯ ಮಂಡಳಿಯ ಸಭೆಯನ್ನು ನಡೆಸಿದರು.

# ಭಾರತದ ವಿದ್ಯಾರ್ಥಿಗಳ ಮೇಲೆ ದೌರ್ಜನ್ಯವಾದರೂ ಮೋದಿ ಮೌನ: ಕಾಂಗ್ರೆಸ್



**ನವದೆಹಲಿ, ಜೂ. 10:** ಅಮೆರಿಕದ ವಿಮಾನ ನಿಲ್ದಾಣದಲ್ಲಿ ಭಾರತೀಯ ವಿದ್ಯಾರ್ಥಿಯೊಬ್ಬರನ್ನು ಕೈಕೋಳ ಹಾಕಿ ನೆಲಕ್ಕೆ ಒತ್ತಿಹಿಡಿದು ದೌರ್ಜನ್ಯ ಮಾಡುತ್ತಿರುವ ವಿಡಿಯೋ ಬಹಿರಂಗವಾದ ನಂತರ ಕಾಂಗ್ರೆಸ್ ಮಂಗಳವಾರ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿದೆ. ಅಮೆರಿಕದಲ್ಲಿ ಭಾರತೀಯರ ಮೇಲೆ ನಡೆಯುತ್ತಿರುವ ದೌರ್ಜನ್ಯ ವಿರುದ್ಧ ಪ್ರಧಾನಿ ನರೇಂದ್ರ ಮೋದಿ ತಕ್ಷಣ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗೆ ಮಾತನಾಡಬೇಕು ಎಂದು ಪಕ್ಷವು ಒತ್ತಾಯಿಸಿದೆ. ಅಮೆರಿಕದ ನ್ಯೂಯಾರ್ಕ್ ವಿಮಾನ ನಿಲ್ದಾಣದಲ್ಲಿ ಭಾರತೀಯ ವಿದ್ಯಾರ್ಥಿಯೊಬ್ಬನನ್ನು ಕೈಕೋಳ ಹಾಕಿ ನೆಲಕ್ಕೆ ಒತ್ತಿಹಿಡಿದು ದೌರ್ಜನ್ಯ ಮಾಡಲಾಗಿದೆ ಎಂಬ ವಿಡಿಯೋ ಮತ್ತು ಚಿತ್ರಗಳನ್ನು ಕಾಂಗ್ರೆಸ್ ನಾಯಕರು ಹಂಚಿಕೊಂಡಿದ್ದಾರೆ.

ಭಾರತೀಯ ಯುವಕನನ್ನು ಕೈಕೋಳ ಹಾಕಿ ಗಡೀಪಾರು ಮಾಡಲಾಗುತ್ತಿದೆ ಎಂಬ ವಿಡಿಯೋ ಆನ್‌ಲೈನ್‌ನಲ್ಲಿ ಕಾಣಿಸಿಕೊಂಡ ನಂತರ ನ್ಯೂಯಾರ್ಕ್‌ನಲ್ಲಿರುವ ಭಾರತೀಯ ಕಾನ್ಸುಲೇಟ್ ಜನರಲ್ ಸ್ಥಳೀಯ ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿದ್ದೇವೆ ಎಂದು ಹೇಳಿದ್ದಾರೆ ಎಂದು ಪತ್ರಿಕೆಗಳು ವರದಿ ಮಾಡಿವೆ. ನ್ಯೂವಾರ್ಕ್ ಲಿಬರ್ಟಿ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಭಾರತೀಯ ಪ್ರಜೆಯೊಬ್ಬರು ತೊಂದರೆಗಳನ್ನು ಎದುರಿಸುತ್ತಿದ್ದಾರೆ ಎಂದು ಹೇಳುವ ಸಾಮಾಜಿಕ ಮಾಧ್ಯಮ ಪೋಸ್ಟ್‌ಗಳು ನಮಗೆ ಬಂದಿವೆ. ಈ ನಿಟ್ಟಿನಲ್ಲಿ ನಾವು ಸ್ಥಳೀಯ ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿದ್ದೇವೆ ಎಂದು ಭಾರತೀಯ ಕಾನ್ಸುಲೇಟ್ ಎಕ್ಸ್‌ನಲ್ಲಿ ತಿಳಿಸಿದೆ. ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಈ ಬಗ್ಗೆ ಆಕ್ರೋಶ ವ್ಯಕ್ತಪಡಿಸಿದ್ದು, ಮೋದಿ ಸರ್ಕಾರವು ಭಾರತ ಮತ್ತು ಭಾರತೀಯರ ಗೌರವವನ್ನು ರಕ್ಷಿಸುವಲ್ಲಿ ನಿರಂತರವಾಗಿ ವಿಫಲವಾಗಿದೆ ಎಂದು ಆರೋಪಿಸಿದ್ದಾರೆ. ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ, ವಿದೇಶಿ ರಾಷ್ಟ್ರದ ಮುಖ್ಯಸ್ಥರೊಬ್ಬರು ಭಾರತದ ಅನುಪಸ್ಥಿತಿಯಲ್ಲಿ ಭಾರತ ಮತ್ತು ಪಾಕಿಸ್ತಾನದ ನಡುವೆ ಕದನ ವಿರಾಮ ಘೋಷಿಸಿದ್ದಾರೆ. ಅಮೆರಿಕ ಅಧ್ಯಕ್ಷ ಟ್ರಂಪ್ ಭಾರತದ ಮೇಲೆ ಒತ್ತಡ ಹೇರುವ ಮೂಲಕ ಕದನ ವಿರಾಮವನ್ನು ಖಚಿತಪಡಿಸಿಕೊಂಡಿರುವುದಾಗಿ ನಿರಂತರವಾಗಿ ಹೇಳಿಕೊಳ್ಳುತ್ತಿದ್ದಾರೆ ಎಂದು ರಮೇಶ್ ಅವರು ಎಕ್ಸ್‌ನಲ್ಲಿ ಹೇಳಿದ್ದಾರೆ. ಒಂದು ವರ್ಷದಿಂದ, ಅಮೆರಿಕದಲ್ಲಿ ವಾಸಿಸುವ ಭಾರತೀಯ ನಾಗರಿಕರು ಮತ್ತು ವಿದ್ಯಾರ್ಥಿಗಳನ್ನು ಪದೇ ಪದೇ ಕೆಟ್ಟದಾಗಿ ನಡೆಸಿಕೊಳ್ಳಲಾಗುತ್ತಿದೆ. ಆದರೆ ಪ್ರಧಾನಿ ಮೋದಿ ಮೌನವಾಗಿದ್ದಾರೆ ಅಥವಾ ಅವರು ಮಾತನಾಡುವ ಧೈರ್ಯವನ್ನು ಒಟ್ಟುಗೂಡಿಸಲು ಸಾಧ್ಯವಾಗುತ್ತಿಲ್ಲ ಎಂದು ಭಾವಿಸಬೇಕಿದೆ. ಅದಾಗ್ಯೂ, ಭಾರತ ಮತ್ತು ಭಾರತೀಯರ ಗೌರವವನ್ನು ರಕ್ಷಿಸುವುದು ಭಾರತದ ಪ್ರಧಾನಿಯ ಪ್ರಮುಖ ಜವಾಬ್ದಾರಿಯಾಗಿದೆ ಎಂದು ರಮೇಶ್ ಪ್ರತಿಪಾದಿಸಿದ್ದಾರೆ.

ಪ್ರಧಾನಿ ಮೋದಿ ತಕ್ಷಣ ಅಧ್ಯಕ್ಷ ಟ್ರಂಪ್ ಅವರೊಂದಿಗೆ ಮಾತನಾಡಬೇಕು ಮತ್ತು ಅಮೆರಿಕದಲ್ಲಿ ಭಾರತೀಯರ ವಿರುದ್ಧ ನಡೆಯುತ್ತಿರುವ ದೌರ್ಜನ್ಯ ಮತ್ತು ತೊಂದರೆಗಳ ಬಗ್ಗೆ ಮಧ್ಯಪ್ರವೇಶಿಸಲು ಮನವಿ ಮಾಡಬೇಕು ಎಂದು ನಾವು ಒತ್ತಾಯಿಸುತ್ತೇವೆ. ಕಾಂಗ್ರೆಸ್ ಮಾಧ್ಯಮ ಮತ್ತು ಪ್ರಚಾರ ವಿಭಾಗದ ಮುಖ್ಯಸ್ಥ ಪವನ್ ಖೇರಾ ಅವರು ಎಕ್ಸ್‌ನಲ್ಲಿ ಘಟನೆಯ ವೀಡಿಯೊವನ್ನು ಟ್ಯಾಗ್ ಮಾಡಿ ಪೋಸ್ಟ್ ಮಾಡಿದ್ದು, ಅದನ್ನು ಭಾರತೀಯ–ಅಮೆರಿಕನ್ ಸಾಮಾಜಿಕ ಉದ್ಯಮಿ ಕುನಾಲ್ ಜೈನ್ ಆನ್‌ಲೈನ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

ವಿವಾದಿತ ವೀಡಿಯೊದಲ್ಲಿ ಭಾರತೀಯ ಯುವಕನನ್ನು ವಿಮಾನ ನಿಲ್ದಾಣ ಪ್ರಾಧಿಕಾರದ ಪೊಲೀಸರು ನೆಲಕ್ಕೆ ಒತ್ತಿಹಿಡಿದು ಕೈಕೋಳ ಹಾಕಿರುವುದು ಕಾಣುತ್ತದೆ. ನಿನ್ನೆ ರಾತ್ರಿ ನ್ಯೂಯಾರ್ಕ್ ವಿಮಾನ ನಿಲ್ದಾಣದಿಂದ ಒಬ್ಬ ಯುವ ಭಾರತೀಯ ವಿದ್ಯಾರ್ಥಿಯನ್ನು ಕೈಕೋಳ ಹಾಕಿ, ಕೂಗಾಡುತ್ತಾ, ಅಪರಾಧಿಯಂತೆ ನಡೆಸಿಕೊಳ್ಳುವುದನ್ನು ನಾನು ನೋಡಿದೆ. ಆ ವಿದ್ಯಾರ್ಥಿ ತನ್ನ ಕನಸುಗಳನ್ನು ಬೆನ್ನಟ್ಟುತ್ತಾ ಬಂದವರು, ಅವರು ಯಾರಿಗೂ ಹಾನಿ ಮಾಡಲಿಲ್ಲ. ಒಬ್ಬ ಅನಿವಾಸಿ ಭಾರತೀಯನಾಗಿ, ನಾನು ಅಸಹಾಯಕನಾಗಿದ್ದು, ಹೃದಯ ಮುರಿದ ಭಾವನೆಯಿದೆ. ಇದು ಮಾನವ ದುರಂತ ಎಂದು ಜೈನ್ ತಮ್ಮ ಪೋಸ್ಟ್‌ನಲ್ಲಿ ಹೇಳಿದ್ದಾರೆ. ಜೈನ್ ಅವರ ಪೋಸ್ಟ್ ಅನ್ನು ಟ್ಯಾಗ್ ಮಾಡಿದ ಪವನ್ ಖೇರಾ, ಇದು ತುಂಬಾ ನೋವಿನ ವಿಚಾರ, ಜೊತೆಗೆ ತುಂಬಾ ಅವಮಾನಕರ ಮತ್ತು ನೋಡಲು ತುಂಬಾ ದುಃಖಕರವಾಗಿದೆ. ಒಂದು ದೇಶವಾಗಿ, ನಾವು ಈ ಅವಮಾನವನ್ನು ಏಕೆ ಸಹಿಸಿಕೊಳ್ಳಬೇಕು ಎಂದು ಕೇಳಿದ್ದಾರೆ. ದೇವಯಾನಿ ಖೋಬ್ರಗಡೆ ವಿಷಯದ ಸಮಯದಲ್ಲಿ ನಾವು ಅಮೆರಿಕಕ್ಕೆ ನಮ್ಮ ಬಲವನ್ನು ತೋರಿಸಿದ ದಿನಗಳಿಂದ ಈಗ ನಮ್ಮ ನಾಗರಿಕರನ್ನು ಪ್ರಾಣಿಗಳಂತೆ ನಡೆಸಿಕೊಳ್ಳುವುದನ್ನು ನೋಡುವವರೆಗೆ ನಡೆಯುತ್ತಿದೆ. ಜಗತ್ತಿನಲ್ಲಿ ನಮ್ಮ ಬಗ್ಗೆ ಯಾವುದೇ ಸದ್ಭಾವನೆ ಉಳಿದಿಲ್ಲವೇ ಎಂದು ಅವರು ಕೇಳಿದ್ದಾರೆ.

# ಪ್ರವಾಹ ನಿರ್ವಹಣಾ ಸನ್ನದ್ಧತೆಯನ್ನು ಪರಿಶೀಲಿಸಲು ಶಾ ಅಧ್ಯಕ್ಷತೆಯಲ್ಲಿ ದೆಹಲಿಯಲ್ಲಿ ಉನ್ನತ ಮಟ್ಟದ ಸಭೆ




**ನವದೆಹಲಿ, ಜೂನ್ 10:** ದೇಶದಲ್ಲಿ ಪ್ರವಾಹ ನಿರ್ವಹಣೆಯ ಸನ್ನದ್ಧತೆಯನ್ನು ಪರಿಶೀಲಿಸಲು ಕೇಂದ್ರ ಗೃಹ ಸಚಿವ ಅಮಿತ್ ಶಾ ಮಂಗಳವಾರ ಉನ್ನತ ಮಟ್ಟದ ಸಭೆಯ ಅಧ್ಯಕ್ಷತೆ ವಹಿಸಿ, ಪ್ರವಾಹ ನಿಯಂತ್ರಣ ಮತ್ತು ನೀರು ನಿರ್ವಹಣೆಗಾಗಿ ವಿವಿಧ ಕೇಂದ್ರ ಸಂಸ್ಥೆಗಳು ಬಾಹ್ಯಾಕಾಶ ತಂತ್ರಜ್ಞಾನವನ್ನು ಗರಿಷ್ಠವಾಗಿ ಬಳಸುವುದರ ಬಗ್ಗೆ ಒತ್ತಿ ಹೇಳಿದರು. ದೇಶದಲ್ಲಿ ಪ್ರವಾಹದ ಭೀತಿಯನ್ನು ತಗ್ಗಿಸಲು ತೆಗೆದುಕೊಳ್ಳುತ್ತಿರುವ ದೀರ್ಘಕಾಲೀನ ಕ್ರಮಗಳು ಮತ್ತು ಕಳೆದ ವರ್ಷ ನಡೆದ ಸಭೆಯಲ್ಲಿ ತೆಗೆದುಕೊಂಡ ನಿರ್ಧಾರಗಳ ಮೇಲೆ ತೆಗೆದುಕೊಂಡ ಕ್ರಮಗಳನ್ನು ಶಾ ಪರಿಶೀಲಿಸಿದರು ಎಂದು ಗೃಹ ಸಚಿವಾಲಯದ ಹೇಳಿಕೆ ತಿಳಿಸಿದೆ. ಪ್ರವಾಹ ನಿರ್ವಹಣೆ ಮತ್ತು ಅವುಗಳ ಜಾಲದ ವಿಸ್ತರಣೆಗಾಗಿ ಎಲ್ಲಾ ಸಂಸ್ಥೆಗಳು ಅಳವಡಿಸಿಕೊಂಡ ಹೊಸ ತಂತ್ರಜ್ಞಾನಗಳ ಕುರಿತು ಸಭೆಯಲ್ಲಿ ಚರ್ಚಿಸಿದರು. ಭಾರತದ ವಿಪತ್ತು ನಿರ್ವಹಣೆ 'ಶೂನ್ಯ ಅಪಘಾತ ವಿಧಾನ' ದೊಂದಿಗೆ ಮುಂದುವರಿಯುತ್ತಿದೆ ಎಂದು ಅಮಿತ್ ಶಾ ಹೇಳಿದರು. ಆರಂಭಿಕ ಎಚ್ಚರಿಕೆ ಎಚ್ಚರಿಕೆಗಳನ್ನು ತಳಮಟ್ಟಕ್ಕೆ ಪ್ರಸಾರ ಮಾಡುವುದನ್ನು ಖಚಿತಪಡಿಸಿಕೊಳ್ಳಲು ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರಗಳು ಮತ್ತು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರಗಳೊಂದಿಗೆ ಸಮನ್ವಯ ಸಾಧಿಸುವಂತೆ ಅವರು ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರಕ್ಕೆ ನಿರ್ದೇಶನ ನೀಡಿದರು ಮತ್ತು ಪ್ರವಾಹ ನಿರ್ವಹಣೆಗಾಗಿ ಓಆಒಂ ಹೊರಡಿಸಿದ ಸಲಹೆಗಳನ್ನು ಸ ಕಾ ಲಿ ಕ ವಾ ಗಿ ಅನುಷ್ಠಾನಗೊಳಿಸುವಂತೆ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಮತ್ತಷ್ಟು ಮನವಿ ಮಾಡಿದರು. ರಾಜ್ಯಗಳೊಂದಿಗೆ ಸಂಪೂರ್ಣ ಸಮನ್ವಯದೊಂದಿಗೆ ಪರಿಣಾಮಕಾರಿ ಪ್ರವಾಹ ನಿರ್ವಹಣೆಗೆ ಓಆಒಂ ಮತ್ತು ಓಆಖಈ ಕೆಲಸ ಮಾಡುವಂತೆ ಅವರು ಕೇಳಿಕೊಂಡರು.

ಪ್ರವಾಹ ಮುನ್ಸೂಚನೆ ಮತ್ತು ಸಲಹೆ ನೀಡುವ ಬಗ್ಗೆ ಸಮಯ ಮಿತಿಯನ್ನು ಹೆಚ್ಚಿಸಿದ್ದಕ್ಕಾಗಿ ಕೇಂದ್ರ ಜಲ ಆಯೋಗ ಮತ್ತು ಭಾರತ ಹವಾಮಾನ ಇಲಾಖೆ ಯನ್ನು ಗೃಹ ಸಚಿವರು ಶ್ಲಾಘಿಸುತ್ತಾ, ಮುನ್ಸೂಚನೆಗಳ ನಿಖರತೆಯ ಮಟ್ಟವನ್ನು ಹೆಚ್ಚಿಸುವ ಬಗ್ಗೆ ಒತ್ತಿ ಹೇಳಿದರು. ಅಘಅ ಯ ಪ್ರವಾಹ ಮೇಲ್ವಿಚಾರಣಾ ಕೇಂದ್ರಗಳು ಅವಶ್ಯಕತೆಗಳು ಮತ್ತು ಅಂತರರಾಷ್ಟ್ರೀಯ ಮಾನದಂಡಗಳಿಗೆ ಅನುಗುಣವಾಗಿರಬೇಕು ಎಂದು ಶಾ ಹೇಳಿದರು. ಹಿಮನದಿ ಸರೋವರಗಳನ್ನು ನಿಕಟವಾಗಿ ಮೇಲ್ವಿಚಾರಣೆ ಮಾಡಲು ಮತ್ತು ಯಾವುದೇ ರೀತಿಯ ಸ್ಫೋಟದ ಸಂದರ್ಭದಲ್ಲಿ ಸಕಾಲಿಕ ಕ್ರಮಗಳನ್ನು ತೆಗೆದುಕೊಳ್ಳಲು ಅವರು ಜಲಶಕ್ತಿ ಸಚಿವಾಲಯ, ಓಆಒಂ ಮತ್ತು ರಾಷ್ಟ್ರೀಯ ದೂರ ಸಂವೇದಿ ಕೇಂದ್ರ ಗೆ ಸಲಹೆ ನೀಡಿದರು.

ಬಿಹಾರ ಮತ್ತು ಉತ್ತರ ಪ್ರದೇಶದಲ್ಲಿ ಬಲವಾದ ಪ್ರವಾಹ ನಿರ್ವಹಣಾ ಕ್ರಮಗಳಿಗಾಗಿ ತಂತ್ರಜ್ಞಾನವನ್ನು ಬಳಸಿಕೊಂಡು ಹೊಸ ಆಯ್ಕೆಗಳನ್ನು ಅನ್ವೇಷಿಸಬೇಕು ಎಂದು ಶಾ ಹೇಳಿದರು.

ನಗರ ಪ್ರದೇಶಗಳಲ್ಲಿ ಹೆಚ್ಚುತ್ತಿರುವ ಪ್ರವಾಹದ ಘಟನೆಗಳನ್ನು ಉಲ್ಲೇಖಿಸಿದ ಶಾ, ಈ ನಗರಗಳಲ್ಲಿ ಪ್ರವಾಹ ನಿಯಂತ್ರಣಕ್ಕೆ ಅಗತ್ಯವಾದ, ಸಕಾಲಿಕ ಕ್ರಮ ಕೈಗೊಳ್ಳಲು ಮತ್ತು ದೊಡ್ಡ ನಗರಗಳಲ್ಲಿ ಪ್ರವಾಹ ನಿರ್ವಹಣೆಗೆ ಸಮಗ್ರ ಯೋಜನೆಯನ್ನು ಸಿದ್ಧಪಡಿಸಲು ಎಲ್ಲಾ ಕೇಂದ್ರ ಸಂಸ್ಥೆಗಳಿಗೆ ನಿರ್ದೇಶನ ನೀಡಿದರು. ಮಳೆಗಾಲದಲ್ಲಿ ಕಡಿಮೆ ಅವಧಿಯಲ್ಲಿ ಭಾರಿ ಮಳೆಯಾಗುವ ಪ್ರವೃತ್ತಿಯನ್ನು ಎದುರಿಸಲು ಜೌಗು ಪ್ರದೇಶ ಪುನರುಜ್ಜೀವನ ಮತ್ತು ಅರಣ್ಯೀಕರಣ ಕ್ರಮಗಳ ಮಹತ್ವವನ್ನು ಅವರು ಎತ್ತಿ ತೋರಿಸಿದರು. ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್, ಗೃಹ ವ್ಯವಹಾರಗಳ ರಾಜ್ಯ ಸಚಿವ ನಿತ್ಯಾನಂದ ರೈ, ಕೇಂದ್ರ ಗೃಹ ಕಾರ್ಯದರ್ಶಿ, ನದಿ ಅಭಿವೃದ್ಧಿ ಮತ್ತು ಗಂಗಾ ಪುನರುಜ್ಜೀವನ, ಭೂ ವಿಜ್ಞಾನ, ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ, ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯಗಳು ಮತ್ತು ಇಲಾಖೆಗಳ ಕಾರ್ಯದರ್ಶಿಗಳು, ರೈಲ್ವೆ ಮಂಡಳಿಯ ಅಧ್ಯಕ್ಷರು, ಎನ್‌ಡಿಎಂಎ ಇಲಾಖೆಗಳ ಸದಸ್ಯರು ಮತ್ತು ಮುಖ್ಯಸ್ಥರು, ಎನ್‌ಡಿಆರ್‌ಎಫ್ ಮತ್ತು ಐಎಂಡಿಯ ಮಹಾನಿರ್ದೇಶಕರು, ಎನ್‌ಎಚ್‌ಎಐ ಮತ್ತು ಸಿಡಬ್ಲ್ಯೂಸಿ ಅಧ್ಯಕ್ಷರು ಮತ್ತು ಎನ್‌ಆರ್‌ಎಸ್‌ಸಿ ಮತ್ತು ಇತರ ಸಂಬಂಧಿತ ಇಲಾಖೆಗಳ ಹಿರಿಯ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# ಲಿವ್–ಇನ್ ಸಂಬಂಧದಲ್ಲಿದ್ದ ಮಗಳನ್ನು ಕೊಂದ ತಂದೆ



**ನವದೆಹಲಿ, ಜೂ. 10:** ಮುಜಾಫರ್ ನಗರದಲ್ಲಿರುವ ಕಾಡೊಂದರಲ್ಲಿ ಮಹಿಳೆಯ ಅರೆಬೆಂದ ಶವ ಪತ್ತೆಯಾಗಿತ್ತು. ಇದೀಗ ಅದು ಮರ್ಯಾದಾಹತ್ಯೆ ಎಂಬುದು ತಿಳಿದುಬಂದಿದೆ. ಯುವತಿ ಲಿವ್ ಇನ್ ಸಂಬಂಧದಲ್ಲಿದ್ದರು, ಅದು ತಿಳಿದ ಬಳಿಕ ಕೋಪಗೊಂಡ ತಂದೆ ತನ್ನ ಮಗನ ಜತೆ ಸೇರಿ ಮಗಳ ಕತ್ತು ಹಿಸುಕಿ ಕೊಂದು ಬೆಂಕಿ ಹಚ್ಚಿದ್ದಾರೆ ಎನ್ನಲಾಗಿದೆ.

ಯುವತಿ ಗುರುಗ್ರಾಮದ ಇ–ಕಾಮರ್ಸ್ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದರು. ತನ್ನ ಗ್ರಾಮದ ಅಮಿತ್ ಎಂಬ ವ್ಯಕ್ತಿಯೊಂದಿಗೆ ಆಕೆ ಲಿವ್–ಇನ್ ಸಂಬಂಧದಲ್ಲಿದ್ದರು. ಪೊಲೀಸರ ಪ್ರಕಾರ, ಮಹಿಳೆ ತನ್ನ ಕುಟುಂಬವನ್ನು ತಮ್ಮ ಸಂಬಂಧವನ್ನು ಒಪ್ಪಿಕೊಳ್ಳುವಂತೆ ಮನವೊಲಿಸಲು ಮನೆಗೆ ಮರಳಿದ್ದಳು. ಆಕೆ 2019 ರಲ್ಲಿ ಮದುವೆಯಾಗಿದ್ದರು ಆದರೆ ಎರಡು ವರ್ಷಗಳ ನಂತರ ಪತಿಯನ್ನು ತೊರೆದಿದ್ದರು. ಆಕೆಯ ಕುಟುಂಬ 2022 ರಲ್ಲಿ ಮತ್ತೊಂದು ಮದುವೆಗೆ ಪ್ರಯತ್ನಿಸಿತು, ಆದರೆ ಅದು ಫಲ ನೀಡಲಿಲ್ಲ. ಅದೇ ವರ್ಷ ಗುರುಗ್ರಾಮದಲ್ಲಿ ಅಮಿತ್ ಜತೆ ವಾಸಿಸಲು ಶುರು ಮಾಡಿದ್ದರು. ಉದ್ವಿಗ್ನತೆಯ ಹೊರತಾಗಿಯೂ ತನ್ನ ಕುಟುಂಬದೊಂದಿಗೆ ಸಂಪರ್ಕದಲ್ಲಿದ್ದರು.

ಮೇ 26 ರಂದು ಅಮಿತ್ ಜೊತೆ ಕೊನೆಯದಾಗಿ ಮಾತನಾಡಿದ್ದರು, ತನ್ನ ಕುಟುಂಬದವರ ಮನಸ್ಸು ಗೆಲ್ಲುವ ತನ್ನ ಕೊನೆಯ ಪ್ರಯತ್ನ ಎಂದು ಹೇಳಿದ್ದಳು. ಮೇ 29?30 ರ ರಾತ್ರಿ ಆಕೆಯನ್ನು ಕೊಲೆ ಮಾಡಲಾಗಿದೆ ಎಂದು ಪೊಲೀಸರು ಹೇಳಿದ್ದಾರೆ. ಆಕೆಯ ತಂದೆ ರಾಜವೀರ್ ಸಿಂಗ್ (55) ಮತ್ತು ಸಹೋದರ ಸುಮಿತ್ ಸಿಂಗ್ (24) ಆಕೆಯನ್ನು ಕತ್ತು ಹಿಸುಕಿ ಕೊಂದಿದ್ದಾರೆ ಎಂದು ಆರೋಪಿಸಲಾಗಿದೆ. ಶವವನ್ನು 5 ಕಿ.ಮೀ ದೂರದ ಕಾಡಿಗೆ ತೆಗೆದುಕೊಂಡು ಹೋಗಿ, ಅದರ ಮೇಲೆ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿದ್ದರು.

ಎರಡು ದಿನಗಳ ನಂತರ, ತನಿಖೆಯನ್ನು ಗೊಂದಲಗೊಳಿಸಲು ಕುಟುಂಬವು ಆಕೆ ನಾಪತ್ತೆಯಾಗಿದ್ದಾರೆ ಎಂದು ದೂರು ದಾಖಲಿಸಿತ್ತು. ಆದರೆ ಜೂನ್ 3 ರಂದು, ಪೊಲೀಸರು ಕಾಲುವೆಯ ಬಳಿ ಅರೆಬೆಂದ ಶವ ಪತ್ತೆಯಾಗಿತ್ತು.ಆದರೆ ಗುರುತಿಸುವುದು ಕಷ್ಟಕರವಾಗಿತ್ತು. ಆದರೆ ಕಾನ್‌ಸ್ಟೆಬಲ್ ಮತ್ತು ಖಊಃ ಆಕೆಯ ಕೈಯಲ್ಲಿದ್ದ ಬಳೆಗಳನ್ನು ಗಮನಿಸಿದರು ಮತ್ತು ಅವುಗಳನ್ನು ಆಕೆಯ ಹಿಂದಿನ ಫೋಟೋಗೆ ಹೊಂದಿಸಿದರು. ಇದು ಮಹಿಳೆಯ ಗುರುತನ್ನು ದೃಢಪಡಿಸಲು ಸಹಾಯ ಮಾಡಿತು

# ದೆಹಲಿಯ ಅಪಾರ್ಟ್‌ಮೆಂಟ್‌ನಲ್ಲಿ ಬೆಂಕಿ ಅವಘಡ ಪಾರಾಗಲು ಮಹಡಿಯಿಂದ ಹಾರಿದ ಜನ

ನವದೆಹಲಿ: ದೆಹಲಿಯ ದ್ವಾರಕಾ ಸೆಕ್ಟರ್ 13ರ ಶಾಬಾದ್ ಅಪಾರ್ಟ್‌ಮೆಂಟ್‌ನಲ್ಲಿ ಮಂಗಳವಾರ ಮುಂಜಾನೆ ಭಾರೀ ಬೆಂಕಿ ಅವಘಡ ಸಂಭವಿಸಿದೆ. ಏಕಾಏಕಿ ಬೆಂಕಿ ಕಾಣಿಸಿಕೊಂಡ ಹಿನ್ನೆಲೆ ಅಪಾಯದಿಂದ ಪಾರಾಗುವ ಸಲುವಾಗಿ ಮೂವರು ಮಹಡಿಯಿಂದ ಹಾರಿದ್ದು, ಸ್ಥಿತಿ ಗಂಭೀರವಾಗಿದೆ. ಎಂಆರ್‌ವಿ ಶಾಲೆಯ ಬಳಿಯ ಸೆಕ್ಟರ್ –13ರ ಶಾಬಾದ್ ಅಪಾರ್ಟ್‌ಮೆಂಟ್ ಏಳನೇ ಮಹಡಿಯಲ್ಲಿರುವ ಫ್ಲಾಟ್ನಲ್ಲಿ ಬೆಂಕಿ ಕಾಣಿಸಿಕೊಂಡಿದೆ ಎಂದು ವರದಿಯಾಗಿದೆ. ಗಾಯಾಳುಗಳ ವಿವರಗಳು ಇನ್ನೂ ತಿಳಿದುಬಂದಿಲ್ಲ ಎಂದು ಅಗ್ನಿಶಾಮಕ ಅಧಿಕಾರಿಗಳು ತಿಳಿಸಿದ್ದಾರೆ. ಅಪಾರ್ಟ್‌ಮೆಂಟ್‌ನಲ್ಲಿ ಬೆಂಕಿ ಅವಘಡದ ಬಗ್ಗೆ ಬೆಳಗ್ಗೆ 10 ಗಂಟೆಯ ಸುಮಾರಿಗೆ ಕರೆ ಬಂತು. ತಕ್ಷಣವೇ ಎಂಟು ಅಗ್ನಿಶಾಮಕ ವಾಹನಗಳನ್ನು ಸ್ಥಳಕ್ಕೆ ಕಳುಹಿಸಲಾಗಿದ್ದು, ರಕ್ಷಣಾ ಕಾರ್ಯಾಚರಣೆಗಳು ನಡೆಯುತ್ತಿದೆ. ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತರಲು ಅಧಿಕಾರಿಗಳು ಕೆಲಸ ಮಾಡುತ್ತಿದ್ದಾರೆ. ಪೊಲೀಸರು, ಅಗ್ನಿಶಾಮಕ ದಳ ಮತ್ತು ಆಂಬುಲೆನ್ಸ್ ಘಟನಾ ಸ್ಥಳದಲ್ಲಿವೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಘಟನೆಗೆ ಕಾರಣ ಏನು ಎಂಬುದು ಇನ್ನೂ ತಿಳಿದಿಲ್ಲ.

### ನ.1 ರಿಂದ 4 ಜಿಲ್ಲೆಗಳನ್ನು ಹೊರತುಪಡಿಸಿ ಕಬ್ಬು ಅರೆಯುವ ಪ್ರಕ್ರಿಯೆ

# ಮಂಡ್ಯ, ಮೈಸೂರು, ಚಾಮರಾಜನಗರ, ಹಾಸನ ಜಿಲ್ಲೆಗಳಲ್ಲಿ ಜೂ.22ರಿಂದ ಕ್ರಷಿಂಗ್ ಆರಂಭ

**ಬೆಂಗಳೂರು, ಜೂ.10–** ಮಂಡ್ಯ, ಮೈಸೂರು, ಚಾಮರಾಜನಗರ, ಹಾಸನ ಜಿಲ್ಲೆಗಳನ್ನು ಹೊರತುಪಡಿಸಿ, ರಾಜ್ಯದ ಇತರ ಜಿಲ್ಲೆಗಳಲ್ಲಿ ನವಂಬರ್ 1ರಿಂದ ಕಬ್ಬು ನುರಿಸುವಿಕೆ ಆರಂಭಿಸಲು ಮಂಗಳವಾರ ಕಬ್ಬು, ಸಕ್ಕರೆ ಅಭಿವೃದ್ಧಿ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಅಧ್ಯಕ್ಷತೆಯಲ್ಲಿ ನಡೆದ ಕಬ್ಬು ನಿಯಂತ್ರಣ ಮಂಡಳಿ ಸಭೆಯಲ್ಲಿ ನಿರ್ಧರಿಸಲಾಗಿದೆ.

ಮಂಡ್ಯ, ಮೈಸೂರು, ಚಾಮರಾಜನಗರ ಮತ್ತು ಹಾಸನ ಜಿಲ್ಲೆಗಳಲ್ಲಿ ಮಾತ್ರ ಜೂನ್ 22ರಿಂದ ಕಬ್ಬು ನುರಿಸುವಿಕೆ ಆರಂಭಿಸಲು ಈಗಾಗಲೇ ಆದೇಶ ಹೊರಡಿಸಲಾಗಿದೆ. ಈ ಬಾರಿ ಮಳೆ ಉತ್ತಮವಾಗಿದ್ದು, ಕಬ್ಬು ಇಳುವರಿ ಕೂಡಾ ಚೆನ್ನಾಗಿದೆ. ಹೀಗಾಗಿ ಮುಂಚಿತವಾಗಿಯೇ ಕಬ್ಬು ನುರಿಸುವಿಕೆ ಆರಂಭಿಸುವ ಅಭಿಪ್ರಾಯಕ್ಕೆ ರೈತ ಮುಖಂಡರನ್ನೊಳಗೊಂಡ ಕಬ್ಬು ನಿಯಂತ್ರಣ ಮಂಡಳಿ ಸದಸ್ಯರು ಸಹಮತ ವ್ಯಕ್ತಪಡಿಸಿದರು.

ತೂಕದಲ್ಲಿ ವಂಚನೆ ತಡೆ, ಕಬ್ಬು ಪೂರೈಕೆ ಮಾಡಿದ ರೈತರಿಗೆ ನಿಗದಿತ ಸಮಯದಲ್ಲಿ ಬಿಲ್ ಪಾವತಿ ಬಗ್ಗೆ ಚರ್ಚೆ ಸಭೆಯಲ್ಲಿ ಚರ್ಚೆ ನಡೆಯಿತು. ಕಳೆದ ಮೂರು ವರ್ಷದ ಹಂಗಾಮಿನಲ್ಲಿ ಕಬ್ಬು ಪೂರೈಕೆ ಮಾಡಿದ ರೈತರಿಗೆ ಪೂರ್ಣ ಪ್ರಮಾಣದಲ್ಲಿ ಬಿಲ್ ಪಾವತಿಯಾಗಿದೆ. ಕಬ್ಬು ಪೂರೈಕೆ ಮಾಡಿದ 14 ದಿನಗಳೊಳಗೆ ಬಿಲ್ ಪಾವತಿ ಮಾಡಬೇಕು ಎಂಬ ನಿಯಮ ಇದೆ. ಕೆಲ ಕಾರ್ಖಾನೆಗಳು ವಿಳಂಬ ಮಾಡಿರಬಹುದು ಆದರೆ ಪೂರ್ಣ ಪ್ರಮಾಣದಲ್ಲಿ ಬಿಲ್ ಪಾವತಿ ಮಾಡಿವೆ. ಕಬ್ಬಿನ ಬಾಕಿ ಬಿಲ್ ಪಾವತಿ ವಿಚಾರದಲ್ಲಿ ಕರ್ನಾಟಕ ರಾಜ್ಯ ಇತರೆ ಕಬ್ಬು ಬೆಳೆಯುವ ರಾಜ್ಯಗಳಿಗೆ ಮಾದರಿಯಾಗಿದೆ ಎಂದು ಸಚಿವ ಶಿವಾನಂದ ಪಾಟೀಲ ಹೇಳಿದರು.

ಕಬ್ಬು ಪೂರೈಕೆ ಮಾಡಿದ ರೈತರಿಗೆ ಸಕ್ಕರೆ ಕಾರ್ಖಾನೆಗಳು ಉತ್ತರ ಪ್ರದೇಶದಲ್ಲಿ ರೂ 594 ಕೋಟಿ, ಮಹಾರಾಷ್ಟ್ರ ರಾಜ್ಯದಲ್ಲಿ ರೂ 123 ಕೋಟಿ ಬಾಕಿ ಉಳಿಸಿಕೊಂಡಿವೆ. ಕಬ್ಬು ಬೆಳೆಗಾರರ ಹಿತರಕ್ಷಣೆಗಾಗಿ ಕರ್ನಾಟಕ ಸರ್ಕಾರ ಸಕ್ಕರೆ ಕಾರ್ಖಾನೆಗಳ ಮೇಲೆ ಒತ್ತಡ ಹಾಕಿ ಬಿಲ್ ಪಾವತಿಗೆ ಕ್ರಮ ಕೈಗೊಂಡಿದೆ. 2025–26ನೇ ಸಾಲಿನ ಹಂಗಾಮಿಗೆ ಎಫ್‌ಆರ್‌ಪಿ ದರವನ್ನು ಪ್ರತಿಶತ 9.5ರಷ್ಟು ಸಕ್ಕರೆ ಇಳುವರಿಗೆ ಪ್ರತಿ ಮೆಟ್ರಿಕ್ ಟನ್‌ಗೆ 4440 ರೂ ಅಥವಾ 4200 ರೂ ನಿಗದಿಪಡಿಸಬೇಕು ಎಂದು ಕೇಂದ್ರ ಸರ್ಕಾರಕ್ಕೆ ಕಳೆದ ಜನವರಿಯಲ್ಲೇ ರಾಜ್ಯ ಸರ್ಕಾರ ಮನವಿ ಮಾಡಿತ್ತು. ಕೇಂದ್ರ ಸರ್ಕಾರ ಪ್ರತಿಶತ 10.25 ಸಕ್ಕರೆ ಇಳುವರಿಗೆ ಪ್ರತಿಟನ್‌ಗೆ ರೂ 3,550, ಪ್ರತಿಶತ 10.25ಕ್ಕೂ ಮೇಲ್ಪಟ್ಟ ಇಳುವರಿಗೆ ನಂತರದ ಶೇಕಡ 1ರಷ್ಟು ಇಳುವರಿಗೆ ಪ್ರತಿ ಮೆಟ್ರಿಕ್ ಟನ್‌ಗೆ ರೂ 346 ಹೆಚ್ಚುವರಿ ಬೆಲೆ ನಿಗದಿಪಡಿಸಿದೆ.

ಪ್ರತಿಶತ 10.25ಕ್ಕಿಂತ ಕಡಿಮೆ ಹಾಗೂ ಪ್ರತಿಶತ 9.5ಕ್ಕೆ ಮೇಲ್ಪಟ್ಟ ಇಳುವರಿ ಹೊಂದಿರುವ ಸಕ್ಕರೆ ಕಾರ್ಖಾನೆಗಳಿಗೆ ಪ್ರತಿ ಮೆಟ್ರಿಕ್ ಟನ್‌ಗೆ ರೂ 346 ಸರಾಸರಿಯಂತೆ ನ್ಯಾಯ ಮತ್ತು ಲಾಭದಾಯಕ ಬೆಲೆ ಕಡಿಮೆ ಮಾಡಬೇಕು. ಪ್ರತಿಶತ 9.5 ಅಥವಾ ಪ್ರತಿಶತ 9.50ಕ್ಕಿಂತ ಕಡಿಮೆ ಇಳುವರಿ ಹೊಂದಿರುವ ಸಕ್ಕರೆ ಕಾರ್ಖಾನೆಗಳಿಗೆ ಪ್ರತಿ ಮೆಟ್ರಿಕ್ ಟನ್‌ಗೆ ರೂ 3290.5 ನ್ಯಾಯ ಮತ್ತು ಲಾಭದಾಯಕ ಬೆಲೆ ನಿಗದಿಪಡಿಸಿದೆ. 2024–25ನೇ ಹಂಗಾಮಿನಲ್ಲಿ ಕಬ್ಬು ಬಿಲ್ ಬಾಕಿ ಉಳಿಸಿಕೊಂಡಿರುವ ಸಕ್ಕರೆ ಕಾರ್ಖಾನೆಗಳಿಗೆ ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಮೂಲಕ ವಸೂಲಾತಿ ಪ್ರಮಾಣ ಪತ್ರವನ್ನು ಜಾರಿಗೊಳಿಸಲಾಗಿದೆ.

ಕೆಲವು ಕಾರ್ಖಾನೆಗಳು ಎಫ್‌ಆರ್‌ಪಿ ದರದಂತೆ ಸಂಪೂರ್ಣ ಹಣ ಪಾವತಿ ಮಾಡಿದ್ದರೂ ಕಬ್ಬು (ನಿಯಂತ್ರಣ) ಆದೇಶದ ಅನ್ವಯ ವಿಳಂಬದ ಅವಧಿಗೆ ರೈತರಿಗೆ ಪ್ರತಿಶತ 15ರಂತೆ ಬಡ್ಡಿ ವಿತರಿಸಿರುವ ಬಗ್ಗೆ ಮಾಹಿತಿ ನೀಡಿಲ್ಲ. ಕೆಲವು ಕಾರ್ಖಾನೆಗಳು ಅಸಲು ಮೊತ್ತವನ್ನೂ ಬಾಕಿ ಉಳಿಸಿಕೊಂಡಿವೆ. ಈ ಹಿನ್ನೆಲೆಯಲ್ಲಿ ಕಾರ್ಖಾನೆಗಳಿಂದ ಬರಬೇಕಾದ ಬಾಕಿ ಮೊತ್ತದ ವಿಚಾರವಾಗಿ ಕಬ್ಬು ಬೆಳೆಗಾರರ ಸಭೆ ಕರೆದು ಕಬ್ಬಿನ ಬಾಕಿ ಬಿಲ್ ಪಾವತಿ ಬಗ್ಗೆ ಖಚಿತಪಡಿಸಿಕೊಳ್ಳಲು ಹಾಗೂ ಈ ವಿಚಾರವಾಗಿ ಅನುಪಾಲನಾ ವರದಿ ಸಲ್ಲಿಸಲು ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.

ತೂಕದಲ್ಲಿನ ವಂಚನೆ ತಡೆಗೆ ರಾಜ್ಯದ ಎಲ್ಲ ಸಕ್ಕರೆ ಕಾರ್ಖಾನೆಗಳಲ್ಲಿ ಅನಲಾಗ್ ತೂಕದ ಯಂತ್ರಗಳ ಬದಲಿಗೆ ಡಿಜಿಟಲ್ ತೂಕದ ಯಂತ್ರಗಳನ್ನು ಅಳವಡಿಸಲು ಕ್ರಮ ಕೈಗೊಳ್ಳಲಾಗಿದೆ. ಕೇವಲ ನಾಲ್ಕು ಕಾರ್ಖಾನೆಗಳಲ್ಲಿ ಮಾತ್ರ ಬಾಕಿ ಇದೆ. ಈ ಹಂಗಾಮು ಆರಂಭದೊಳಗೆ ಬಾಕಿ ಇರುವ ಸಕ್ಕರೆ ಕಾರ್ಖಾನೆಗಳಲ್ಲೂ ಡಿಜಿಟಲ್ ತೂಕದ ಯಂತ್ರ ಅಳವಡಿಸಬೇಕು ಎಂದು ಸಚಿವರು ಮಾಪನ ಇಲಾಖೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಡಿಜಿಟಲ್ ತೂಕದ ಯಂತ್ರಗಳನ್ನು ಅಳವಡಿಸಿದ ನಂತರ ವಂಚನೆ ದೂರುಗಳು ಕಡಿಮೆಯಾಗಿವೆ. ಮಾಪನಶಾಸ್ತ್ರ ಇಲಾಖೆ ಅಧಿಕಾರಿಗಳು ಅನಿರೀಕ್ಷಿತವಾಗಿ ಸಕ್ಕರೆ ಕಾರ್ಖಾನೆಗಳಿಗೆ ಭೇಟಿ ನೀಡಿ ತಪಾಸಣೆ ಮಾಡಬೇಕು. ಡಿಜಿಟಲ್ ತೂಕದ ಯಂತ್ರಗಳಲ್ಲಿ ವಂಚನೆ ಮಾಡಲು ಅವಕಾಶ ಇರುವುದಿಲ್ಲ ಎನ್ನಲಾಗಿದೆ. ಆದರೂ ಅಧಿಕಾರಿಗಳು ಪರಿಶೀಲನೆ ಮಾಡುವುದು ಕಡ್ಡಾಯ. ಮಾಪನಶಾಸ್ತ್ರ ಇಲಾಖೆಯಲ್ಲಿ ಸಿಬ್ಬಂದಿ ಕೊರತೆ ಇಲ್ಲ. ಹೀಗಾಗಿ ಸಬೂಬು ಹೇಳದೆ ತಮ್ಮ ಜವಾಬ್ದಾರಿ ನಿರ್ವಹಿಸಬೇಕು. ರಾಜ್ಯದ ಎಲ್ಲ ಎಪಿಎಂಸಿಗಳಲ್ಲೂ ತೂಕದ ಯಂತ್ರಗಳನ್ನು ಅಳವಡಿಸಿ ಉಚಿತವಾಗಿ ತೂಕ ಮಾಡಿಕೊಡಲಾಗುವುದು. ರಾಜ್ಯದಲ್ಲಿ 2025ರ ಮೇ ಅಂತ್ಯಕ್ಕೆ ಸಕ್ಕರೆ ಕಾರ್ಖಾನೆಗಳು 521.38 ಲಕ್ಷ ಮೆಟ್ರಿಕ್ ಟನ್ ಕಬ್ಬು ನುರಿಸಿ 41.81 ಲಕ್ಷ ಮೆಟ್ರಿಕ್ ಟನ್ ಸಕ್ಕರೆ ಉತ್ಪಾದನೆ ಮಾಡಿವೆ. ಕೇಂದ್ರ ಸರ್ಕಾರ ನಿಗದಿಪಡಿಸಿರುವ ಎಫ್‌ಆರ್‌ಪಿ ದರದಂತೆ ಒಟ್ಟು ರೂ 18221.88 ಕೋಟಿ ಬಿಲ್ ಪಾವತಿ ಮಾಡಬೇಕಿದ್ದು, ರೂ 18872.47 ಕೋಟಿ ಪಾವತಿ ಮಾಡಿವೆ. 14 ಸಕ್ಕರೆ ಕಾರ್ಖಾನೆಗಳು ರೂ 245.62 ಕೋಟಿ ಬಾಕಿ ಉಳಿಸಿಕೊಂಡಿದ್ದು,, ಅಂತಹ ಸಕ್ಕರೆ ಕಾರ್ಖಾನೆ ಆಡಳಿತ ಮಂಡಳಿಗಳಿಗೆ ಈಗಾಗಲೇ ಜಿಲ್ಲಾಧಿಕಾರಿಗಳು ವಸೂಲಾತಿ ಪ್ರಮಾಣ ಪತ್ರ ಹೊರಡಿಸಿದ್ದಾರೆ. ಕೆಲವು ಕಾರ್ಖಾನೆಗಳು ಎಫ್‌ಆರ್‌ಪಿ ದರಕ್ಕಿಂತ ಹೆಚ್ಚಿನ ಬಿಲ್ ಪಾವತಿ ಮಾಡಿವೆ ಎಂದು ಸಕ್ಕರೆ ಆಯುಕ್ತ ರವಿಕುಮಾರ್ ಸಭೆಗೆ ಮಾಹಿತಿ ನೀಡಿದರು.

ಕೋರ್ಟ್ ಆದೇಶವಿದ್ದರೂ ಎಲ್ಲ ಸಕ್ಕರೆ ಕಾರ್ಖಾನೆಗಳಲ್ಲಿ ಏಕೆ ಡಿಜಿಟಲ್ ತೂಕದ ಯಂತ್ರಗಳನ್ನು ಅಳವಡಿಸಲು ಕ್ರಮ ಕೈಗೊಂಡಿಲ್ಲ ಎಂದು ಸಚಿವ ಶಿವಾನಂದ ಪಾಟೀಲ ಅವರು ಮಾಪನಶಾಸ್ತ್ರ ಇಲಾಖೆ ಅಧಿಕಾರಿಗಳನ್ನು ಪ್ರಶ್ನಿಸಿದರು. ಇಲಾಖೆಯಲ್ಲಿ ಸಿಬ್ಬಂದಿ ಕೊರತೆ ಇಲ್ಲ. ಆದರೂ ಯಾಕೆ ಇನ್ನೂ ನಾಲ್ಕು ಸಕ್ಕರೆ



ಕಾರ್ಖಾನೆಗಳಲ್ಲಿ ಡಿಜಿಟಲ್ ತೂಕದ ಯಂತ್ರ ಅಳವಡಿಸಿಲ್ಲ. ಡಿಜಿಟಲ್ ಯಂತ್ರಗಳನ್ನು ಅಳವಡಿಸಿದ್ದರೂ ರೈತರಲ್ಲಿ ವಿಶ್ವಾಸ ಬಂದಿಲ್ಲ. ಹೀಗಾಗಿ ಡಿಜಿಟಲ್ ತೂಕದ ಯಂತ್ರಗಳಲ್ಲೂ ಟ್ಯಾಂಪರಿಂಗ್ ಸಾಧ್ಯತೆ ಇದೆಯೇ ಎಂದು ಸಚಿವರು ಪ್ರಶ್ನೆ ಮಾಡಿದರು. ಡಿಜಿಟಲ್ ಯಂತ್ರಗಳನ್ನು ತಿರುಚುವ ಸಾಧ್ಯತೆ ಇಲ್ಲ. ಅಂತಹ ಪ್ರಯತ್ನ ಮಾಡಿದರೆ ತೂಕದ ಯಂತ್ರವೇ ಸ್ಥಗಿತಗೊಳ್ಳಲಿದೆ ಎಂದು ವಿವರಿಸಿದ ಮಾಪನಶಾಸ್ತ್ರ ಇಲಾಖೆ ಅಧಿಕಾರಿಗಳು, ಈ ಹಂಗಾಮು ಕ್ರಷಿಂಗ್ ಆರಂಭದ ಪೂರ್ವದಲ್ಲೇ ಬಾಕಿ ಇರುವ ಸಕ್ಕರೆ ಕಾರ್ಖಾನೆಗಳಲ್ಲೂ ಡಿಜಿಟಲ್ ತೂಕದ ಯಂತ್ರ ಅಳವಡಿಸಲಾಗುವುದು ಎಂದು ಭರವಸೆ ನೀಡಿದರು.

ತೂಕದಲ್ಲಿ ವಂಚನೆಯನ್ನು ದಾಖಲೆ ಸಹಿತ ದೂರು ನೀಡುವ ರೈತರಿಗೆ ಈಗಾಗಲೇ ರೂ 5 ಲಕ್ಷ ರೂ. ಬಹುಮಾನ ಘೋಷಣೆ ಮಾಡಲಾಗಿದೆ. ಹಾಗೂ ಆ ರೈತರ ಕಬ್ಬು ನುರಿಸುವ ಜವಾಬ್ದಾರಿಯನ್ನು ಸರ್ಕಾರ ವಹಿಸಿಕೊಳ್ಳಲಿದೆ ಎಂದು ಈಗಾಗಲೇ ಘೋಷಣೆ ಮಾಡಲಾಗಿದೆ. ಇದುವರೆಗೆ ತೂಕದಲ್ಲಿ ವಂಚನೆಯ ದೂರುಗಳು ಬಂದಿಲ್ಲ ಎಂದು ಸಚಿವ ಶಿವಾನಂದ ಪಾಟೀಲ ಹೇಳಿದರು. ಅನಲಾಗ್ ತೂಕದ ಯಂತ್ರಗಳು ಇದ್ದ ಸಮಯದಲ್ಲಿ ಸುಮಾರು ನೂರು ದೂರುಗಳು ಬರುತ್ತಿದ್ದವು. ಆದರೆ ಡಿಜಿಟಲ್ ತೂಕದ ಯಂತ್ರ ಅಳವಡಿಸಿದ ನಂತರ ದೂರುಗಳ ಸಂಖ್ಯೆ ಹತ್ತಕ್ಕಿಂತ ಕಡಿಮೆ ಇದೆ ಎಂದು ಸಕ್ಕರೆ ಆಯುಕ್ತ ರವಿಕುಮಾರ್ ಸಭೆಯ ಗಮನಕ್ಕೆ ತಂದರು. ದೂರುಗಳು ಶೂನ್ಯಕ್ಕೆ ಇಳಿಯಬೇಕು. ಇದು ಸರ್ಕಾರದ ಆಶಯ ಎಂದು ಸಚಿವ ಶಿವಾನಂದ ಪಾಟೀಲ ಹೇಳಿದರು.



ಬೆಂಗಳೂರು ಕಾಲ್ತುಳಿತ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಬೇಕೆಂದು ಒತ್ತಾಯಿಸಿ ರಿಪಬ್ಲಿಕನ್ ಪಾರ್ಟಿ ಆಫ್ ಇಂಡಿಯಾ ಸದಸ್ಯರು ಮಂಗಳವಾರ ಬೆಂಗಳೂರಿನ ಫ್ರೀಡಂಪಾರ್ಕ್‌ನಲ್ಲಿ ಧರಣಿ ನಡೆಸಿದರು.

## ಬಡವರ ಮಕ್ಕಳು ವಿದ್ಯಾವಂತರಾಗಿ ಉತ್ತಮ ಪ್ರಜೆಗಳಾಗಲಿ: ಸಚಿವ ರಾಮಲಿಂಗಾರೆಡ್ಡಿ



**ಬೆಂಗಳೂರು, ಜೂ, 10–** ವಿದ್ಯಾವಂತ ಸಮಾಜ ನಿರ್ಮಾಣವಾದಾಗ ದೇಶದ ಅಭಿವೃದ್ಧಿ ಸಾಧ್ಯ. ವಿದ್ಯಾವಂತರಿಗೆ ಸಮಾಜದಲ್ಲಿ ಗೌರವ ಮಾನ್ಯತೆ ಇರುತ್ತದೆ ಎಂದು ಸಾರಿಗೆ ಮತ್ತು ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ ಹೇಳಿದ್ದಾರೆ.

ಜಯನಗರದ ಭೈರಸಂದ್ರ ವಾರ್ಡ್ ಸರ್ಕಾರಿ ಶಾಲೆಯಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಶೇಕಡ 85ಕ್ಕೂ ಹೆಚ್ಚು ಅಂಕಗಳಿಸಿದ 23ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಮಾತನಾಡಿದ, ಅವರು ಬಡವರ ಮಕ್ಕಳು ವಿದ್ಯಾವಂತರಾಗಿ ಸಮಾಜದಲ್ಲಿ ಉತ್ತಮ ಪ್ರಜೆಗಳಾಬೇಕು. ಸರ್ಕಾರಿ ಶಾಲೆಗಳನ್ನು ಹೈಟೆಕ್ ಶಾಲೆಯನ್ನಾಗಿ ರೂಪಿಸಲಾಗುತ್ತಿದೆ. ಮತ್ತು ಹೈಟೆಕ್ ಶಿಕ್ಷಣ ನೀಡಲಾಗುತ್ತಿದೆ ಎಂದರು.

ಶ್ರೀಮಂತರರ ಮಕ್ಕಳಿಗೆ ಸಿಗುವ ಶಿಕ್ಷಣ ಸೌಲಭ್ಯಗಳು, ಸರ್ಕಾರಿ ಶಾಲೆಗಳಿಗೂ ಲಭಿಸುವಂತೆ ವ್ಯವಸ್ಥೆ ಮಾಡಲಾಗಿದೆ. ಸರ್ಕಾರಿ ಶಾಲೆಗಳಲ್ಲಿ ಕಂಪ್ಯೂಟರ್ ಕೊಠಡಿ, ಡಿಜಿಟಲ್ ಬ್ಲಾಕ್ ಬೋರ್ಡ್, ಮಕ್ಕಳಿಗೆ ಕುಳಿತುಕೊಳ್ಳಲು ಉತ್ತಮ ಟೇಬಲ್, ಕುರ್ಚಿ ವ್ಯವಸ್ಥೆ ಹಾಗೂ ವಿಜ್ಞಾನ ಕೊಠಡಿ ಎಲ್ಲವು ಸರ್ಕಾರಿ ಶಾಲೆ ವಿದ್ಯಾರ್ಥಿಗಳಿಗೆ ಸಿಗುತ್ತಿದೆ.

ಪ್ರತಿಭಾವಂತ ಮಕ್ಕಳಿಗೆ ಉನ್ನತ ಶಿಕ್ಷಣಕ್ಕೆ ಬೇಕಾಗುವ ಸಹಾಯ ಸಹಕಾರ ನೀಡಲಾಗುವುದು ಎಂದು ಹೇಳಿದರು. ಜಯನಗರ ವಿಧಾನಸಭಾ ಕ್ಷೇತ್ರದ ಗ್ಯಾರೆಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಎನ್.ನಾಗರಾಜು ಮಾತನಾಡಿ, ವಿದ್ಯೆ ಯಾರು ಕದಿಯಲಾಗದ ಅಮೂಲ್ಯ ಜ್ಞಾನ ಭಂಡಾರ. ಪ್ರತಿಯೊಂದು ಮಕ್ಕಳಗೆ ಶಿಕ್ಷಣ ಸಿಗಬೇಕು. ಶಿಕ್ಷಣ ವ್ಯವಸ್ಥೆಯನ್ನು ಸುಧಾರಣೆ ಮಾಡಲಾಗುತ್ತಿದ್ದು, ಉಚಿತ ನೋಟ್ ಪುಸ್ತಕ ವಿತರಣೆ, ಮಕ್ಕಳಿಗೆ ಆರೋಗ್ಯ ಸೇವೆ, ಕ್ರೀಡಾ ಚಟುವಟಿಕೆ ಹಾಗೂ ಪರಿಸರ ಜಾಗೃತಿ, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಿ ಪಠ್ಯೇತರ ಚಟುವಟಿಕೆಗಳಿಗೂ ಆದ್ಯತೆ ನೀಡಲಾಗುತ್ತಿದೆ ಎಂದು ಹೇಳಿದರು. ಶಾಲಾ ಮಕ್ಕಳಿಗೆ ಉಚಿತವಾಗಿ ನೋಟ್ ಪುಸ್ತಕ, ಸಸಿಗಳನ್ನು ವಿತರಿಸಲಾಯಿತು.

## ಕಾಲ್ತುಳಿತದ ಪ್ರಕರಣದಲ್ಲಿ ಮುಖ್ಯಮಂತ್ರಿ ರಾಜೀನಾಮೆ ಅವಶ್ಯವಿಲ್ಲ: ಖರ್ಗೆ

**ಬೆಂಗಳೂರು,ಜೂ.10–**

**ಬೆಂಗಳೂರು,ಜೂ.10–** ಕಾಲ್ತುಳಿತದ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ರಾಜೀನಾಮೆ ಕೇಳುವ ಮೊದಲು ಬಿಜೆಪಿಯವರು ತಾವು ಮಾಡಿರುವ ಘೋರ ಅಪರಾಧಗಳಿಗೆ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಲಿ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ತಿರುಗೇಟು ನೀಡಿದ್ದಾರೆ.

ನಿನ್ನೆ ಮಹಾರಾಷ್ಟ್ರದಲ್ಲಿ ಪೊಲೀಸ್ ಠಾಣೆಯ ಮುಂದೆ ಜನ ಜಮಾಯಿಸಿ 5 ಮಂದಿ ಮೃತಪಟ್ಟಿದ್ದಾರೆ. ಅದರ ಬಗ್ಗೆ ಯಾವುದೇ ರಾಷ್ಟ್ರೀಯ ಮಾಧ್ಯಮಗಳು ಚರ್ಚೆ ಮಾಡುತ್ತಿಲ್ಲ. ಅಲ್ಲಿನ ಮುಖ್ಯಮಂತ್ರಿ, ಉಪಮುಖ್ಯಮಂತ್ರಿಗಳು ಪತ್ರಿಕಾಗೋಷ್ಠಿ ನಡೆಸಿ



ಘಟನೆ ಬಗ್ಗೆ ಮಾಹಿತಿ ನೀಡಿಲ್ಲ. ಬಿಜೆಪಿಯವರಾರೂ ರಾಜೀನಾಮೆ ಕೇಳಿಲ್ಲ, ಉತ್ತರ ಪ್ರದೇಶದ ಕುಂಭಮೇಳದಲ್ಲಿ ಕಾಲ್ತುಳಿತದಲ್ಲಿ ಮೃತಪಟ್ಟವರಿಗೆ ಈವರೆಗೂ ಪರಿಹಾರ ನೀಡಿಲ್ಲ ಎಂದು ನ್ಯಾಯಾಲಯ ಛೀಮಾರಿ ಹಾಕಿದೆ. ಕುಂಭಮೇಳ ಕಾಲ್ತುಳಿತಕ್ಕೆ ಅಲ್ಲಿನ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಆಗಲೀ ಕಾರ್ಯಕ್ರಮ ಆಯೋಜನೆ ಮಾಡಿ ಸಾಧಿಸಿದ್ದೇವೆ ಎಂದು ಬಿಂಬಿಸಿಕೊಂಡಿದ್ದ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹಸಚಿವ ಅಮಿತ್ ಷಾ ಸೇರಿದಂತೆ ಬೇರೆ ಯಾರಾದರೂ ರಾಜೀನಾಮೆ ಕೊಟ್ಟಿದ್ದಾರೆಯೇ ಎಂದು ಪ್ರಶ್ನಿಸಿದರು.

ಇಂತಹ ಘೋರಾತಿಘೋರ ಅಪರಾಧಗಳನ್ನು ಮಾಡಿರುವ ಬಿಜೆಪಿಯವರು ಯಾವ ಮುಖ ಇಟ್ಟುಕೊಂಡು ನಮ್ಮ ಸರ್ಕಾರದ ರಾಜೀನಾಮೆ ಕೇಳುತ್ತಾರೆ ಎಂದು ಕಿಡಿಕಾರಿದರು. ಮಂಗಳೂರಿನ ಸುಹಾಸ್ ಶೆಟ್ಟಿ ಹತ್ಯೆ ಪ್ರಕರಣವನ್ನು ಎನ್‌ಐಎ ತನಿಖೆ ನಡೆಸುವುದರ ಹಿಂದೆ ರಾಜಕೀಯ ದುರುದ್ದೇಶವಿದೆ.

ಬಿಜೆಪಿಯವರಿಗೆ ಹೆಣದ ಮೇಲೆ ರಾಜಕೀಯ ಮಾಡುವುದು ಒಂದು ಕೆಟ್ಟ ಅಭ್ಯಾಸ. ಹಿಂದೆ ಪೆರಾಶ್ ಮೆಸ್ತ ಸಾವಿನ ಪ್ರಕರಣವನ್ನು ರಾಜಕೀಯಕ್ಕೆ ಬಳಸಿಕೊಂಡು ಸಾರ್ವಜನಿಕರ ನೆಮ್ಮದಿ ಹಾಳು ಮಾಡಿದ್ದರು. ರಾಜ್ಯದ ಪೊಲೀಸರ ವರದಿಯಲ್ಲೂ ಆ ವೇಳೆ ಅನುಮಾನಿಸಲಾಗಿತ್ತು. ಕೊನೆಗೆ ಸಿಬಿಐ ತನಿಖೆ ಕೂಡ ರಾಜ್ಯದ ಪೊಲೀಸರ ವರದಿಯನ್ನೇ ಅಂಗೀಕರಿಸಿದೆ. ಅದರ ನೈತಿಕ ಹೊಣೆ ಹೊತ್ತು ಬಿಜೆಪಿಯ ಶೋಭಾ ಕರಂದ್ಲಾಜೆಯಾಗಲಿ ಅಥವಾ ಬೇರೆ ಯಾವುದೇ ಸಂಸದರು ರಾಜೀನಾಮೆ ನೀಡಲಿಲ್ಲ ವೇಕೆ? ಆರ್‌ಸಿಬಿ ವಿಜಯೋತ್ಸವದ ವೇಳೆ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿಯವರು ನೀಡಿದ್ದ ಹೇಳಿಕೆಯನ್ನು ತಿರುಚಿ ಬಿಜೆಪಿಯವರು ಅಪಪ್ರಚಾರ ಮಾಡುತ್ತಿದ್ದಾರೆ. ಹೇಳಿಕೆಗಳನ್ನು ತಿರುಚುವುದರಲ್ಲಿ ಅವರು ನಿಸ್ಸಿಮರು, ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಕಾರ್ಯಕ್ರಮ ಸರ್ಕಾರದ್ದಾಗಿರಲಿಲ್ಲ. ಖಾಸಗಿ ಸಂಸ್ಥೆಯವರ ಪತ್ರ ಆಧರಿಸಿ ಸಿಬ್ಬಂದಿ ಗಳನ್ನು ಒದಗಿಸುವುದು ನಮ್ಮ ಜವಾಬ್ದಾರಿ. ಈ ರೀತಿ ಹೇಳಿರುವುದರಲ್ಲಿ ಮುಖ್ಯಮಂತ್ರಿ ಯವರ ತಪ್ಪೇನಿದೆ?

ವಿಧಾನ ಪರಿಷತ್ ಸದಸ್ಯರ ನೇಮಕಾತಿ, ಕಾಲ್ತುಳಿತ ಪ್ರಕರಣ ಸೇರಿದಂತೆ ಹಲವಾರು ವಿಚಾರಗಳ ಬಗ್ಗೆ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳು ಹೈಕಮಾಂಡ್ ನೊಂದಿಗೆ ಚರ್ಚಿಸಲಿದ್ದಾರೆ.

ಈ ಸಂದರ್ಭದಲ್ಲಿ ಕೆಪಿಸಿಸಿ ಅಧ್ಯಕ್ಷರ ಬದಲಾವಣೆಯಾಗಲಿದೆ, ಸಚಿವ ಸಂಪುಟ ಪುನರ್ ರಚನೆಯಾಗಲಿದೆ ಎಂಬ ವದಂತಿಗಳು ಎಲ್ಲಿಂದ ಹುಟ್ಟಿಕೊಂಡವು ಎಂಬುದು ತಮಗೆ ಗೊತ್ತಿಲ್ಲ ಎಂದರು.

## ಲಾಭ ಗಳಿಸುವ ಸ್ವಾರ್ಥದ ದುರಾಲೋಚನೆಯಿಂದ ಅಮಾಯಕ ಯುವಜೀವಗಳು ಬಲಿ

## ಕಾಲ್ತುಳಿತದ ದಿನ, ಕರಾಳ ದಿನ: ಬಿ.ವೈ.ವಿಜಯೇಂದ್ರ

**ಬೆಂಗಳೂರು, ಜೂ, 10;** ಕಳೆದ ಜೂನ್ 4ರಂದು ನಡೆದ ಕಾಲ್ತುಳಿತ ಪ್ರಕರಣ ಕರ್ನಾಟಕದ ಇತಿಹಾಸದಲ್ಲಿ ಕರಾಳ ಅಧ್ಯಾಯದ ದಿನ. ಕ್ರಿಕೆಟ್ ಅಭಿಮಾನದ ಲಾಭ ಗಳಿಸುವ ಸ್ವಾರ್ಥದ ದುರಾಲೋಚನೆಯಿಂದ ಮುಖ್ಯಮಂತ್ರಿಗಳು ಮತ್ತು ರಾಜ್ಯ ಕಾಂಗ್ರೆಸ್ ಸರ್ಕಾರ, ತೆಗೆದುಕೊಂಡ ಬೇಜವಾಬ್ದಾರಿ ಹಾಗೂ ಹೊಣೆಗೇಡಿತನದ ನಿರ್ಧಾರದಿಂದಾಗಿ ಅಮಾಯಕ ಯುವಜೀವಗಳು ಬಲಿಯಾಗಿವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ.

ಈ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಬಹಿರಂಗ ಪತ್ರ ಬರೆದಿರುವ ಅವರು, ಆರ್‌ಸಿಬಿ ವಿಜಯೋತ್ಸವದಲ್ಲಿ ಜಮಾವಣೆಗೊಂಡಿದ್ದ ಸಾವಿರಾರು ಜನ ನೋವು–ಸಂಕಷ್ಟವನ್ನು ಅನುಭವಿ



ಸಿದ್ದಾರೆ. ಕುಟುಂಬ ಬೆಳಗಬೇಕಿದ್ದ, ಉಜ್ವಲ ಭವಿಷ್ಯದ ಕನಸು ಕಂಡಿದ್ದ , 11 ಯುವ ಜನರ ಸಾವು ಆ ಕುಟುಂಬಗಳ ನೆಮ್ಮದಿ ಕಿತ್ತುಕೊಂಡು, ಹೆತ್ತವರು ನಿತ್ಯ ಕಣ್ಣೀರಿಡುವಂತಾಗಿದೆ. ಈ ಘಟನೆಯಿಂದಾಗಿ ರಾಜ್ಯ ಮಮ್ಮಲ ಮರುಗುತ್ತಿದೆ ಎಂದು ಅಸಮಾಧಾನ ಹೊರಹಾಕಿದ್ದಾರೆ.

ಸಾವಿಗೀಡಾದ ಹನ್ನೊಂದು ಜನರ ಪೈಕಿ ಮನೋಜ್ ಎಂಬ ಯುವಕನ ಸಾವಿನ ಸುದ್ದಿ ಅರಗಿಸಿಕೊಳ್ಳಲಾಗದ ಆತನ ಅಜ್ಜಿ ಆಹಾರ ತ್ಯಜಿಸಿ ಪ್ರಾಣ ಬಿಟ್ಟಿರುವ ಸುದ್ದಿ ನೋವು ತರಿಸಿದೆ. ದುರಂತದಲ್ಲಿ ಅಮೂಲ್ಯ ಜೀವಗಳನ್ನು ಕಳೆದುಕೊಂಡ ಕುಟುಂಬ, ಯಾವ ಪರಿಯಲ್ಲಿ ರೋದಿಸುತ್ತಿದೆ ಎಂಬುದನ್ನು ಮೃತ ದೇವೀರಮ್ಮನವರ ಸಾವು ಸಾಕ್ಷೀಕರಿಸುತ್ತಿದೆ. ರಾಷ್ಟ್ರ– ಅಂತರಾಷ್ಟ್ರೀಯ ಮಟ್ಟದಲ್ಲಿ ಬೆಂಗಳೂರಿನ ಘಟನೆ, ಕರ್ನಾಟಕದ ಘನತೆಗೆ ಕಪ್ಪು ಮಸಿ ಬಳಿದಿದೆ, ನಮ್ಮ ರಾಜ್ಯ ಅಸುರಕ್ಷತೆಯ ತಾಣ ಎಂಬ ಸಂದೇಶ ರವಾನೆಯಾಗಿದೆ. ಇಷ್ಟಾಗಿಯೂ ಸರ್ಕಾರಕ್ಕೂ ಈ ಘಟನೆಗೂ ಸಂಬಂಧವಿಲ್ಲ, ಸರ್ಕಾರ ಈ ಘಟನೆಯ ಜವಾಬ್ದಾರಿಯನ್ನು ಹೊರಲಾಗದು ಎಂಬ ಮುಖ್ಯಮಂತ್ರಿಗಳ ಹೇಳಿಕೆ ಪಲಾಯನವಾದವಾಗಿದೆ. ಅಧಿಕಾರಕ್ಕೆ ಅಂಟಿಕೊಳ್ಳುವ ಭಂಡತನದ ನಡೆ, ಕರ್ನಾಟಕದ ನೈತಿಕ ರಾಜಕಾರಣವನ್ನು ಅವಮಾನಿಸುತ್ತಿದೆ ಎಂದು ತಿಳಿಸಿದ್ದಾರೆ.

## ಅಪ್ರಸ್ತುತವಾಗಿರುವ ವರದಿ ಕೈಬಿಡಲು ಒಕ್ಕಲಿಗರ ಮೀಸಲಾತಿ ಹೋರಾಟ ಸಮಿತಿ ಸರ್ಕಾರಕ್ಕೆ ಆಗ್ರಹ

**ಬೆಂಗಳೂರು, ಜೂ.10–** ಕಾಂತರಾಜು ಆಯೋಗ ವರದಿ ತಿರಸ್ಕಾರ ಮಾಡಿ, ಎಲ್ಲ ವರ್ಗದ ಜನರಿಗೆ ನ್ಯಾಯ ಕೊಡಿಸಬೇಕು ಎಂದು ರಾಜ್ಯ ಒಕ್ಕಲಿಗರ ಮೀಸಲಾತಿ ಹೋರಾಟ ಸಮಿತಿ ಆಗ್ರಹಿಸಿದೆ. ಪತ್ರಿಕಾಗೋಷ್ಠಿಯಲ್ಲಿ ರಾಜ್ಯ ಒಕ್ಕಲಿಗರ ಮೀಸಲಾತಿ ಹೋರಾಟ ಸಮಿತಿ ಅಧ್ಯಕ್ಷ ಡಾ. ಗಾ.ನಂ.ಶ್ರೀಕಂಠಯ್ಯ, ರಾಜ್ಯ ಒಕ್ಕಲಿಗರ ಸಂಘದ ಮಾಜಿ ಕಾರ್ಯದರ್ಶಿ ಎಂ.ಎ.ಆನಂದ್, ಸಂಘದ ಪ್ರಧಾನ ಕಾರ್ಯದರ್ಶಿ ಆಡಿಟರ್ ನಾಗರಾಜ್ ಯಲಚವಾಡಿ, ಕಡಬಗೆರೆ ಒಕ್ಕಲಿಗರ ಕ್ರೀಯಾ ಸಮಿತಿ ಅಧ್ಯಕ್ಷ ಕೆ.ಸಿ.ಶಿವರಾಮು, ಒಕ್ಕಲಿಗ ಸಮಾಜದ ಮುಖಂಡರಾದ ರಂಗನರಸಿಂಹಯ್ಯ, ಮೇಲುಕೋಟೆ ಶಿವರಾಜು ಮತ್ತಿತರರು ಮಾತನಾಡಿದರು.

ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ಮೀಸಲಾತಿಯನ್ನು ಶೇ.50ಕ್ಕೆ ಮಿತಿಗೊಳಿಸಲು ಆದೇಶಿಸಿರುವುದರಿಂದ ಕಾಂತರಾಜು ಹಾಗೂ ಜೆ.ಪಿ.ಹೆಗಡೆ ಆಯೋಗಗಳ ಮೀಸಲಾತಿ ವರದಿಯನ್ನು ಸರ್ಕಾರ ಅನುಷ್ಠಾನ ಗೊಳಿಸಬಾರದು ಎಂದು ಮುಖಂಡರುಗಳು ಆಗ್ರಹಿಸಿದರು.

ಕರ್ನಾಟಕ ರಾಜ್ಯ ಆಡಳಿತ ಮಂಡಳಿಯು ತನ್ನ ಆದೇಶದಲ್ಲಿ ಕರ್ನಾಟಕ ಸರ್ಕಾರವು ನೇಮಕಾತಿಯಲ್ಲಿ ಶೇ.56 ಮೀಸಲಾತಿ ನೀಡಿರುವುದನ್ನು 9 ಜಡ್ಜ್ ಗಳ ಬೆಂಚ್ ಮೀಸಲಾತಿಯನ್ನು ಶೇ.50ಕ್ಕೆ ಮಿತಿಗೊಳಿಸಲು ಆದೇಶಿಸಿದೆ. ಆದ್ದರಿಂದ ಕರ್ನಾಟಕ ರಾಜ್ಯದಲ್ಲಿ ಮೀಸಲಾತಿಯನ್ನು ಶೇ.50ಕ್ಕೆ ಮಿತಿಗೊಳಿಸುವುದು ಕಡ್ಡಾಯವಾಗಿದೆ.

ಶೇ.75ರಷ್ಟು ಮೀಸಲಾತಿ ನೀಡಲು ಶಿಫಾರಸು ಮಾಡಿದ್ದ ಕಾಂತರಾಜು ಮತ್ತು ಹೆಗಡೆ ವರದಿ ನೀಡಿದ್ದವು. ಈಗಾಗಲೇ ಕರ್ನಾಟಕ ಆಡಳಿತ ನ್ಯಾಯಮಂಡಳಿಯು ಮೀಸಲಾತಿಯನ್ನು ಶೇ. 50ಕ್ಕೆ ಮಿತಿಗೊಳಿಸಲು ಆದೇಶಿಸಿರುವುದರಿಂದ ಮೀಸಲಾತಿ ವರದಿಯನ್ನು ಅನುಷ್ಠಾನ ಗೊಳಿಸಲು ಸಾಧ್ಯವಿಲ್ಲ. ಇಬ್ಬರ ವರದಿಯನ್ನು ಸರ್ಕಾರವು ತಿರಸ್ಕರಿಸಲು ನಾವು ಒತ್ತಾಯಿಸುತ್ತೇವೆ. ಬಹುತೇಕ ಎಲ್ಲಾ ವರ್ಗದ ಜನಾಂಗಗಳು ಕಾಂತರಾಜು ಆಯೋಗದ ವರದಿಯಲ್ಲಿ ತಪ್ಪುಗಳಿವೆ .

ಆದುದ್ದರಿಂದ ಸಂಶಯಾಸ್ಪದವಾಗಿ ಸಾಮಾಜಿಕ ಮತ್ತು ಶೈಕ್ಷಣಿಕ ವರದಿ ಸಿದ್ಧಪಡಿಸಿರು ವುದನ್ನು ಕೈಬಿಟ್ಟು ಮತ್ತೊಮ್ಮೆ ವಿಶ್ವಾಸಯುತ ಸಮೀಕ್ಷೆ ನಡೆಸಲು ಸರ್ಕಾರವನ್ನು ಸಮಿತಿ ಒತ್ತಾಯಿಸಿದೆ.ಕಾಂತರಾಜು, ಜೆ.ಪಿ. ಹೆಗಡೆ ಮಾಡಿರುವ ಸಮೀಕ್ಷೆಯು 2014–15 ರಲ್ಲಿ ನಡೆದಿದ್ದು. ಈಗಾಗಲೇ 10 ವರ್ಷ ಪೂರ್ಣಗೊಂಡಿದೆ. ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ಆಯೋಗದದಂತೆ ಪ್ರತಿ 10 ವರ್ಷಕ್ಕೊಮ್ಮೆ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ನಡೆಸಿ ಅದರ ಆಧಾರದ ಮೇಲೆ ಮೀಸಲಾತಿ ನೀಡಬೇಕಾಗಿರುತ್ತದೆ. ಆದರೆ ಈಗಿನ ಕರ್ನಾಟಕ ಸರ್ಕಾರವು ಕಾನೂನಿಗೆ ಯಾವುದೇ ಮಾನ್ಯತೆ ಕೊಡದೆ ಕಾಂತರಾಜು ಮತ್ತು ಜೆ.ಪಿ.ಹೆಗಡೆ ವರದಿಯನ್ನು ಅನುಷ್ಠಾನಗೊಳಿಸಲು ಹೊರಟಿರುವುದು ವಿಪರ್ಯಾಸ.

## ಕಾಲ್ತುಳಿತ ದುರಂತ ಪ್ರಕರಣ ವಾಟಾಳ್ ನಾಗರಾಜ್ ಪ್ರತಿಭಟನೆ




**ಬೆಂಗಳೂರು, ಜೂ.10–** ಬೆಂಗಳೂರಿನ ಎಂ. ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಕಾಲ್ತುಳಿತ ದುರಂತ ಪ್ರಕರಣಕ್ಕೆ ಸಂಬಂಧಪಟ್ಟಂತೆ ಘಟನೆಯನ್ನು ಖಂಡಿಸಿ ವಾಟಾಳ್ ನಾಗರಾಜ್ ನೇತೃತ್ವದಲ್ಲಿ ಇಂದು ಪ್ರತಿಭಟನೆ ನಡೆಸಲಾಯಿತು.

ರಾಜಭವನ ರಸ್ತೆಯಲ್ಲಿ ಕನ್ನಡ ಪರ ಸಂಘಟನೆಗಳಿಂದ ಪ್ರತಿಭಟನೆ ನಡೆಸಲಾಯಿತು. ಈ ವೇಳೆ ರಾಜಭವನ ಮುತ್ತಿಗೆ ಹಾಕಲು ಯತ್ನಿಸಿದ್ದ ವಾಟಾಳ್ ನಾಗರಾಜ್ ಸೇರಿದಂತೆ ಹಲವರನ್ನು ಪೊಲೀಸರು ವಶಕ್ಕೆ ಪಡೆದುಕೊಂಡರು. ಪ್ರತಿಭಟನೆ ವೇಳೆ ಮೃತರ ಕುಟುಂಬಸ್ಥರಿಗೆ 5 ಕೋಟಿ ರೂಪಾಯಿ ಪರಿಹಾರ ನೀಡಬೇಕೆಂದು ಆಗ್ರಹಿಸಲಾಯಿತು.

ಇದೆ ವೇಳೆ ರಾಜಭವನಕ್ಕೆ ಮುತ್ತಿಗೆ ಹಾಗಲು ಹೊರಟಿದ್ದವರನ್ನು ಪೊಲೀಸರು ವಶಕ್ಕೆ ಪಡೆದುಕೊಂಡಿದ್ದಾರೆ. ಪ್ರತಿಭಟನಾಕಾರರನ್ನು ವಶಕ್ಕೆ ಪಡೆದು ಪೊಲೀಸರು ಕರೆದೊಯ್ದರು. ಕಮಿಷನರ್ ಸೇರಿ ಪೊಲೀಸ್ ಅಧಿಕಾರಿಗಳ ಅಮಾನತು ಹಿಂಪಡೆಯುವಂತೆ ಆಗ್ರಹಿಸಲಾಯಿತು.

ಬೆಂಗಳೂರಿನಲ್ಲಿ ವಾಟಾಳ್ ನಾಗರಾಜ್ ನೇತೃತ್ವದಲ್ಲಿ ರಾಜಭವನ ಚಲೋ ಹಮ್ಮಿಕೊಂಡಿದ್ದು ಈ ಒಂದು ರ್ಯಾಲಿ ತಡೆದು ವಾಟಾಳ್ ನಾಗರಾಜ ಸೇರಿದಂತೆ ಹಲವರು ಪೊಲೀಸರು ವಶಕ್ಕೆ ಪಡೆದುಕೊಂಡಿದ್ದಾರೆ. ಇದೇ ವೇಳೆ ವ್ಯಕ್ತಿ ಒಬ್ಬ ರಾಜಭವನದ ಮುಂದೆ ಕಪ್ಪು ಬಟ್ಟೆಯನ್ನು ಪ್ರದರ್ಶಿಸಿದ್ದಾರೆ ಕಪ್ಪು ಬಟ್ಟೆ ಪ್ರದರ್ಶಿಸಿದ ವ್ಯಕ್ತಿಯನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

## ಚಿನ್ನಸ್ವಾಮಿ ಸ್ಟೇಡಿಯಂ ಪಾಕಿಸ್ತಾನದಲ್ಲಿಲ್ಲ, ಸಿಎಂ ವಿರುದ್ಧ ನಿಖಿಲ್ ಕುಮಾರಸ್ವಾಮಿ ಆಕ್ರೋಶ

**ಬೆಂಗಳೂರು, ಜೂ.10–** ಕಾಲ್ತುಳಿತ ಆಗಿರುವುದು ವಿಧಾನ ಸೌಧದ ಮುಂದೆ ಅಲ್ಲ, ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ಅದಕ್ಕೂ ತಮಗೂ ಸಂಬಂಧವಿಲ್ಲ ಎಂದು ಹೇಳಿಕೆ ನೀಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ನಿಖಿಲ್ ಕುಮಾರಸ್ವಾಮಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿರುವ ಅವರು, ಚಿನ್ನಸ್ವಾಮಿ ಸ್ಟೇಡಿಯಂ ಪಾಕಿಸ್ತಾನ ದಲ್ಲಿಲ್ಲ, ವಿಧಾನಸೌಧದಿಂದ ಕೂಗಳತೆಯ ದೂರದಲ್ಲಿದೆ. ಇದು ನಿಮ್ಮ ರಾಜ್ಯ, ನಿಮ್ಮ ನಗರ, ನಿಮ್ಮ ಜನರು ಎಂದು ಹರಿಹಾಯ್ದಿದ್ದಾರೆ. ಆರ್‌ಸಿಬಿಯ ಗೆಲುವಿಗಾಗಿ ಎರಡು ಕಾರ್ಯಕ್ರಮಗಳು ಆಯೋಜನೆ ಮಾಡಲಾಗಿತ್ತು, ಒಂದು ವಿಐಪಿಗಳಿಗಾಗಿ ವಿಧಾನಸೌಧದಲ್ಲಿ, ಇನ್ನೊಂದು ಜನಸಾಮಾನ್ಯರಿಗಾಗಿ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಧಿಕಾರದ ಸಿಂಹಾಸನವನ್ನು ಆರಿಸಿಕೊಂಡರೆ ಹೊರತು ಜನಸಾಮಾನ್ಯರನಲ್ಲ ಎಂದು ವಾಗ್ದಾಳಿ ನಡೆಸಿದರು.

11 ಅಭಿಮಾನಿಗಳು ಕಾಲ್ತುಳಿತದಲ್ಲಿ ಸಾವನ್ನಪ್ಪಿದಾಗ, ಸಚಿವರ ಕುಟುಂಬಗಳು ಸೆಲ್ಫಿ ತೆಗೆದುಕೊಳ್ಳುವದರಲ್ಲಿ ನಿರತರಾಗಿದ್ದರು. ಆದರೂ ಕೂಡ! ಮುಖ್ಯಮಂತ್ರಿಗಳ ಪ್ರತಿಕ್ರಿಯೆ?



"ಅದು ನಮ್ಮ ಕಾರ್ಯಕ್ರಮವಾಗಿರಲಿಲ್ಲ." ಸಿಎಂ ಹೇಳಿಕೆಯನ್ನು ಖಂಡಿಸಿದ್ದಾರೆ. ಜನರ ಜೀವಗಳನ್ನು ರಕ್ಷಿಸಲು ನಿಮ್ಮನ್ನು ನೇಮಿಸಲಾಗಿದೆ. ಆದರೆ ನೀವು ಮಾತ್ರ ಜನರ ಜೀವಗಳನ್ನು ರಕ್ಷಿಸಲು ವಿಫಲರಾಗಿದ್ದಿರಿ ಎಂದು ಅವರು ಟೀಕಿಸಿದ್ದಾರೆ.

## 30 ವರ್ಷಗಳಿಂದಲೂ ಒಳಮೀಸಲಾತಿ ಜಾರಿಗೊಳಿಸಲು ಸರ್ಕಾರದ ನಿರ್ಲಕ್ಷ್ಯ

**ಬೆಂಗಳೂರು, ಜೂ.10–** ಕಳೆದ 30 ವರ್ಷಗಳಿಂದಲೂ ಒಳಮೀಸ ಲಾತಿ ಜಾರಿಗೊಳಿಸುವಂತೆ ಒತ್ತಾಯಿಸಿ ಹೋರಾಟ ನಡೆಸಿದರೂ ಸಹ ಯಾವುದೇ ಸರ್ಕಾರಗಳು ಗಮನ ಹರಿಸುತ್ತಿಲ್ಲ. ಮಾದಿಗ ಸಮುದಾಯಕ್ಕೆ ಅನ್ಯಾಯವಾಗುತ್ತಿದೆ. ಒಳ ಮೀಸಲಾತಿ ಜಾರಿಗೊಳಿಸಿ ಇಲ್ಲವೇ ಕುರ್ಚಿ ಕಾಲಿ ಮಾಡಿ ಎಂದು ಅರೆ ಬೆತ್ತಲೆ ಪ್ರತಿಭಟನೆ ನಡೆಸಲಾಯಿತು.

ನಗರದಲ್ಲಿಂದು ಫ್ರೀಡಂ ಪಾರ್ಕ್ ನಲ್ಲಿ ಮಾದಿಗ ಒಳ ಮೀಸಲಾತಿ ಹೋರಾಟ ಸಮಿತಿ ವತಿಯಿಂದ ಮುಖಂಡ ರಾದ ಭಾಸ್ಕರ್ ಪ್ರಸಾದ್ ಮತ್ತು ಗುಡೇಮಾರನಹಳ್ಳಿ ನಾಗರಾಜ್, ಬಿ.ಆರ್.ಮುನಿರಾಜು ನೇತೃತ್ವದಲ್ಲಿ ಮುಖಂಡರು ಆಗಮಿಸಿ ಅರೆಬೆತ್ತಲೆ ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು.



ರಾಜ್ಯದಲ್ಲಿ ಮುಂಗಾರು ಸಕ್ರಿಯವಾಗಿರುವುದರಿಂದ ಮಂಗಳವಾರ ಹೊಸಪೇಟೆ ಬಳಿಯ ತುಂಗಭದ್ರಾ ಅಣೆಕಟ್ಟೆಯ ನೀರಿನ ಮಟ್ಟ 1,601.98 ಅಡಿ (ಗರಿಷ್ಠ 1633.00 ಅಡಿ) ತಲುಪಿದೆ.

# ಮಕ್ಕಳ ಉಜ್ವಲ ಭವಿಷ್ಯಕ್ಕೆ ಎಲ್ಲ ಸೌಲಭ್ಯ ಕಲ್ಪಿಸಲು ಬದ್ಧ: ಖರ್ಗೆ



**ಕಲಬುರಗಿ, ಜೂ.10–** ನಗರದಲ್ಲಿರುವ ಬಾಲಕೀಯರ ಬಾಲ ಮಂದಿರ ಮಕ್ಕಳ ಉಜ್ವಲ ಭವಿಷ್ಯಕ್ಕೆ ಎಲ್ಲಾ ರೀತಿಯ ಸೌಲಭ್ಯ ಕಲ್ಪಿಸಲಾಗುವುದು. 10 ದಿನದೊಳಗೆ ನೀಲಿನಕ್ಷೆ ಜೊತೆಗೆ ಅಗತ್ಯವಿರುವ ಸೌಲಭ್ಯಗಳ ಕುರಿತು ಕ್ರಿಯಾ ಯೋಜನೆ ರೂಪಿಸಿ ಸಲ್ಲಿಸಿ ಎಂದು ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಐ.ಟಿ-ಬಿ.ಟಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅಧಿಕಾರಿಗಳಿಗೆ ಸೂಚಿಸಿದರು.

ಬಾಲಕೀಯರ ಬಾಲ ಮಂದಿರಕ್ಕೆ ಭೇಟಿ ನೀಡಿ ಮಕ್ಕಳ ಅಹವಾಲು ಆಲಿಸಿ ಮಾತನಾಡಿದ ಅವರು, ಮಕ್ಕಳ ಆಸೆಯಂತೆ ಮೈಸೂರು ಪ್ರವಾಸ ಕೈಗೊಳ್ಳಲು ಇಲಾಖಾ ಸಚಿವರೊಂದಿಗೆ ಚರ್ಚಿಸಿ ಕೆ.ಎಸ್.ಟಿ.ಡಿ.ಸಿ ಸಂಸ್ಥೆಯಿಂದ ಮಕ್ಕಳಿಗೆ ಪ್ರವಾಸ ಏರ್ಪಡಿಸಲಾಗುವುದು ಎಂದರು.

ಇದಲ್ಲದೆ ಮಕ್ಕಳಿಗೆ ಗುಣಮಟ್ಟ ಶಿಕ್ಷಣ ನೀಡಲು ಬೇಕಾಗುವ ಕಂಪ್ಯೂಟರ್, ಕಲಿಕಾ ಸಾಮಗ್ರಿಗಳನ್ನು, ಸ್ಪರ್ಧಾತ್ಮಕ ಪರೀಕ್ಷಾ ಪೂರ್ವ ತರಬೇತಿಯನ್ನು ನೀಡಲಾಗುವುದು. ನಿಲಯದ ಆವರಣದಲ್ಲಿ ಉದ್ಯಾನವನ, ರಸ್ತೆ ಸೇರಿದಂತೆ ಮೂಲಭೂತ ಸೌಕರ್ಯ ಸಹ ಬಲಪಡಿಸಲಾಗುವುದು. ರಾಜ್ಯ ಮಹಿಳಾ ನಿಲಯದ ನೂತನ ಕಟ್ಟಡಕ್ಕೂ ಪ್ರಸ್ತಾವನೆ ಸಲ್ಲಿಸಿ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಾಜಕುಮಾರ ರಾಠೋಡ ಅವರಿಗೆ ಸಚಿವರು ಸೂಚಿಸಿದರು. ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಂಜುಳಾ ಪಾಟೀಲ ಅವರು ಸಂಸ್ಥೆ ಆವರಣದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಂಸ್ಥೆಗಳ ಚಟುವಟಿಕೆಗಳನ್ನು ವಿವರಿಸಿದರು.

**ಪರೀಕ್ಷಾ ಪೂರ್ವ ತರಬೇತಿ ಕೇಂದ್ರ-ಕ್ಕೆ ಭೇಟಿ:** ಇದಕ್ಕು ಮುನ್ನ ನಗರದ ಹೊರವಲಯದ ಅಟಲ್ ಬಿಹಾರಿ ವಾಜಪೇಯಿ ಬಡಾವಣೆಯಲ್ಲಿ ಸುಮಾರು 10 ಕೋಟಿ ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ಐ.ಎ.ಎಸ್, ಐ.ಪಿ.ಎಸ್, ಕೆ.ಎ.ಎಸ್, ಬ್ಯಾಂಕಿಂಗ್ ಸೇರಿದಂತೆ ಸ್ಪರ್ಧಾತ್ಮಕ ಪರೀಕ್ಷೆ ಎದುರಿಸುವ ವಿದ್ಯಾರ್ಥಿಗಳ ತರಬೇತಿ ಕೇಂದ್ರಕ್ಕೆ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ, ಸಂಸದ ರಾಧಾಕೃಷ್ಣ ದೊಡ್ಡಮನಿ, ಶಾಸಕ ಅಲ್ಲಮಪ್ರಭು ಪಾಟೀಲ ಅವರೊಂದಿಗೆ ಭೇಟಿ ನೀಡಿ ಕಾಮಗಾರಿ ಪರಿಶೀಲಿಸಿದರು.

# ಯಾವುದೇ ಕ್ಷಣದಲ್ಲಾದರೂ ಸರ್ಕಾರದ ಪತನ: ವಿಶ್ವೇಶ್ವರ ಕಾಗೇರಿ ಭವಿಷ್ಯ



**ಕಾರವಾರ, ಜೂ.10–** ರಾಜ್ಯದ ಕಾಂಗ್ರೆಸ್ ಸರ್ಕಾರ ಯಾವುದೇ ಕ್ಷಣದಲ್ಲೂ ಪತನವಾಗಬಹುದು. ಬಿಜೆಪಿ ಅಧಿಕಾರ ಹಿಡಿಯುವುದು ನಿಶ್ಚಿತ ಎಂದು ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಹೇಳಿದರು.

ಇಲ್ಲಿನ ಪ್ರೀಮಿಯರ್ ಹೋಟೆಲ್ ಸಭಾಂಗಣದಲ್ಲಿ ಮಂಗಳವಾರ ಬಿಜೆಪಿ ಜಿಲ್ಲಾ ಘಟಕದ ವತಿಯಿಂದ ಮೋದಿ ಸರ್ಕಾರಕ್ಕೆ 11 ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಕೈಗೊಳ್ಳಬೇಕಾದ ಕಾರ್ಯಚಟುವಟಿಕೆ ಕುರಿತು ಚರ್ಚೆಗೆ ಹಮ್ಮಿಕೊಂಡಿದ್ದ ಜಿಲ್ಲಾ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

'ಹಿಂದುತ್ವದ ಪರ ಕೆಲಸ ಮಾಡುತ್ತಿರುವ ಕಾರ್ಯಕರ್ತರಿಗೆ ಕಿರುಕುಳ ನೀಡುವ ಕೆಲಸ ಕಾಂಗ್ರೆಸ್ ಸರ್ಕಾರದಿಂದ ನಡೆಯುತ್ತಿದೆ. ಹಿಂದೂ ಸಂಘಟನೆಗಳ ಕಾರ್ಯಕರ್ತರಿಗೆ ಕಿರುಕುಳ ನೀಡುವುದನ್ನು ನಿಲ್ಲಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದ್ದೇನೆ. ಆದರೆ, ಹಿಂದುತ್ವ ವಿಚಾರಧಾರೆ ಕುಗ್ಗಿಸಲು ಸರ್ಕಾರ ಅಧಿಕಾರಿಗಳ ಮೇಲೆ ಒತ್ತಡ ಹೇರುತ್ತಿದೆ' ಎಂದು ಆರೋಪಿಸಿದರು.

'ಆಡಳಿತದಲ್ಲಿ ಸಮನ್ವಯತೆ ಇಲ್ಲ, ದುರಾಡಳಿತ ಉತ್ತುಂಗ ತಲುಪಿದೆ ಎಂಬುದಕ್ಕೆ ಬೆಂಗಳೂರಿನಲ್ಲಿ ನಡೆದ ಕಾಲ್ತುಳಿತ ದುರಂತವೇ ಕಾರಣ. ಈ ದುರ್ಘಟನೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನಡುವಿನ ಮುಸುಕಿನ ಗುದ್ದಾಟದ ಅಡ್ಡ ಪರಿಣಾಮ ಎಂಬುದು ಜನರಿಗೂ ಅರಿವಿಗೆ ಬರುತ್ತಿದೆ' ಎಂದರು.'ಕೇಂದ್ರದ ಯೋಜನೆಗಳ ಯಶಸ್ವಿ ಅನುಷ್ಠಾನಕ್ಕೆ ರಾಜ್ಯ ಸರ್ಕಾರ ಅಡ್ಡಿಪಡಿಸುತ್ತಿದೆ. ರಾಷ್ಟ್ರೀಯ ಹೆದ್ದಾರಿ ಕಾಮಗಾರಿ, ಮೊಬೈಲ್ ಟವರ್ ಸ್ಥಾಪನೆ, ನೌಕಾನೆಲೆ ಯೋಜನೆ ನಿರಾಶ್ರಿತರಿಗೆ ಹೆಚ್ಚುವರಿ ಪರಿಹಾರ ವಿತರಣೆಗೆ ಅಡ್ಡಿಪಡಿಸುವ ಕೆಲಸ ನಿರಂತರವಾಗಿ ರಾಜ್ಯ ಸರ್ಕಾರದಿಂದ ಮುಂದುವರಿದಿದೆ' ಎಂದು ದೂರಿದರು.

'ಪ್ರಧಾನಿ ನರೇಂದ್ರ ಮೋದಿ ಆಡಳಿತದಲ್ಲಿ ದೇಶದಲ್ಲಿ ಉಂಟಾಗಿರುವ ಸಕಾರಾತ್ಮಕ ಬದಲಾವಣೆಗಳನ್ನು ಜನರಿಗೆ ಕಾರ್ಯಕರ್ತರು ಮನವರಿಕೆ ಮಾಡಿಕೊಡಬೇಕು. ಜೂನ್ 15 ರಿಂದ 25ರ ವರೆಗೆ ಜಿಲ್ಲೆಯಾದ್ಯಂತ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು. ವೃಕ್ಷಾರೋಪಣ ಸೇರಿದಂತೆ ಸರ್ಕಾರದ ಸಾಧನೆಗಳನ್ನು ಬಿಂಬಿಸುವ ಕೆಲಸ ಪಕ್ಷದ ಎಲ್ಲ ಸ್ತರದವರಿಂದ ನಡೆಯಬೇಕು' ಎಂದರು.'ಭ್ರಷ್ಟಾಚಾರ ರಹಿತ ಆಡಳಿತ ನೀಡಿದ್ದು ಮೋದಿ ಸರ್ಕಾರದ ಸಾಧನೆ. ಕೇಂದ್ರ ಸರ್ಕಾರದ ಯೋಜನೆಗಳು ತಳಮಟ್ಟದವರೆಗೆ ಜನರಿಗೆ ತಲುಪಿದೆ' ಎಂದರು.

ಬಿಜೆಪಿ ರಾಜ್ಯ ಘಟಕದ ಉಪಾಧ್ಯಕ್ಷೆ ರೂಪಾಲಿ ನಾಯ್ಕ, ಜಿಲ್ಲಾ ಘಟಕದ ಅಧ್ಯಕ್ಷ ಎನ್.ಎಸ್.ಹೆಗಡೆ, ಪ್ರಮುಖರಾದ ಸುನೀಲ ಹೆಗಡೆ, ವೆಂಕಟೇಶ ನಾಯಕ, ಗೋವಿಂದ ನಾಯ್ಕ, ಈಶ್ವರ ನಾಯ್ಕ, ಇತರರು ಇದ್ದರು.

# ಜಾತಿಗಣತಿ ವರದಿಯಿಂದ ಶೋಷಿತ ಸಮುದಾಯಕ್ಕೆ ಮೋಸ: ಸುನಿಲ್ ಕುಮಾರ್



**ಕಾರ್ಕಳ, ಜೂ.10–** ರಾಜ್ಯ ಸರ್ಕಾರ ತಯಾರಿಸಿದ ಜಾತಿ ಗಣತಿ ವರದಿಯನ್ನು ಖುದ್ದು ಕಾಂಗ್ರೆಸ್ ಹೈಕಮಾಂಡ್ ಕಿತ್ತು ಬಿಸಾಕಿದೆ. 150 ಕೋಟಿ ರೂ.ವೆಚ್ಚ ಮಾಡಿ ತಯಾರಿಸಿದ ಈ ವರದಿ ರಾಜ್ಯದ ತೆರಿಗೆದಾರರಿಗೆ ಮಾಡಿದ ಮಹಾ ಮೋಸದ ಜತೆಗೆ ಹಿಂದುಳಿದ ಹಾಗೂ ಶೋಷಿತ ಸಮುದಾಯಕ್ಕೆ ಮಾಡಿದ ಮಹಾಮೋಸವಾಗಿದೆ ಎಂದು ಶಾಸಕ ಸುನಿಲ್ ಕುಮಾರ್ ಹೇಳಿದ್ದಾರೆ.

ಜಾತಿ ಗಣತಿ ವರದಿಯ ದತ್ತಾಂಶದಲ್ಲಿ ಲೋಪವಿದೆ, ಇದನ್ನು ಪುನರ್ ಪರಿಶೀಲಿಸಬೇಕು ಎಂದು ಭಾರತೀಯ ಜನತಾ ಪಕ್ಷ ಪದೇ ಪದೇ ಆಗ್ರಹಿಸಿತ್ತು. ಆದರೆ ಸಿದ್ದರಾಮಯ್ಯ ಅವರು ಇಂಥ ಸೂಕ್ಷ್ಮ ವಿಚಾರದಲ್ಲೂ ತಮ್ಮ ಎಂದಿನ ಉಡಾಫೆ ಮುಂದುವರಿಸಿದ್ದರು.

ಸಚಿವ ಸಂಪುಟ ಸಭೆಯಲ್ಲಿ ವರದಿ ಮಂಡಿಸಿದ್ದರು. ನಂದಿಬೆಟ್ಟದಲ್ಲಿ ನಡೆಯುವ ಸಚಿವ ಸಂಪುಟ ಸಭೆಯಲ್ಲಿ ವರದಿ ಸ್ವೀಕರಿಸುವುದಕ್ಕೂ ಮುಂದಾಗಿದ್ದರು. ಆದರೆ ಈ ವರದಿಯ ದತ್ತಾಂಶ ಸರಿಯಿಲ್ಲ, ಕಾಲಮಿತಿಯಲ್ಲಿ ಮರು ಗಣತಿ ಮಾಡಿ ಎಂದು ಕಾಂಗ್ರೆಸ್ ಹೈಕಮಾಂಡ್ ಕಿವಿ ಹಿಂಡಿ ವರದಿಯನ್ನು ಕಸದ ಬುಟ್ಟಿಗೆ ಬಿಸಾಕಿದೆ.

ಸಿದ್ದರಾಮಯ್ಯ ಅವರಷ್ಟೇ ಅಲ್ಲ, ಕಾಂಗ್ರೆಸ್ ಹೈಕಮಾಂಡ್ ಕೂಡಾ ರಾಜ್ಯದ ಹಿಂದುಳಿದ ವರ್ಗ, ಶೋಷಿತ ಸಮುದಾಯದ ಭಾವನೆ ಗಳಿಗೆ ನೋವುಂಟು ಮಾಡಿದ್ದಾರೆ.

ಕಳೆದ ಹತ್ತು ವರ್ಷಗಳಿಂದ ಸಿದ್ದರಾಮಯ್ಯ ಅವರು ಇದೇ ವಿಚಾರ ಇಟ್ಟುಕೊಂಡು ರಾಜ್ಯದ ಜನರನ್ನು ಮೂರ್ಖರನ್ನಾಗಿಸುವ ಜತೆಗೆ ಸಮುದಾಯಗಳ ಮಧ್ಯೆ ಅಸಮಾಧಾನ, ಬೇಸರ ಸೃಷ್ಟಿಸಿದ್ದರು. ಈ ಎಲ್ಲ ಅವಾಂತರಗಳ ಕಾರಣಕ್ಕಾಗಿ ಸಿಎಂ ಸಿದ್ದರಾಮಯ್ಯ ಹಾಗೂ ಕಾಂಗ್ರೆಸ್ ಪಕ್ಷ ರಾಜ್ಯದ ಜನತೆಯ ಕ್ಷಮೆಯಾಚಿಸಬೇಕು ಎಂದು ಆಗ್ರಹಿಸಿದ್ದಾರೆ.

# ಪ್ರವಾಸೋದ್ಯಮ ಅಭಿವೃದ್ಧಿಗೆ ಯೋಜನೆ ರೂಪಿಸಲು ಇಲಾಖಾ ನಿರ್ದೇಶಕರಿಗೆ ಸಚಿವ ದಿನೇಶ್ ಗುಂಡೂರಾವ್ ಸೂಚನೆ



**ಮಂಗಳೂರು , ಜೂ.10–** ದಕ್ಷಿಣ ಕನ್ನಡ ಜಿಲ್ಲೆಯನ್ನು ಕೋಮು ಸಂಘರ್ಷಗಳಿಂದ ಹೊರತರುವತ್ತ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಕರಾವಳಿ ಪ್ರವಾಸೋದ್ಯಮ ಅಭಿವೃದ್ಧಿಯ ಕಡೆ ಹೆಚ್ಚಿನ ಗಮನಹರಿಸಿದ್ದಾರೆ. ಜಿಲ್ಲೆಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಯಾಗಿ ಉದ್ಯೋಗ ಸೃಷ್ಟಿಯಾದರೆ, ಉತ್ತಮ ವಾತಾವರಣ ನಿರ್ಮಾಣ ಮಾಡಬಹುದು. ಅಭಿವೃದ್ಧಿಯತ್ತ ಮಂಗಳೂರು ಮುಖ ಮಾಡಿ ನೋಡುವಂತೆ ಮಾಡುವಲ್ಲಿ ಪ್ರವಾಸೋದ್ಯಮವನ್ನು ಪ್ರಮುಖ ಅಸ್ತ್ರವನ್ನಾಗಿ ಬಳಸಲು ಸಚಿವ ದಿನೇಶ್ ಗುಂಡೂರಾವ್ ಮುಂದಾಗಿದ್ದಾರೆ.

ಈ ನಿಟ್ಟಿನಲ್ಲಿ ಬೆಂಗಳೂರಿನ ವಿಕಾಸ ಸೌಧದಲ್ಲಿ ಇಂದು ರಾಜ್ಯ ಪ್ರವಾಸೋದ್ಯಮ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಸಚಿವರು, ಪ್ರಸ್ತುತದಲ್ಲಿರುವ ಜಿಲ್ಲೆಯ ಪ್ರವಾಸೋದ್ಯಮ ಅಭಿವೃದ್ಧಿ ಕಾರ್ಯಗಳಿಗೆ ವೇಗ ನೀಡುವಂತೆ ಸೂಚನೆ ನೀಡಿದರು.

ಮಂಗಳೂರಿನಲ್ಲಿ 12 ಬೀಚ್‌ಗಳ ಅಭಿವೃದ್ಧಿ ಕಾರ್ಯಗಳ ಪ್ರಗತಿ ಕುರಿತು ಮಾಹಿತಿ ಪಡೆದ ಸಚಿವರು, ಖಾಸಗಿ ಸಹಭಾಗಿತ್ವದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ಯೋಜನೆಗಳನ್ನು ರೂಪಿಸುವಂತೆ ಪ್ರವಾಸೋದ್ಯಮ ಇಲಾಖೆ ನಿರ್ದೇಶಕರಿಗೆ ಸೂಚನೆ ನೀಡಿದರು.

ವಿಶೇಷವಾಗಿ ಜಿಲ್ಲೆಯಲ್ಲಿ ಹೋಮ್ ಸ್ಟೇ ನಿರ್ಮಾಣಕ್ಕೆ ಹೆಚ್ಚಿನ ಒತ್ತು ನೀಡುವ ಬಗ್ಗೆ ಸಭೆಯಲ್ಲಿ ಚರ್ಚೆ ನಡೆಸಲಾಯಿತು.ಮೊಗವೀರ ಮಹಾಜನ ಸಭಾ ಅಧ್ಯಕ್ಷರು, ಬ್ಯಾರಿ, ತುಳು ಅಕಾಡಮಿ ಅಧ್ಯಕ್ಷರು ಸಭೆಯಲ್ಲಿ ಪಾಲ್ಗೊಂಡಿದ್ದರು. ಪಾರ್ಕಿಂಗ್ ಸೇರಿದಂತೆ ಮಂಗಳೂರಿನ ಪ್ರವಾಸೋದ್ಯಮ ಅಭಿವೃದ್ಧಿಗೆ ಇರುವ ಸಮಸ್ಯೆಗಳ ಪರಿಹಾರ ಕುರಿತು ಸಭೆಯಲ್ಲಿ ಚರ್ಚೆ ನಡೆಸಲಾಯಿತು.

# ಬಿಎಂಸಿಆರ್‌ಸಿಯಲ್ಲಿ ಅಣಕು ಪ್ರದರ್ಶನ; ಅಗ್ನಿ ಅವಘಡ ತಡೆಗಟ್ಟುವಿಕೆ ಕುರಿತು ಜಾಗೃತಿ

**ಬಳ್ಳಾರಿ, ಜೂ.10–**.ಅಗ್ನಿ ಅವಘಡ ತಡೆಗಟ್ಟುವಿಕೆ ವೇಳೆ ಅನುಸರಿಸಬೇಕಾದ ಮುನ್ನೆಚ್ಚರಿಕೆ ಕ್ರಮಗಳು ಹಾಗೂ ಜಾಗೃತಿ ಮೂಡಿಸುವ ಕುರಿತು ನಗರದ ಬಳ್ಳಾರಿ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಕೇಂದ್ರದ ಆವರಣದಲ್ಲಿ ಜಿಲ್ಲಾ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ ವತಿಯಿಂದ ಮಂಗಳವಾರ ಅಣಕು ಪ್ರದರ್ಶನ ನಡೆಯಿತು.ಜಿಲ್ಲಾಡಳಿತ, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ, ಬಿಮ್ಸ್ ಮತ್ತು ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ ವತಿಯಿಂದ ಆಸ್ಪತ್ರೆಯಲ್ಲಿ ಅಗ್ನಿ ಅವಘಡ ತಡೆಗಟ್ಟುವಿಕೆಯಲ್ಲಿ ಅನುಸರಿಸಬೇಕಾದ ಮುನ್ನೆಚ್ಚರಿಕೆ ಕ್ರಮಗಳು ಮತ್ತು ಜವಾಬ್ದಾರಿಗಳು ಹಾಗೂ ಜಾಗೃತಿ ಮೂಡಿಸುವ ಕುರಿತು ಅಣಕು ಪ್ರದರ್ಶನದಲ್ಲಿ ವೈದ್ಯರು, ಸಿಬ್ಬಂದಿ ಮತ್ತು ಸಾರ್ವಜನಿಕರಿಗೆ ಮನವರಿಕೆ ಮಾಡಲಾಯಿತು.

# ಪ್ರಧಾನಿ ನರೇಂದ್ರ ಮೋದಿಯಿಂದ ದೇಶಕ್ಕೆ ಅಪಾರ ಗೌರವ ದೊರೆತಿದೆ: ಶ್ರೀರಾಮುಲು ಪ್ರಶಂಸೆ



**ಬಳ್ಳಾರಿ, ಜೂ.10–** ನರೇಂದ್ರ ಮೋದಿಜಿ ಅವರು ದೇಶದ ಪ್ರಧಾನಿಯಾಗುವುದಕ್ಕೂ ಮೊದಲು ಭಾರತ ತೀರಾ ಸಂಕಷ್ಟದಲ್ಲಿತ್ತು, ಮೋದಿ ಪ್ರಧಾನಿಯಾದ ಮೇಲೆ ಇಡೀ ವಿಶ್ವಕ್ಕೆ ಭಾರತ ಮಾದರಿ ದೇಶವಾಗಿ ಹೊರಹೊಮ್ಮಿದೆ ಎಂದು ಮಾಜಿ ಸಚಿವ ಬಿ ಶ್ರೀರಾಮುಲು ಅಭಿಪ್ರಾಯಪಟ್ಟರು.

ಅವರು ಪ್ರಧಾನಿ ನರೇಂದ್ರ ಮೋದಿ ಸರ್ಕಾರ 11 ವರ್ಷ ಪೂರೈಸಿದ ಹಿನ್ನೆಲೆ ಹನ್ನೊಂದು ವರ್ಷದ ಸಾಧನೆ ಕುರಿತು ನಗರದ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಶ್ರೀರಾಮುಲು , ನರೇಂದ್ರ ಮೋದಿ ಬರೋದಕ್ಕೂ ಮೊದಲು ಭಾರತವನ್ನು ಭಿಕ್ಷುಕರ ದೇಶ, ಹಾವಾಡಿಗರ ದೇಶ ಎಂದು ಕರೆಯುತ್ತಿದ್ದರು

ಈಗ ಕಾಲ ಬದಲಾಗಿದೆ, ಭಾರತವನ್ನು ಪ್ರಧಾನಿ ಮೋದಿ ವಿಶ್ವವೇ ಭಾರತದ ಕಡೆ ತಿರುಗಿ ನೋಡುವಂತೆ ಮಾಡಿದ್ದಾರೆ. ನೆಹರು ವೈಯಕ್ತಿಕ ಹಿತಾಸಕ್ತಿಗೆ ಕೆಲಸ ಮಾಡಿದ್ದರು.ದೇಶದ ಅಭಿವೃದ್ಧಿ ಬಗ್ಗೆ ನೆಹರು ಕುಟುಂಬ ಚಿಂತನೆ ಮಾಡಿಲ್ಲ.ವೈಯಕ್ತಿಕ ಅಭಿವೃದ್ಧಿ ಹೊಂದಿದ್ದ ಹೊರತು ದೇಶ ಅಭಿವೃದ್ಧಿ ಮಾಡಲಿಲ್ಲ. ಚೀನಾ–ಭಾರತದ ಯುದ್ಧದಲ್ಲಿ ಭಾರತ ಮಂಡಿಯೂರಿತು.ಇದಕ್ಕೆ ನೆಹರು ನಿಲುವು ಕಾರಣ ವಾಯಿತು. ನೆಹರು ಅವರ ಕಾಲಘಟ್ಟ ಕೆಟ್ಟದಾಗಿತ್ತು, ಸಾವಿರಾರು ಸೈನಿಕರು ಹುತಾತ್ಮರಾದರು ಎಂದು ನೆಹರು ಮತ್ತು ಇಂದಿರಾ ಗಾಂಧಿ ಕಾಲಘಟ್ಟದ ರಾಜಕೀಯವನ್ನು ವಿಶ್ಲೇಷಿಸಿದರು.

ಇಂದಿರಾಗಾಂಧಿ ಸರ್ವಾಧಿಕಾರಿ ಧೋರಣೆಯಿಂದ ತುರ್ತು ಘೋಷಣೆ ಮಾಡಿದ್ದರು. ಕಮಿಷನ್ ಮಧ್ಯವರ್ತಿಗಳನ್ನು ಬೆಳೆಸೋದೇ ಗಾಂಧಿ ಕುಟುಂಬದ ಕೆಲಸ ರಾಹುಲ್ ಸೋನಿಯಾ ಕೂಡ ನ್ಯಾಷನಲ್ ಹೆರಾಲ್ಡ್ ಕೇಸ್‌ನಲ್ಲಿ ಜೈಲಿಗೆ ಹೋಗುತ್ತಾರೆ. ನ್ಯಾಷನಲ್ ಹೆರಾಲ್ಡ್ ದೊಡ್ಡ ಗೋಲ್‌ಮಾಲ್, ಪ್ರಕರಣದಲ್ಲಿ ಕರ್ನಾಟಕದ ನಾಯಕರು ಇದ್ದಾರೆ.

ವಿಶ್ವದಲ್ಲಿ ಭಾರತಕ್ಕೆ ಗೌರವ ಸಿಗುವಂತೆ ಮಾಡಿದ್ದು ಮೋದಿ.60 ವರ್ಷದ ಕಾಂಗ್ರೆಸ್ ಆಳ್ವಿಕೆಯಲ್ಲಿ ಭಾರತ ದುರ್ಬಲ ದೇಶವಾಗಿತ್ತು. ಯುಪಿಎ ಆಳ್ವಿಕೆಯಲ್ಲಿ ದೇಶದಲ್ಲಿ ಭ್ರಷ್ಟಾಚಾರ ತುಂಬಿ ತುಳುಕುತ್ತಿತ್ತು ಎಂದು ಕೇಂದ್ರದಲ್ಲಿ ಕಾಂಗ್ರೆಸ್ ಆಡಳಿತದ ವಿರುದ್ಧ ಹರಿಹಾಯ್ದರು. ಹತ್ತು ವರ್ಷದಲ್ಲಿ ಭಾರತ ಆರ್ಥಿಕವಾಗಿ ಪ್ರಬಲ ದೇಶವಾಗಿ ಬದಲಾಗಿದೆ. ವಿರೋಧ ಪಕ್ಷದಲ್ಲಿ ಕೂಡುವಷ್ಟು ಸ್ಥಾನವನ್ನು ಮಾತ್ರ ಕಾಂಗ್ರೆಸ್ ಲೋಕಸಭೆಯಲ್ಲಿ ಗಳಿಸಿದೆ. ಕಾಂಗ್ರೆಸ್ ಆಳ್ವಿಕೆಯ ರಾಜ್ಯದಲ್ಲಿ ಕ್ರೈಂ ಪ್ರಕರಣ ಹೆಚ್ಚಾಗಿವೆ.

ದೇಶದಲ್ಲಿ ಹೆಚ್ಚು ವಿಮಾನ ನಿಲ್ದಾಣ ಸ್ಥಾಪನೆ,ರೈಲ್ವೆ ಕಾಮಗಾರಿ ರಾಷ್ಟ್ರೀಯ ಹೆದ್ದಾರಿ ನಿರ್ಮಾಣ ಹೆಚ್ಚಾಗಿ ನಿರ್ಮಾಣವಾಗಿವೆ.370 ರದ್ದಾದ ಬಳಿಕ ದೇಶಕ್ಕೆ ಬೆಂಕಿ ಹತ್ತುತ್ತದೆ ಎಂದಿದ್ದರು,ಆದರೆ ಮೋದಿ ಅದ್ಯಾವುದಕ್ಕೂ ಅವಕಾಶ ಕೊಡಲಿಲ್ಲ.

ತ್ರಿವಳಿ ತಲಾಕ್ ರದ್ದು, ವಕ್ಸ್ ಕಾಯ್ದೆ ತಿದ್ದುಪಡಿ ಸೇರಿದಂತೆ ಹಲವು ಜನಪರ ಕೆಲಸ ಮಾಡಿದ್ದಾರೆ. ಉಗ್ರರನ್ನು ಮಟ್ಟ ಹಾಕುವ ಕೆಲಸ ಮಾಡಿ ಶಾಂತಿ ನೆಲೆಸುವಂತೆ ಮಾಡಿದ್ದಾರೆ ಎಂದು ಮೋದಿ ಸರ್ಕಾರದ ಯೋಜನೆ ಮತ್ತು ಅಭಿವೃದ್ಧಿಯ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದರು.

## ಬೀದರ್‌ನಲ್ಲಿ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ

# ಮೂರು ತಿಂಗಳಲ್ಲಿ ಸರ್ಕಾರಕ್ಕೆ ವರದಿ: ಪ್ರೊ.ಗೋವಿಂದರಾವ್



**ಬೀದರ್, ಜೂ.10–** ರಾಜ್ಯದ ಎಲ್ಲ ಜಿಲ್ಲೆಗಳಲ್ಲಿನ ಶಿಕ್ಷಣ, ಆರೋಗ್ಯ, ತಲಾ ಆದಾಯ, ಕೃಷಿ, ಹೈನುಗಾರಿಕೆ, ಕೈಗಾರಿಕೆ, ಸೇವಾ ಕ್ಷೇತ್ರ ಹಾಗೂ ಸಾಮಾಜಿಕ ವಲಯಗಳ ಒಟ್ಟು 45 ಮಾನದಂಡಗಳ ಆಧಾರದ ಮೇಲೆ ಹಿಂದುಳಿದ ತಾಲ್ಲೂಕುಗಳ ಅಭಿವೃದ್ಧಿಗೆ ಅಗತ್ಯವಿರುವ ಸೌಲಭ್ಯಗಳನ್ನು ಒದಗಿಸಲು ರಾಜ್ಯಾದ್ಯಂತ ಅಧ್ಯಯನ ಕೈಗೊಂಡಿರುವ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯ ಮೂರು ತಿಂಗಳಲ್ಲಿ ಸರಕಾರಕ್ಕೆ ತನ್ನ ವರದಿಯನ್ನು ಸಲ್ಲಿಸಲಿದೆ ಎಂದು ಸಮಿತಿಯ ಅಧ್ಯಕ್ಷರಾದ ಪ್ರೊ. ಗೋವಿಂದರಾವ್ ಇಂದಿಲ್ಲಿ ತಿಳಿಸಿದರು.

ಬೀದರ್ ಸೇರಿ ಈಗಾಗಲೇ 28 ಜಿಲ್ಲೆಗಳಲ್ಲಿ ಅಧ್ಯಯನ ಪೂರ್ಣಗೊಂಡಿದೆ. ಡಾ.ಡಿ.ಎಂ.ನಂಜುಂಡಪ್ಪ ವರದಿ ಅನುಷ್ಠಾನದಲ್ಲಿ ಆದ ಅಭಿವೃದ್ಧಿ ಹಾಗೂ ಬದಲಾವಣೆಗಳ ಹಿನ್ನೆಲೆಯಲ್ಲಿ ಅಧ್ಯಯನ ಮಾಡಿ ಅದಕ್ಕೆ ಪೂರಕವಾಗಿ ಅಸಮತೋಲನ ನಿವಾರಣೆಗೆ ಅಗತ್ಯವಿರುವ ಅಂಶಗಳ ವರದಿಯನ್ನು ಸರಕಾರಕ್ಕೆ ಶಿಫಾರಸ್ಸು ಮಾಡಲಾಗುವುದೆಂದು ಅವರು ತಿಳಿಸಿದರು.

ರಾಜ್ಯದಲ್ಲಿ 153 ಹಿಂದುಳಿದ ತಾಲ್ಲೂಕುಗಳಿವೆ. ನೀರಾವರಿ, ಮೂಲಸೌಕರ್ಯ, ಕೈಗಾರಿಕೆ, ತಲಾ ಆದಾಯ, ಉದ್ಯೋಗ, ಕೃಷಿ ಮುಂತಾದ ಐದು ಪ್ರಮುಖ ವಲಯಗಳನ್ನು ಗುರುತಿಸಿ ವಾಸ್ತವಾಂಶ ಆಧರಿಸಿ ವರದಿ ಸಿದ್ಧಪಡಿಸಲಾಗುವುದು. ಉದ್ಯೋಗಾವಕಾಶಗಳ ಸೃಷ್ಠಿ, ಉತ್ತಮ ಶಿಕ್ಷಣ, ಕೌಶಲ್ಯ ಅಭಿವೃದ್ಧಿ, ಮಹಿಳಾ ಆಧಾರಿತ ಘಟಕಗಳು, ತಂತ್ರಜ್ಞಾನ, ಕೈಗಾರಿಕೆಗಳ ಸ್ಥಾಪನೆಯಂತಹ ಸಲಹೆಗಳು, ಇಂದು ಜನಪ್ರತಿನಿಧಿಗಳಿಂದ ಹಾಗೂ ತಜ್ಞರಿಂದ ಬಂದಿವೆ. ರಾಜ್ಯದ ಹಿಂದುಳಿದ ಪ್ರದೇಶಗಳ ಅಭಿವೃದ್ಧಿಗೆ 2007 ರಿಂದ 2023 ರವರೆಗೆ 43456 ಕೋಟಿ ಶಿಫಾರಸ್ಸು ಮಾಡಲಾಗಿತ್ತು. ಅದರಲ್ಲಿ 35380 ಕೋಟಿ ಬಿಡುಗಡೆ ಆಗಿ 32610 ಕೋಟಿ ಖರ್ಚಾಗಿದೆ ಎಂದರು.

ರಾಜ್ಯದ ನಾಲ್ಕು ವಿಭಾಗಗಳ ಪೈಕಿ ಕಲ್ಯಾಣ ಕರ್ನಾಟಕದಲ್ಲಿ ಹೆಚ್ಚು ಹಿಂದುಳಿದ ಪ್ರದೇಶಗಳಿವೆ. ತಾಲ್ಲೂಕಾ ಮಟ್ಟದಲ್ಲಿ ಹೋಗಿ ಅಧ್ಯಯನ ಮಾಡಿ ಸರಕಾರಕ್ಕೆ ವರದಿ ಸಲ್ಲಿಸಲಾಗುವುದೆಂದರು. ರಾಜ್ಯದ ಕಿರೀಟ ಪ್ರಾಯವಾಗಿರುವ ಬೀದರ ಜಿಲ್ಲೆಯಲ್ಲಿ 4 ಅತ್ಯಂತ ಹಿಂದುಳಿದ ತಾಲ್ಲೂಕುಗಳಿವೆ. 2014–15ರ ಜಿಲ್ಲಾ ಮಾನವ ಅಭಿವೃದ್ಧಿ ವರದಿಯಂತೆ ಬೀದರ ಜಿಲ್ಲೆಯು ರಾಜ್ಯದಲ್ಲಿ 22ನೇ ಸ್ಥಾನದಲ್ಲಿರುತ್ತದೆ. 2025ನೇ ಅಂಕಿ ಅಂಶಗಳ ಪ್ರಕಾರ ಬೀದರ ಜಿಲ್ಲೆಯ 2022ನೇ ಸಾಲಿನ ಜಿಡಿಡಿಪಿ 2844018.00 ಲಕ್ಷಗಳಾಗಿವೆ ಎಂದರು.

ಬೀದರ ಜಿಲ್ಲೆಯಲ್ಲಿ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಅಭಿವೃದ್ಧಿ, ಸಂಪರ್ಕ ಸುಧಾರಣೆ, ಕೌಶಲ್ಯ ಅಭಿವೃದ್ಧಿ, ಶಿಕ್ಷಕರ ಭರ್ತಿ ಹಾಗೂ ತರಬೇತಿ, ಉನ್ನತ ಹಾಗೂ ತಂತ್ರಜ್ಞಾನ ಆಧಾರಿತ ಶಿಕ್ಷಣ, ಪ್ರವಾಸೋದ್ಯಮ ಅಭಿವೃದ್ಧಿ, ವಲಸೆ, ಕೃಷಿ ತೋಟಗಾರಿಕೆ ಆಧಾರಿತ ಕೈಗಾರಿಕೆಗಳು ಮುಂತಾದ ಸಲಹೆಗಲನ್ನು ಸಮಿತಿಯು ಆಲಿಸಿತು.

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ಅವರು ಮಾತನಾಡಿ, ರಾಜ್ಯ ಸರ್ಕಾರ 2024 ರಲ್ಲಿ ಪ್ರಾದೇಶಿಕ ಅಸಮತೋಲನ ನಿವಾರಣೆಗಾಗಿ ಆರ್ಥಿಕ ತಜ್ಞರನ್ನೊಳಗೊಂಡ ಸಮಿತಿ ರಚಿಸಿದ್ದು, ಈ ಸಮಿತಿಯು ಕೃಷಿ, ಕೈಗಾರಿಕೆ, ಆರ್ಥಿಕ ಮೂಲ ಸೌಲಭ್ಯ, ಸಾಮಾಜಿಕ ಸೌಲಭ್ಯ, ಹಣಕಾಸಿನ ಮತ್ತು ತಾಂತ್ರಿಕ ಮೂಲ ಸೌಲಭ್ಯ ಮುಂತಾದ ವಲಯಗಳ ಅಭಿವೃದ್ಧಿಯನ್ನು ಗುರುತಿಸಿ ಸೂಚ್ಯಂಕ ನಿಗದಿಪಡಿಸಲಿದೆ. ಸಮಿತಿಯು 3 ತಿಂಗಳಲ್ಲಿ ಸರ್ಕಾರಕ್ಕೆ ವರದಿ ಸಲ್ಲಿಸುತ್ತದೆ ಎಂದರು.

ತಲಾ ಆದಾಯ ಒಂದೇ ಸೂಚ್ಯಂಕ ಆಗಬಾರದು ವಾಸ್ತವಾಂಶದ ಆಧಾರದ ಮೇಲೆ ಅಧ್ಯಾಯನದ ವರದಿ ನಡೆಸುವಂತೆ ಸಲಹೆ ನೀಡಿದರು. ಹೋಬಳಿವಾರು, ತಾಲೂಕಾವಾರು ನೀರಾವರಿ, ಕೃಷಿ, ಉದ್ಯೋಗ ಸಮಸ್ಯೆ, ಶಿಕ್ಷಣ ಸಮಸ್ಯೆ ಅಪೌಷ್ಟಿಕತೆ ಸಮಸ್ಯೆ, ವಲಸೆ ಸಮಸ್ಯೆ ಸಹ ಅಧ್ಯಾಯನ ಮಾಡುವಂತೆ ತಿಳಿಸಿದರು. ಪ್ರಾಥಮಿಕ, ಪ್ರೌಢ, ಪದವಿ ಶಿಕ್ಷಣ ಸುಧಾರಣೆ ಮಾಡುವ ಜೋತೆಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕೆಂದರು. ನಮ್ಮ ಸರ್ಕಾರ ಬಂದ ಮೇಲೆ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಗೆ 5000 ಕೋಟಿ ನೀಡಿದ್ದೇವೆ ಹಾಗೂ ಖಾಲಿ ಇರುವ ಶಿಕ್ಷಕರ ಹುದ್ದೆಗಳಿಗೆ 15 ಸಾವಿರ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗಿದೆ ಮತ್ತು ಮುಂದಿನ ದಿನಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳ ನೇಮಕಾತಿಗೆ ಭರ್ತಿ ಮಾಡಿಕೊಳ್ಳಲಾಗುವುದು ಎಂದರು.

ಜಿಲ್ಲೆಯಲ್ಲಿ ಕೈಗಾರಿಕಾ ಅಭಿವೃದ್ಧಿ ಬಹಳ ಮುಖ್ಯವಾಗಿದೆ ಇಲ್ಲಿನ ಯುವಕರಿಗೆ ಉದ್ಯೋಗ ದೊರೆಯುವಂತೆ ಮಾಡುವುದು ಹಾಗೂ ವಲಸೆ ಹೋಗುವುದನ್ನು ಕಡಿಮೆ ಮಾಡುವುದು ಬಹಳ ಮುಖ್ಯವಾಗಿದೆ ಹಾಗೂ ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಗಾಗಿ ಹಲವಾರು ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಾಗಿದೆ ಎಂದು ತಿಳಿಸಿದರು.

ಪೌರಾಡಳಿತ ಹಾಗೂ ಹಜ್ ಸಚಿವ ರಹೀಂ ಖಾನ್, ಬೀದರ ದಕ್ಷಿಣ ಶಾಸಕರಾದ ಡಾ.ಶೈಲೇಂದ್ರ ಕೆ.ಬೆಲ್ದಾಳೆ, ವಿಧಾನ ಪರಿಷತ್ ಸದಸ್ಯ ಡಾ.ಎಂ.ಜಿ.ಮುಳೆ, ನಗರಸಭೆ ಅಧ್ಯಕ್ಷ ಎಂ.ಡಿ.ಗೌಸ್, ಜಿಲ್ಲಾ ವಾಣಿಜ್ಯ ಕೈಗಾರಿಕಾ ಸಂಸ್ಥೆ ಅಧ್ಯಕ್ಷ ಬಿ.ಜಿ.ಶೆಟಕಾರ, ವಕೀಲರ ಸಂಘದ ಅಧ್ಯಕ್ಷ ಅಶೋಕ ಮನೂರೆ, ಶಿಕ್ಷಣ ತಜ್ಞರಾದ ಪ್ರೊ. ಜಗನ್ನಾಥ ಹೆಬ್ಬಾಳೆ, ಎಸ್.ಎಂ. ಜನವಾಡಕರ್, ಉದ್ಯಮಿ ಬಸವರಾಜ ಧನ್ನೂರ ಹಾಗೂ ಇತರರು ತಮ್ಮ ಸಲಹೆಗಳನ್ನು ಸಮಿತಿಗೆ ತಿಳಿಸಿದರು.

# ರವಿಕುಮಾರ್,ನಾರಾಯಣಸ್ವಾಮಿ ವಿರುದ್ಧ ಡಿಎಸ್‌ಎಸ್ ಪ್ರತಿಭಟನೆ



**ಬಳ್ಳಾರಿ, ಜೂ.10–** ಬಿಜೆಪಿ ಮುಖಂಡರಾದ ಛಲವಾದಿ ನಾರಾಯಣಸ್ವಾಮಿ ಮತ್ತು ಎನ್. ರವಿಕುಮಾರ್ ಅವರನ್ನು ವಿಧಾನ ಪರಿಷತ್ ಸ್ಥಾನದಿಂದ ಕೈಬಿಡಬೇಕು ಎಂದು ಆಗ್ರಹಿಸಿ ಇಂದು ನಗರದಲ್ಲಿ ಡಾ.ಡಿ.ಜಿ.ಸಾಗರ್ ನೇತೃತ್ವದ ಕರ್ನಾಟಕ ದಲಿತ ಸಂಘರ್ಷ ಸಮಿತಿ ಬೃಹತ್ ಪ್ರತಿಭಟನೆ ನಡೆಸಿತು. ನಗರದ ಅಂಬೇಡ್ಕರ್ ಕಾಂಪ್ಲೆಕ್ಸ್ ನಿಂದ ಡಿಸಿ ಕಚೇರಿ ವರೆಗೆ ಪ್ರತಿಭಟನೆ ನಡೆಸಿ ರಾಜ್ಯಪಾಲರಿಗೆ ಬರೆದ ಪತ್ರವನ್ನು ಜಿಲ್ಲಾಡಳಿತಕ್ಕೆ ಸಲ್ಲಿಸಲಾಯ್ತು.ಕಾಂಗ್ರೆಸ್ ನ ಉತ್ತಮ ಆಡಳಿತದಿಂದ ಬಿ.ಜೆ.ಪಿಯು ಹತಾಶವಾಗಿ ಜಾತ್ಯಾತೀತ, ಅಂಬೇಡ್ಕರ್‌ವಾದಿ ಪ್ರಿಯಾಂಕ್ ಖರ್ಗೆಯವರ ಮೇಲೆ ಅಸಂಸದೀಯ ಪದ ಬಳಸಲಾಗಿದೆ ಇದನ್ನು ಖಂಡಿಸುತ್ತದೆ.

ಇತ್ತೀಚೆಗೆ ಕಲಬುರ್ಗಿ ಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಖರ್ಗೆ ಅವರ ವಿರುದ್ಧ ನಡೆದ ಪ್ರತಿಭಟನೆ ರ್‍ಯಾಲಿ ಸಂದರ್ಭದಲ್ಲಿ ಅಲ್ಲಿನ ಡಿಸಿಯವರು. ಪಾಕಿಸ್ತಾನದಿಂದ ಬಂದವರಂತೆ ಕಾಣುತ್ತದೆಂದು ಆಗೌರವದಿಂದ ವಿಧಾನ ಪರಿಷತ್‌ನ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್ ಮಾತನಾಡಿದ್ದರು. ಈ ಮಾತನ್ನು ಖಂಡಿಸುತ್ತದೆ. ಸದನದಲ್ಲಿ ನಾಡಿನ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ, ಔದ್ಯೋಗಿಕ, ಸಮುದಾಯಿಕ ಸಮಸ್ಯೆಗಳು ಹಾಗೂ ದಲಿತರ ಮೇಲಿನ ದೌರ್ಜನ್ಯಗಳ ಬಗೆಗೆ ಗಂಭೀರವಾಗಿ ಚರ್ಚಿಸದ, ಚರ್ಚೆಯಲ್ಲಿ ಪಾಲ್ಗೊಳ್ಳದ ಮನುವಾದಿ ನಾರಾಯಣಸ್ವಾಮಿ ಬಿ.ಜೆ.ಪಿ ಆರ್.ಎಸ್.ಎಸ್ ನ ಎಂಜಲಿಗೆ ಆಸೆಪಟ್ಟು ಅಸಂವಿಧಾನಿಕವಾಗಿ ವರ್ತಿಸುತ್ತಿದ್ದಾರೆ. ಇತ್ತೀಚಿನ ದಿನಗಳಲ್ಲಿ ಯಾವುದೇ ಘನ ಉದ್ದೇಶವೂ ಇಲ್ಲದೇ, ಸಣ್ಣ ಪುಟ್ಟ ನೆಪ ಇಟ್ಟುಕೊಂಡು ಕಲಬುರ್ಗಿಗೆ ಬಂದು ಖರ್ಗೆಯವರನ್ನು ನಿಂಧಿಸುವುದನ್ನೇ ಕಾಯಕವಾಗಿ ಮಾಡಿಕೊಂಡಿದ್ದಾರೆ. ಇದಲ್ಲದೇ ಖರ್ಗೆ ಕುಟುಂಬದ ವಿರುದ್ಧ ಸುಳ್ಳು ಅಪಾದನೆ ಹೊರಿಸುವ ಮೂಲಕ ಸಮಾಜಕ್ಕೆ ತಪ್ಪು ಸಂದೇಶವನ್ನು ನೀಡುತ್ತ, ಕಲ್ಯಾಣ ಕರ್ನಾಟಕ ಭಾಗದ ಜನರಲ್ಲಿ, ಸಮುದಾಯಗಳಲ್ಲಿ ವಿಷ ಬಿತ್ತಿ ಸಾಮರಸ್ಯವನ್ನು ಹಾಳು ಮಾಡುತ್ತಿದ್ದಾರೆ. ಇವರ ಈ ಸಮಾಜಘಾತುಕತನವನ್ನು ತೀವ್ರವಾಗಿ ವಿರೋಧಿಸುತ್ತೇವೆ. ಮನುವಾದಿ ನಾರಾಯಣಸ್ವಾಮಿ ಸಂವಿಧಾನಬದ್ಧ ಹುದ್ದೆಗೆ ಚ್ಯುತಿ ತರುವ ರೀತಿಯಲ್ಲಿ ನಡೆದುಕೊಳ್ಳುವುದು ಆ ಹುದ್ದೆಯ ಘನತೆಗೆ ದಕ್ಕೆ ತಂದಿರುವ ಕಾರಣ ವಿಧಾನ ಪರಿಷತ್ ಸದಸ್ಯತ್ವದಿಂದ ಹಾಗೂ ವಿರೋಧ ಪಕ್ಷದ ನಾಯಕ ಸ್ಥಾನದಿಂದ ಅವರನ್ನು ಈ ಕೂಡಲೇ ವಜಾಗೊಳಿಸಬೇಕೆಂದು ಒತ್ತಾಯಿಸುತ್ತಿದೆ.

# ಕನಕದುರ್ಗಮ್ಮ ದೇವಸ್ಥಾನಕ್ಕೆ ಆಡಳಿತಾಧಿಕಾರಿಯಾಗಿ ಸಹಾಯಕ ಆಯುಕ್ತ ಪ್ರಮೋದ್ ನೇಮಕ



**ಬಳ್ಳಾರಿ,ಜೂ.10–**ನಗರದ ಶ್ರೀ ಕನಕದುರ್ಗಮ್ಮ ದೇವಸ್ಥಾನದ ಆಡಳಿತಾಧಿಕಾರಿಯಾಗಿ ಸಹಾಯಕ ಆಯುಕ್ತರಾದ ಪಿ.ಪ್ರಮೋದ್ ಅವರನ್ನು ನೇಮಿಸಿ ಬೆಂಗಳೂರಿನ ಧಾರ್ಮಿಕ ದತ್ತಿಗಳ ಇಲಾಖೆಯ ಆಯುಕ್ತರು ಆದೇಶಿಸಿದ್ದಾರೆ.

ಶ್ರೀ ಕನಕದುರ್ಗಮ್ಮ ದೇವಸ್ಥಾನವು ಧಾರ್ಮಿಕ ದತ್ತಿ ಇಲಾಖೆಯ ಪ್ರವರ್ಗ ಎ ಅಧಿಸೂಚಿತ ದೇವಸ್ಥಾನ'ವಾಗಿರುವ ದೇವಾಲಯಕ್ಕೆ ನಾಲ್ಕು ವಂಶಪಾರಂಪರ್ಯ ಧರ್ಮ ಕರ್ತರು, ವಾರಸುದಾರರನ್ನು ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮದಾಯ ದತ್ತಿಗಳ ಅಧಿನಿಯುಮ 1997 ಕಲಂ 25(ಎ)(3) ರನ್ವಯ ನೇಮಕಾತಿ ಮಾಡುವವರೆಗೆ ಆಡಳಿತಾಧಿಕಾರಿ ಯಾಗಿ ಸಹಾಯಕ ಆಯುಕ್ತರಾದ ಪಿ.ಪ್ರಮೋದ್ ಅವರು ಪ್ರಭಾರೆ ವಹಿಸಿಕೊಂಡಿರುತ್ತಾರೆ ಎಂದು ಪ್ರಕಟಣೆ ತಿಳಿಸಿದೆ.

# ಶಿಕ್ಷಣ ಸಂಸ್ಥೆಗಳಿಗೆ ಹಳೆಯ ವಿದ್ಯಾರ್ಥಿಗಳೇ ಜೀವಾಳ: ನಮೋಶಿ

**ಕಲಬುರಗಿ, ಜೂ.10–** ಒಂದು ಶಿಕ್ಷಣ ಸಂಸ್ಥೆಗೆ ಅದರಲ್ಲಿ ಶಿಕ್ಷಣ ಪಡೆದು ಜೀವನದಲ್ಲಿ ಉನ್ನತ ಸಾಧನೆ ಮಾಡಿದ ವಿದ್ಯಾರ್ಥಿಗಳು ಸಹ ಅದರ ಜೀವಾಳ ಆಗಿರುತ್ತಾರೆ ಎಂದು ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಅಧ್ಯಕ್ಷರು ಹಾಗೂ ವಿಧಾನ ಪರಿಷತ್ ಸದಸ್ಯ ಶಶೀಲ್ ನಮೋಶಿ ಹೇಳಿದರು

ನಗರದ ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಪಿಡಿಎ ಇಂಜಿನಿಯರಿಂಗ್ ಕಾಲೇಜು ಹಾಗೂ ಆಸ್ಟ್ರೇಲಿಯಾದ ಸಿಡ್ನಿಯಲ್ಲಿ ಮುಖ್ಯ ಕಚೇರಿ ಹೊಂದಿರುವ ಅಲ್ಫಾಲಿಯೋ ಕಂಪನಿಯ ಜೋತೆ ಒಪ್ಪಂದ ಕಾರ್ಯಕ್ರಮದಲ್ಲಿ ಮಾತನಾಡುತ್ತ, ನಮ್ಮ ಸಂಸ್ಥೆಯ ಪಿಡಿಎ ಇಂಜಿನಿಯರಿಂಗ ಕಾಲೇಜಿನಲ್ಲಿ ಅಭ್ಯಾಸ ಮಾಡಿ ಇಂದು ವಿದೇಶಗಳಲ್ಲಿ ಅನೇಕ ಸಾಧನೆ ಮಾಡಿ ಜೀವನ ನಡೆಸುತ್ತಿರುವ ಅನೇಕ ವಿದ್ಯಾರ್ಥಿಗಳನ್ನು ನಾವು ನೋಡಬಹುದು. ಇಂತಹ ಸಾಧನಾ ಶಿಖರವೇರಿದ ಇಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ವಿಭಾಗದ 4 ವಿದ್ಯಾರ್ಥಿಗಳು ಇಂದು ತಾವು ಅಭ್ಯಾಸ ಮಾಡಿದ ಈ ಕಾಲೇಜಿನ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಕಾಲೇಜಿನಲ್ಲಿಯೆ ತಮ್ಮ ಸ್ಟಾರ್ಟ್ ಅಪ್ ಕಂಪನಿ ಪ್ರಾರಂಭಿಸಿರುವದು ಪ್ರಶಂಸನಿಯ. ಇವರು ನಮ್ಮ ಸಂಸ್ಥೆಯಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಮಾದರಿಯಾಗಿದ್ದಾರೆ ಎಂದು ಹೇಳಿದರು.



ಕಲಬುರಗಿ ನಗರದ ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಪಿಡಿಎ ಇಂಜಿನಿಯರಿಂಗ್ ಕಾಲೇಜು ಹಾಗೂ ಆಸ್ಟ್ರೇಲಿಯಾದ ಸಿಡ್ನಿಯಲ್ಲಿ ಮುಖ್ಯ ಕಚೇರಿ ಹೊಂದಿರುವ ಅಲ್ಫಾಲಿಯೋ ಕಂಪನಿಯ ಜೋತೆ ಒಪ್ಪಂದಕ್ಕೆ ಸಹಿ ಹಾಕಿ ಹೈ.ಕ.ಶಿಕ್ಷಣ ಸಂಸ್ಥೆಯ ಅಧ್ಯಕ್ಷರೂ ಆದ ವಿಧಾನ ಪರಿಷತ್ ಸದಸ್ಯ ಶಶೀಲ್ ನಂಒಶಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಅಲ್ಪಾಲಿಯೋ ಕಂಪನಿಯ ಸ್ಥಾಪಕರು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಚಂದನ ಮಿಸ್ಕೀನ್ ಮಾತನಾಡಿ ನಮ್ಮ ಅಲ್ಫಾಲಿಯೋ ಕಂಪನಿಯು ನವಂಬರ್ 2021 ರಲ್ಲಿ ಆಸ್ಟ್ರೇಲಿಯಾದ ಸಿಡ್ನಿ ಹಾಗೂ ಭಾರತದ ಹೈದರಾಬಾದ್ ನಲ್ಲಿ ಕಾರ್ಯಾರಂಭ ಮಾಡಿತು. ಈ ಕಂಪನಿಯು ಡಿಜಿಟಲ್ ಕ್ಷೇತ್ರದಲ್ಲಿ ಗ್ರಾಹಕ ಸಂಬಂಧ ನಿರ್ವಹಣೆ ಹಾಗೂ ಸಮಸ್ಯೆಗಳ ಪರಿಹಾರ ಒದಗಿಸುತ್ತದೆ. ಸೇಲ್ಸ್ ಪೋರ್ಸ್ ಪಾಲುದಾರರಾಗಿರುವ ನಮ್ಮ ಸಂಸ್ಥೆಯು ಸೇಲ್ಸ್ ಪೋರ್ಸ್ ಪ್ಲಾಟ್ ಫಾರ್ಮ್ ಮತ್ತು ಸಂಭಂದಿತ ತಂತ್ರಜ್ಞಾನಗಳಲ್ಲಿ ಪರಿಣಿತಿ ಹೊಂದಿದೆ ಅಷ್ಟೇ ಅಲ್ಲದೆ ದೊಡ್ಡ ದೊಡ್ಡ ಉದ್ಯಮಗಳ ಸಮಸ್ಯೆಗಳಿಗೆ ಪರಿಹಾರ ಕಂಡು ಹಿಡಿದು ಸಮಸ್ಯೆಗೆ ಪರಿಹಾರ ಸೂಚಿಸುತ್ತದೆ ಹೀಗೆ ಡಿಜಿಟಲ್ ಕ್ಷೇತ್ರದ ಹತ್ತು ಹಲವಾರು ವಿಭಾಗಗಳಲ್ಲಿ ಅತ್ಯುತ್ತಮ ಸೇವೆ ಸಲ್ಲಿಸು ತ್ತಿರುವ ಕಂಪನಿ ನಮ್ಮದಾಗಿದೆ ಎಂದು ಹೇಳಿದರು.

ಸಿಡ್ನಿ, ಹೈದರಾಬಾದ್ ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಈ ಕಂಪನಿಯ ನಾವೆಲ್ಲರೂ ನಾವು ಅಭ್ಯಾಸ ಮಾಡಿದ ನಮ್ಮ ಪಿಡಿಎ ಕಾಲೇಜಿನ ವಿದ್ಯಾರ್ಥಿಗಳಿಗೆ ಏನಾದರೂ ನಮ್ಮಿಂದ ಸಹಾಯ ಮಾಡಬೇಕು ಎಂದು ಇಂದು ನಮ್ಮ ಕಂಪನಿಯ ವಿಭಾಗವನ್ನು ಇಲ್ಲಿಯೆ ಆರಂಭಿಸಲು ಯೋಚನೆ ಮಾಡಿದೆವು ಇದಕ್ಕೆ ಪ್ರಸ್ತುತ ಅಧ್ಯಕ್ಷರು ಹಾಗೂ ಆಡಳಿತ ಮಂಡಳಿ ಸದಸ್ಯರ ಸಹಕಾರ ಹಾಗೂ ಪಿಡಿಎ ಇಂಜಿನಿಯರಿಂಗ್ ಕಾಲೇಜಿನ ಪ್ರಾಚಾರ್ಯರು ಹಾಗೂ ಎಲ್ಲ ಸಿಬ್ಬಂದಿಗಳ ಪ್ರೋತ್ಸಾಹ ದೊರೆಯಿತು. ಆರಂಭಿಕವಾಗಿ ನಾವು 275 ವಿದ್ಯಾರ್ಥಿಗಳಿಗೆ ಕ್ಯಾಂಪಸ್ ಇಂಟರ್ವ್ಯೂ ಮಾಡಿ ಅದರಲ್ಲಿ 10 ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿಕೊಂಡೆವು ಇಂದು ಅವರಿಗೆ ಆದೇಶ ಸಹ ನೀಡಿದ್ದೇವೆ. ಆಯ್ಕೆಯಾದ ವಿದ್ಯಾರ್ಥಿಗಳಿಗೆ 6 ತಿಂಗಳು ಸ್ಟೈಫಂಡ ಸಮೇತ ತರಭೇತಿ ನಿಡಲಾಗುವದು ತರಭೇತಿ ಮುಗಿದ ನಂತರ ಅವರಿಗೆ ಸಂಬಳ ಸಮೇತ ಉದ್ಯೋಗ ನೀಡಲಾಗುವುದು ಕಾರ್ಯದರ್ಶಿಗಳಾದ ಉದಯ ಕುಮಾರ್ ಚಿಂಚೋಳಿ ಮಾತನಾಡಿ, ಅಲ್ಪಾಲಿಯೋ ಕಂಪ ನಿಯು ನಮ್ಮ ಕಾಲೇ ಜಿನ ಕ್ಯಾಂಪಸ್‌ನಲ್ಲಿ ಪ್ರಾರಂಭ ವಾಗಿರುದರಿಂದ ಮುಂಬರುವ ಇಂಜಿನಿ ಯರಿಂಗ್ ವಿದ್ಯಾರ್ಥಿಗಳಿಗೆ ಇಲ್ಲಿಯೇ ಉದ್ಯೋಗವು ದೊರೆತು ಅವರ ಜೀವ ನಕ್ಕೂ ಆಧಾರವಾಗಲಿದೆ ಎಂದರು.



ಹೊನ್ನಾವರ ಬಳಿಯ ಇಕೋ ಬೀಚ್ ಜೂನ್, ಜುಲೈ ಮತ್ತು ಆಗಸ್ಟ್ ಮೂರು ತಿಂಗಳ ಕಾಲ ಸಾರ್ವಜನಿಕರ ಪ್ರವೇಶಕ್ಕೆ ಮುಚ್ಚಲಾಗಿದೆ.

### ಆರ್‌ಸಿಬಿ ಸಂಭ್ರಮಾಚರಣೆ ಕಾಲ್ತುಳಿತ ಘಟನೆ

# ಮೃತರ ಕುಟುಂಬದವರಿಗೆ 25 ಲಕ್ಷ ಪರಿಹಾರ ವಿತರಣೆ



ಯಾದಗಿರಿ ಜಇಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕಾಲ್ತುಳಿತದಲ್ಲಿ ಮೃಪಟ್ಟ ಶಿವಲಿಂಗ ಅವರ ಕುಟುಂಬದವರಿಗೆ ಜಿಲ್ಲಾ ಉಸ್ತುವರಿ ಸಚಿವ ಶರಣಬಸಪ್ಪಗೌಡ ದರ್ಶನಾಪುರ ಅವರು 25 ಲಕ್ಷ ರೂಗಳ ಪರಿಹಾರ ವಿತರಿಸಿದರು.

**ಯಾದಗಿರಿ, ಜೂ. 10:** ಆರ್‌ಸಿಬಿ ವಿಜಯೋತ್ಸವವನ್ನು ಸರಿಯಾಗಿ ಆಯೋಜನೆ ಮಾಡದ ಸರ್ಕಾರದ ತಪ್ಪಿಗೆ ಪ್ರಾಣ ಬಿಟ್ಟ ಯಾದಗಿರಿಯ ಶಿವಲಿಂಗ ಅವರ ಕುಟುಂಬ ನೋವಲ್ಲಿದ್ದರೂ ಅವರನ್ನು ಡಿಸಿ ಕಚೇರಿಗೆ ಕರೆಸಿಕೊಂಡು 30 ನಿಮಿಷ ನಿಲ್ಲಿಸಿ, ಸಚಿವ ಶರಣಬಸಪ್ಪ ದರ್ಶನಾಪುರ 25 ಲಕ್ಷ ರೂಗಳ ಪರಿಹಾರ ಚೆಕ್ ನೀಡಿದರು.

ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್‌ಸಿಬಿ) ಐಪಿಎಲ್ ಸೀಸನ್ 18 ಟ್ರೋಫಿ ಗೆದ್ದ ವಿಜಯೋತ್ಸವ ಆಚರಣೆ ವೇಳೆ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕಾಲ್ತುಳಿತ ಸಂಭವಿಸಿ ಸಾವಿಗೀಡಾದ 11 ಜನರ ಸಂತ್ರಸ್ತ ಕುಟುಂಬಕ್ಕೆ ಸರ್ಕಾರದಿಂದ 25 ಲಕ್ಷ ರೂ. ಪರಿಹಾರ ಘೋಷಣೆ ಮಡಿದೆ. ಮಂಡ್ಯ, ಕೋಲಾರ, ಬೆಂಗಳೂರು ಸೇರಿ ಎಲ್ಲೆಡೆ ಸಚಿವರು, ಮಂತ್ರಿಗಳು ಹಾಗೂ ಜಿಲ್ಲಾಧಿಕಾರಿಗಳು ಸಂತ್ರಸ್ತರ ಮನೆಗೆ ಹೋಗಿ ಚೆಕ್ ವಿತರಣೆ ಮಾಡಿ ಬಂದಿದ್ದಾರೆ. ಆದರೆ ಯಾದಗಿರಿಯಲ್ಲಿ ಮಾತ್ರ ನೋವಲ್ಲಿರುವ ಶಿವಲಿಂಗ ಅವರ ಕುಟುಂಬವನ್ನು ಜಿಲ್ಲಾಧಿಕಾರಿಗಳ ಕಚೇರಿಗೆ ಕರೆಸಿ, ಸುಮಾರು ಅರ್ಧ ಗಂಟೆ ಕಾಯುವಂತೆ ಹೇಳಿ ಅನಂತರ ಸಚಿವರು ಬಂದು ಚೆಕ್ ವಿತರಿಸಿದರು.

### ಪ್ಲಾಸ್ಟಿಕ್ ಮುಕ್ತ ಕ್ಯಾಂಪಸ್-ಹಸಿರು ನಾಳೆಯ ಕಡೆ

# ಕೃಷಿ ವಿವಿಯಲ್ಲಿ ಸಸಿ ನೆಟ್ಟು ವಿಶ್ವ ಅರ್ಥಪೂರ್ಣ ಪರಿಸರ ದಿನಾಚರಣೆ




**ರಾಯಚೂರು, ಜೂ.10–** "ಪ್ಲಾಸ್ಟಿಕ್ ಮುಕ್ತ ಕ್ಯಾಂಪಸ್ ಮತ್ತು ಹಸಿರು ನಾಳೆಯ ಕಡೆಗೆ" ಎಂಬ ಶೀರ್ಷಿಕೆಯಡಿ ನಗರದಲ್ಲಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ಮತ್ತು ಕರ್ನಾಟಕ ಅರಣ್ಯ ಇಲಾಖೆ ಪ್ರಾದೇಶಿಕ ವಿಭಾಗ ಇವರ ಸಹಯೋಗದೊಂದಿಗೆ ವಿಶ್ವ ವಿದ್ಯಾಲಯದ ಆವರಣದಲ್ಲಿ ಸುಸ್ಥಿರ ಜೀವನವನ್ನು ಪ್ರೇರೇಪಿಸಲು ದೊಡ್ಡ ಪ್ರಮಾಣದ ಸಸಿಗಳನ್ನು ನೆಡುವ ಅಭಿಯಾನ, ವಿಶ್ವ ಪರಿಸರ ದಿನಾಚರಣೆ ಮತ್ತು ಹಸಿರು ಪದವಿ ಕಾರ್ಯಕ್ರಮವು ಅರ್ಥಪೂರ್ಣವಾಗಿ ನಡೆಯಿತು.

ಕುಲಪತಿಗಳಾದ ಡಾ. ಎಂ. ಹನುಮಂತಪ್ಪ ಅವರು ಮಾತನಾಡಿ, ಏಕ ಬಳಕೆಯ ಪ್ಲಾಸ್ಟಿಕಗಳನ್ನು ತೆಗೆದು ಹಾಕುವ ತುರ್ತು ಅಗತ್ಯವಿದೆ. ಜೀವ ವೈವಿಧ್ಯತೆ, ಪರಿಸರ ಉಸ್ತುವಾರಿ ಮತ್ತು ಹವಾಮಾನ ಸ್ಥಿತಿ ಸ್ಥಾಪಕತ್ವಕ್ಕೆ ವಿಶ್ವವಿದ್ಯಾಯದ ಬದ್ಧತೆಯನ್ನು ಬಲಪಡಿಸುವ ನಿಟ್ಟಿನಲ್ಲಿ ಮುಂಬರುವ ದಿನಗಳಲ್ಲಿ ಸಸಿಗಳನ್ನು ನೆಡುವ ಮೂಲಕ ಪ್ರತಿಯೊಬ್ಬ ವಿದ್ಯಾರ್ಥಿಯು ಪದವಿ ಪಡೆಯುವರೆಗೂ ಒಂದು ಸಸಿಯನ್ನು ದತ್ತು ತೆಗೆದುಕೊಂಡು ಅದನ್ನು ಪಾಲನೆ ಪೋಷಣೆ ಸಂರಕ್ಷಣೆಯನ್ನು ನೋಡಿಕೊಳ್ಳುವುದಾಗಿ ಪ್ರತಿಜ್ಞೆ ಮಾಡಲು ತಿಳಿಸಿದರು.

# ಕೊಲೆ ಪ್ರಕರಣ: 24 ಗಂಟೆಯಲ್ಲಿ ಆರು ಆರೋಪಿಗಳ ಬಂಧನ



**ಕಲಬುರಗಿ, ಜೂ.10–** ನಗರದ ಮಿಲ್ಲತ್ ಬಡಾವಣೆಯ ನಿವಾಸಿ ನಜ ಮುದ್ದಿನ್ ಅಬ್ದುಲ್ ಸತ್ತಾರ (44) ಎಂಬವನ ಕೊಲೆ ಪ್ರಕರಣ ದಾಖಲಾದ 24 ಗಂಟೆಗಳಲ್ಲಿ ಫರಹತಾಬಾದ್ ಪೋಲೀಸರು ಆರು ಜನ ಆರೋಪಿಗಳನ್ನು ಬಂಧಸಿದ್ದಾರೆ. ಕೆಲವು ದಿನಗಳ ಹಿಂದಷ್ಟೇ ಜೈಲಿನಿಂದ ಬಿಡುಗಡೆಯಗಿ ಹೊರ ಬಂದಿದ್ದ ನಜಮುದ್ದಿನ್‌ನನ್ನು ನಗರದ ಹೊರವಲಯದ ಕೂಡಿ ದರ್ಗಾ ಸಮೀಪ ಕೊಲೆ ಮಾಡಲಾಗಿತ್ತು.

ಹತ್ಯೆಯಾದ ನಜಮುದ್ದೀನ್, ಕೆಲವು ತಿಂಗಳ ಹಿಂದಷ್ಟೇ ರೌಡಿಶೀಟರ್ ಆಗಿದ್ದ ಖಲೀಲ್ ಎಂಬಾತನನ್ನು ಹತ್ಯೆ ಮಾಡಿರುವ ಪ್ರಕರಣದಲ್ಲಿ 4ನೇ ಆರೋಪಿಯಾಗಿ ಜೈಲು ಸೇರಿದ್ದ. ಕೆಲವು ದಿನಗಳ ಹಿಂದಷ್ಟೇ ಜೈಲಿನಿಂದ ಹೊರಬಂದಿದ್ದ ನಜಮುದ್ದೀನ್ ಹತ್ಯೆಯಾಗಿದ್ದ. ಈ ಕುರಿತು ಫರತಾಬಾದ್ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

### ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಗೆ ಮನವಿ

# ದಕ್ಷಿಣ ಕ್ಷೇತ್ರಕ್ಕೆ ಅನುದಾನ ತಾರತಮ್ಯ ನಿವಾರಿಸಿ: ಡಾ.ಶೈಲೇಂದ್ರ ಬೆಲ್ದಾಳೆ



**ಬೀದರ್, ಜೂ.10–** ಸಂಪೂರ್ಣ ಹಳ್ಳಿ ಗಳಿಂದಲೇ ಕೂಡಿರುವ ಬೀದರ್ ದಕ್ಷಿಣ ವಿಧಾನಸಭೆ ಕ್ಷೇತ್ರಕ್ಕೆ ಅನುದಾನ ಹಂಚಿಕೆಯಲ್ಲಿ ಆಗುತ್ತಿರುವ ಅನ್ಯಾಯ, ತಾರತಮ್ಯ ಸರಿಪಡಿಸಿ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಅನುವು ಮಾಡು ಕೊಡುವಂತೆ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣೆ ಸಮಿತಿ ಅಧ್ಯಕ್ಷ ಪ್ರೊ.ಎಂ.ಗೋವಿಂದರಾವ್ ಅವರಿಗೆ ಕ್ಷೇತ್ರದ ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ ಮನವಿ ಮಾಡಿದ್ದಾರೆ.

ಸಂವಾದ ಸಭೆಯಲ್ಲಿ ಪ್ರೊ. ಗೋವಿಂದರಾವ್ ಅವರಿಗೆ ಈ ಕುರಿತು ಮನವಿ ಪತ್ರ ಸಲ್ಲಿಸಿದ ಶಾಸಕ ಡಾ. ಬೆಲ್ದಾಳೆ ಅವರು, ಜಿಲ್ಲೆಯ ಆರು ವಿಧಾನಸಭೆ ಕ್ಷೇತ್ರಗಳಲ್ಲಿ ಪೈಕಿ ಹಳ್ಳಿಗಳಿಂದ ಕೂಡಿರುವ ಏಕೈಕ ದಕ್ಷಿಣ ಕ್ಷೇತ್ರಕ್ಕೆ ಅನುದಾನ ಹಂಚಿಕೆಯಲ್ಲಿ ಭಾರಿ ತಾರತಮ್ಯ ಆಗುತ್ತಿದೆ. ಹೀಗಾಗಿ ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಗೆ ಪೆಟ್ಟು ಬೀಳುತ್ತಿದೆ. ಸಮಿತಿಯು ಕ್ಷೇತ್ರಕ್ಕೆ ಆಗುತ್ತಿರುವ ಈ ಅನ್ಯಾಯ ಸರಿಪಡಿಸಲು ಕ್ರಮ ಕೈಗೊಂಡು ಪ್ರಗತಿಗೆ ಹೊಸ ಆಯಾಮ ನೀಡಬೇಕು ಎಂದು ಕೋರಿದರು.

ದಕ್ಷಿಣ ಕ್ಷೇತ್ರ ಹಳ್ಳಿಗಳಿಂದ ಕೂಡಿರುವ ಜೊತೆಗೆ ಸಾಮಾಜಿಕ, ಆರ್ಥಿಕ, ಶೈಕ್ಷಣಿಕವಾಗಿ ಹಿಂದುಳಿದಿದೆ. ಕ್ಷೇತ್ರದಲ್ಲಿ 97 ಗ್ರಾಮ, 20 ತಾಂಡಾಗಳಿವೆ. ಬೀದರ್ ಹಾಗೂ ಚಿಟಗುಪ್ಪಾ ತಾಲೂಕುಗಳಲ್ಲಿ ಕ್ಷೇತ್ರವು ಹಂಚಿಕೆಯಾಗಿದೆ. ಒಟ್ಟು 35 ಗ್ರಾಮ ಪಂಚಾಯಿತಿಗಳಿವೆ. ಇಲ್ಲಿ ಹೆಚ್ಚಿನ ಜನರು ದಲಿತ, ಹಿಂದುಳಿದ, ಅಲ್ಪಸಂಖ್ಯಾತರಿದ್ದು, ಬಡತನ ರೇಖೆ ಕೆಳಗಿರುವವರ ಪ್ರಮಾಣ ಶೇ.65ಕ್ಕೂ ಅಧಿಕವಿದೆ. ತಲಾ ಆದಾಯ ಬಹಳ ಕಡಿಮೆಯಿದೆ.

ಕ್ಷೇತ್ರ ರಾಷ್ಟ್ರೀಯ ಹೆದ್ದಾರಿಯ ವ್ಯಾಪ್ತಿಯಲ್ಲಿದ್ದರೂ ಸುಪರ್ ಸ್ಪೆಷಾಲಿಟಿ ನೂರು ಹಾಸಿಗೆ ಸರ್ಕಾರಿ ಆಸ್ಪತ್ರೆ ಇಲ್ಲಿಲ್ಲ. ಆರೋಗ್ಯ ವ್ಯವಸ್ಥೆ ಸಾಕಷ್ಟು ಸುಧಾರಣೆ ಯಾಗಬೇಕಿದೆ. ಸರ್ಕಾರಿ ಪಾಲಿಟೆಕ್ನಿಕ್ ಸೇರಿ ವೃತ್ತಿಪರ ಶಿಕ್ಷಣ, ಉನ್ನತ ಶಿಕ್ಷಣದ ವ್ಯವಸ್ಥೆ ಇಲ್ಲ. ನೀರಾವರಿ ಪ್ರದೇಶ ಕೇವಲ ಶೇ.9ರಷ್ಟಿದ್ದು, ಬಹುತೇಕರು ಮಳೆಯಾಶ್ರಿತ ಕೃಷಿ ಅವಲಂಬಿಸಿದ್ದಾರೆ. ಸಾರ್ವಜನಿಕ ಉದ್ಯಮಗಳಿಲ್ಲದ ಕಾರಣ ದುಡಿಯುವ ಕೈಗಳಿಗೆ ಕೆಲಸವಿಲ್ಲದೆ, ಕ್ಷೇತ್ರದಲ್ಲಿ ಪಟ್ಟಣ ಪಂಚಾಯಿತಿ, ಪುರಸಭೆ, ನಗರಸಭೆ ಇಲ್ಲ. ಹೀಗಾಗಿ ರಾಜ್ಯ, ಕೇಂದ್ರದ ಅನೇಕ ಯೋಜನೆಗಳಡಿ ಬೇರೆ ಕ್ಷೇತ್ರಗಳಿಗೆ ಬರುವ ವಿಶೇಷ ಅನುದಾನ ದಕ್ಷಿಣ ಕ್ಷೇತ್ರಕ್ಕೆ ಸಿಗುತ್ತಿಲ್ಲ. ಅಭಿವೃದ್ಧಿ ಸೂಚ್ಯಂಕದ ಹಳೇ ಮಾನದಂಡದ ಕಾರಣದಿಂದ ಕೆಕೆಆರ್‌ಡಿಬಿ ಅನುದಾನ ಸಹ ಬಹಳ ಕಡಿಮೆ ಬರುತ್ತಿದೆ.

ಜಿಲ್ಲೆಯ ಔರಾದ್ ಕ್ಷೇತ್ರಕ್ಕೆ ಪ್ರತಿ ವರ್ಷ ಕೆಕೆಆರ್ ಡಿಬಿಯಿಂದ 80–90 ಕೋಟಿ ರೂ., ಭಾಲ್ಕಿ– ಬಸವ ಕಲ್ಯಾಣ ಹಾಗೂ ಹುಮನಾಬಾದ್ ಕ್ಷೇತ್ರಕ್ಕೆ 60– 70 ಕೋಟಿ ರೂ. ಅನುದಾನ ಬಂದರೆ ದಕ್ಷಿಣ ಕ್ಷೇತ್ರಕ್ಕೆ ಕೇವಲ 26–28 ಕೋಟಿ ರೂ. ದೊರಕುತ್ತಿದೆ. ಅತ್ಯಂತ ಹಿಂದುಳಿದ, ಸಂಪೂರ್ಣ ಹಳ್ಳಿಗಳನ್ನೇ ಹೊಂದಿರುವ ಕ್ಷೇತ್ರಕ್ಕೆ ಅತೀ ಕಡಿಮೆ ಅನುದಾನ ಬರುತ್ತಿರುವ ಕಾರಣ ಅಭಿವೃದ್ಧಿಗೆ ಪೆಟ್ಟು ಬೀಳುತ್ತಿದೆ. ಜನರಿಗೆ ಅಗತ್ಯ ಮೂಲಸೌಕರ್ಯ ಕಲ್ಪಿಸಲು ಸಾಧ್ಯವಾಗುತ್ತಿಲ್ಲ. ಜನರ ಆರ್ಥಿಕ ಸ್ಥಿತಿ ಸದೃಢಗೊಳಿಸಲು, ಉತ್ತಮ ಶೈಕ್ಷಣಿಕ, ಆರೋಗ್ಯ ವ್ಯವಸ್ಥೆ ಕಲ್ಪಿಸಲು ಸಾಧ್ಯವಾಗುತ್ತಿಲ್ಲ. ಕ್ಷೇತ್ರದ ಬಡ, ಹಿಂದುಳಿದ, ರೈತರ ಮೇಲೆ ಆಗುತ್ತಿರುವ ಘೋರ ಅನ್ಯಾಯ ಸರಿಪಡಿಸಲು ಆಗ್ರಹಿಸಿದರು.

# ಮಾರೆಮ್ಮ ದೇವಿಯ ಕುಂಭೋತ್ಸವ ಕಾರ್ಯಕ್ರಮದಲ್ಲಿ ಭಾಗಿಯಾದ ಎಂ.ಎಸ್.ಸಿದ್ದಪ್ಪ



**ಬಳ್ಳಾರಿ, ಜೂ.10–** ಸಿರುಗುಪ್ಪ ವಿಧಾನಸಭಾ ಕ್ಷೇತ್ರದ ಕರ್ನಾಟಕ ಮತ್ತು ಆಂಧ್ರ ಗಡಿಭಾಗವಾದ ಇಟಗಿಹಾಳು ಗ್ರಾಮದ ಆರಾಧ್ಯ ದೇವತೆ ಮಾರೆಮ್ಮ ದೇವಿ ತಾಯಿಯ ಕುಂಭೋತ್ಸವ ಕಾರ್ಯಕ್ರಮದಲ್ಲಿ ಎಂ.ಎಸ್.ಸಿದ್ದಪ್ಪ ತೆಕ್ಕಲಕೋಟೆ, ಜಿಲ್ಲಾಧ್ಯಕ್ಷರು, ಯುವಮೋರ್ಚಾ ಬಿಜೆಪಿ ಬಳ್ಳಾರಿ ಜಿಲ್ಲೆ ಇವರು ಭಾಗಿಯಾಗಿ ತಾಯಿ ಆಶೀರ್ವಾದ ಪಡೆದು ನಂತರ ಕಾರ್ಯಕರ್ತರ ಮನೆಗಳಿಗೆ ಭೇಟಿ ನೀಡಿದರು.

### ರೈತರ ಹಬ್ಬ ಕಾರಹುಣ್ಣಿಮೆ

# ಎತ್ತುಗಳ ಅಲಂಕಾರಕ್ಕಾಗಿ ರೈತರಿಂದ ಖರೀದಿ ಜೋರು

**ಕಲಬುರಗಿ, ಜೂ.10–** ಕಾರ ಹುಣ್ಣಿಮೆ ಹಬ್ಬದ ಪ್ರಯುಕ್ತ ನಗರದ ಸೂಪರ್ ಮಾರ್ಕೆಟ್, ಗಂಜ್, ಬಂಬೂ ಬಜಾರ್ ಮಾರುಕಟ್ಟೆಯಲ್ಲಿ ಗ್ರಾಮೀಣ ಭಾಗದಿಂದ ಬಂದ ರೈತರು ಎತ್ತುಗಳು ಸೇರಿದಂತೆ ವಿವಿಧ ಜಾನುವಾರುಗಳಿಗೆ ಶೃಂಗರಿಸಲು ಅಲಂಕಾರಿಕ ಸಾಮಗ್ರಿಗಳನ್ನು ಭರ್ಜರಿಯಾಗಿ ಖರೀದಿಸಿದರು.

ದೇಶಕ್ಕೆ ರೈತ ಬೆನ್ನೆಲುಬಾದರೆ, ರೈತರಿಗೆ ಎತ್ತುಗಳೇ ಬೆನ್ನೆಲುಬು. ಅಧುನಿಕ ಕೃಷಿ ಯಂತ್ರಗಳು ಎಲ್ಲಾ ವಿಷಯಗಳಲ್ಲಿ ರೈತರ ಸಮಸ್ಯೆಗಳನ್ನು ಪರಿಹರಿಸಲು ಸಾಧ್ಯವಿಲ್ಲ, ಒಂದು ಮಾತ್ರ ನಿಜ ರೈತರ ಜಮೀನಿನಲ್ಲಿ ಅತಿಹೆಚ್ಚು ದುಡಿಯುವುದು ಎತ್ತುಗಳು ಮಾತ್ರ, ಗ್ರಾಮೀಣ ಭಾಗಗಳಲ್ಲಿ ಮೊದಲಿಂದಲೂ ಕೃಷಿಗೆ ಎತ್ತುಗಳೇ ಆಧಾರ. ಹೀಗಾಗಿ ರೈತರು ಎತ್ತುಗಳನ್ನು ಮನೆಯ ಸದಸ್ಯನಂತೆ ಕಾಣುತ್ತಾರೆ.

ರೈತರು ಕಾರ ಹುಣ್ಣಿಮೆಯ ದಿನದಂದು ಎತ್ತುಗಳಿಗೆ ಕೃತಜ್ಞತೆ ಸಮರ್ಪಿಸುತ್ತಾರೆ. ಎತ್ತುಗಳ ಅಲಂಕಾರಕ್ಕಾಗಿ ಕೊರಳಿಗೆ ಗಂಟೆ, ಮತಾಟಿ, ಮಗಡಾ, ಮೂಗುದಾರ, ಬಾರಕೋಲು, ಹಳದಿ, ಕೆಂಪು, ಕೊಂಬುಗಳಿಗೆ ಹಸಿರು ಬಣ್ಣದ ವಾರ್ನಿಷ್, ಸರಜಂಗ ಸೇರಿದಂತೆ ವಿವಿಧ ರೀತಿಯ ಅಲಂಕಾರಿಕ ಸಾಮಗ್ರಿಗಳನ್ನು ಸಾವಿರಾರು ರೈತರು ಖರೀದಿ ಮಾಡಿದರು.

ಅವರಾದ, ಮಹಾಗಾಂವ್, ಭೂಸಣಗಿ, ನಾಗೂರು, ವಟವಟಿ, ಕಮಲಾಪೂರ, ವೆಂಕಟಬೇನೂರ, ಭೂಪಾಲ ತೆಗನೂರು, ಧರ್ಮಾಪೂರ, ದೇವನ ತೆಗನೂರು, ತೆಂಗಳಿ, ದಂಡೋತಿ, ನಂದಿಕೂರ, ಕೋಟನೂರ, ಖಾಜಾಕೋಟನೂರ, ಸಿರಡೋಣ, ಪಡಸಾವಳಗಿ ಸೇರಿದಂತೆ ಇನ್ನಿತರ ಗ್ರಾಮಗಳ ರೈತರು ಎತ್ತುಗಳಿಗೆ ಸಿಂಗರಿಸಲು ವಿವಿಧ ಅಲಂಕಾರಿಕ ಸಮಗ್ರಿಗಳನ್ನು ಖರೀದಿಸಿದರು.



ಕಲಬುರಗಿ ನಗರದ ಮಾರುಕಟ್ಟೆಯಲ್ಲಿ ನಾಳಿನ ಕಾರಹುಣ್ಣಿಮೆ ನಿಮಿತ್ಯ ಎತ್ತುಗಳ ಅಲಂಕಾರಿಕ ವಸ್ತುಗಳು ಭರ್ಜರಿಯಾಗಿ ವ್ಯಾಪಾರ ಮಾಡಿದರು.

ಮುಂಗಾರು ಬಿತ್ತನೆ ಸಿದ್ಧತೆಯಲ್ಲಿರುವ ರೈತರು ಇನ್ನೇನು ಎರಡು ದಿನದ ಅವಧಿಯಲ್ಲಿ ಬರುವ ಕಾರಹುಣ್ಣಿಮೆಯನ್ನು ಆಚರಿಸಿ ಬಿತ್ತನೆಯಲ್ಲಿ ನಿರತರಾಗುತ್ತಾರೆ. ಇದಕ್ಕೂ ಮುನ್ನ ಎತ್ತುಗಳಿಗೆ ಸಿಂಗರಿಸಿ ಪ್ರಮುಖ ಬೀದಿಗಳಲ್ಲಿಯೂ ಮೆರವಣಿಗೆ ನಡೆಸಿ ಸಂಭ್ರಮಿಸುತ್ತಾರೆ.

ಜೇಷ್ಠ ಮಾಸದ ಹುಣ್ಣಿಮೆ ಬಂತೆಂದರೆ ಉತ್ತರ ಕರ್ನಾಟಕದ ಮಂದಿಗೆ ಅದೇನೋ ಸಂಭ್ರಮ. ಒಂದೆರಡು ಹದದ ಮಳೆ ಬಿದ್ದು ಆಗತಾನೆ ಕೃಷಿ ಚಟುವಟಿಕೆಗಳು ಆರಂಭವಾಗಿ ಭರ್ಜರಿಯ ಮುಂಗಾರು ಮತ್ತು ಹಿಂಗಾರಿನ ಮಳೆಯ ನಿರೀಕ್ಷೆಯಲ್ಲಿ ಇರುತ್ತಾರೆ. ಹಬ್ಬಕ್ಕೊಂದೆರಡು ದಿನಗಳ ಮುಂಚಿಯೇ ಅಂಗಡಿಗಳಿಗೆ ಹೋಗಿ, ಬಣ್ಣ ಬಣ್ಣದ ರಂಗು (ಗುಲಾಲ್) ಟೇಪುಗಳನ್ನೆಲ್ಲಾ ತಂದು ಸಿದ್ಧಪಡಿಸಿಕೊಂಡು ಹುಣ್ಣಿಮೆ ಹಬ್ಬದ ದಿನ ತಮ್ಮ ರಾಸುಗಳು ಅದರಲ್ಲೂ ವಿಶೇಷವಾಗಿ ಹೋರಿಗಳನ್ನು ಕೆರೆ ಕಟ್ಟೆಗಳ ಬಳಿಗೆ ಕರೆದುಕೊಂಡು ಹೋಗಿ ಚೆನ್ನಾಗಿ ತಿಕ್ಕಿ ಅವುಗಳ ಮೈ ತೊಳೆದು ಅವುಗಳ ಕೋಡುಗಳನ್ನು ಕತ್ತಿಯಿಂದ ಸವರಿ ಅವುಗಳಿಗೆ ವಿವಿಧ ಬಣ್ಣಗಳನ್ನು ಬಳಿದೋ ಇಲ್ಲವೇ ತೇಪುಗಳನ್ನು ಕಟ್ಟಿ ಅದರ ಜೊತೆಗೆ ಬಣ್ಣ ಬಣ್ಣದ ಉಸಿರುಬುಡ್ಡೆ (ಬೆಲೂನು) ಗಳನ್ನು ಕಟ್ಟಿ ಅವುಗಳ ದೇಹಕ್ಕೆ ವಿವಿಧ ಬಣ್ಣದ ಗುಲಾಲುಗಳಿಂದ ಚಿತ್ತಾರ ಬಿಡಿಸಿ ಕೊರಳಿಗೆ ಮತ್ತು ಕಾಲ್ಗಳಿಗೆ ಚಂದನೆಯ ಗೆಜ್ಜೆಗಳನ್ನು ಕಟ್ಟಿ ನೋಡುವುದಕ್ಕೆ ಚೆಂದಗೆ ಕಾಣುವ ಹಾಗೆ ಮಾಡುತ್ತಾರೆ.

ಕೇವಲ ಹಸುಗಳಿಗಷ್ಟೇ ಅಲ್ಲದೇ ಮನೆ ಮಂದಿಯೆಲ್ಲಾ ಹೂಸ ಬಟ್ಟೆಗಳನ್ನು ತೊಟ್ಟು ಇಡೀ ದಿನ ತಮ್ಮೆಲ್ಲಾ ಕೃಷಿ ಚಟುವಟಿಕೆಗಳಿಂದ ತಾವೂ ಮತ್ತು ತಮ್ಮ ರಾಸುಗಳು ಮುಕ್ತವಾಗಿದ್ದು ಹೋಳಿಗೆ, ಕಡುಬು ಮತ್ತು ವಿವಿಧ ಬಗೆಯ ಭಕ್ಷ್ಯ ಭೋಜನಗಳನ್ನು ಸಿದ್ಧ ಪಡಿಸಿ ಮೊದಲು ದೇವರಿಗೆ ನೈವೇದ್ಯ ಮಾಡಿ ನಂತರ ತಮ್ಮ ದನ

ಕರುಗಳಿಗೆ ಅವುಗಳನ್ನು ಒಳ್ಳೆಯ ಮೇವುಗಳ ಜೊತೆ ತಮ್ಮ ದನಕರುಗಳಿಗೆ ಉಣ ಬಡಿಸಿ ನಂತರ ಮನೆಯವರೆಲ್ಲರೂ ಒಟ್ಟಿಗೆ ಸಂತೋಷದಿಂದ ಊಟ ಮಾಡಿ ಸಂಭ್ರಮಿಸುತ್ತಾರೆ.

# ಗೋಹತ್ಯೆ ಖಂಡಿಸಿ ಕಮಲನಗರ ಬಂದ್; ಪ್ರತಿಭಟನಾ ಮೆರವಣಿಗೆ




**ಬೀದರ್, ಜೂ.10–** ಜಿಲ್ಲೆಯ ಕಮಲನಗರ ಪಟ್ಟಣದ ಹೊರವಲಯದ ರಾಂಪೂರ ರಸ್ತೆಯಲ್ಲಿರುವ ಶೇಡವೊಂದರಲ್ಲಿಂದು ಬೆಳಿಗ್ಗೆ ಅನಧೀಕೃತವಾಗಿ ಗೋಹತ್ಯೆ ನಡೆದ ಘಟನೆ ಹಿನ್ನೆಲೆಯಲ್ಲಿ ಕಮಲನಗರದಲ್ಲಿ ಹಿಂದೂಪರ ಸಂಘಟನೆಯ ಪ್ರಮುಖರು, ಯುವಕರು, ಮುಖಂಡರು ಕಮಲನಗರ ಬಂಗೆ ಕರೆ ನೀಡಿದರು. ಬೆಳಿಗ್ಗೆ ಅಲ್ಲಮಪ್ರಭು ವೃತ್ತದ ಬಳಿ ಟೈಗೆ ಬೆಂಕಿ ಹಚ್ಚಿ ಪಟ್ಟಣದಲ್ಲಿ ಬೈಕ್ ರ್‍ಯಾಲಿ ಮೂಲಕ ಅಂಗಡಿ ಮುಂಗಟ್ಟುಗಳನ್ನು ಬಂದ ಮಾಡಿಸಿ ಆಕ್ರೋಶ ವ್ಯಕ್ತಪಡಿಸಿದರು.

ಸುದ್ದಿ ತಿಳಿಯುತ್ತಿದ್ದಂತೆ ಸಿಪಿಐ ಅಡವೆಪ್ಪ ಬನ್ನಿ ಹಾಗೂ ಪಿಎಐ ಚಂದ್ರಶೇಖರ ನಿರ್ಣೆ ನೇತೃತ್ವದಲ್ಲಿ ಯಾವುದೇ ಅಹೀತಕರ ಘಟನೆ ಜರಗದಂತೆ ಬಿಗಿ ಪೊಲೀಸ್ ಬಂದೋಬಸ್ತ ಮಾಡಲಾಯಿತು. ಸ್ಥಳಕ್ಕೆ ಡಿವೈಎಪಿ ಶಿವಾನಂದ ಪವಾಡಶೆಟ್ಟಿ, ತಹಶೀಲ್ದಾರ ಅಮೀತ 'ಕುಮಾರ ಕುಲಕರ್ಣಿ ಭೇಟಿ ನೀಡಿ ಪರಿಶೀಲಿಸಿದರು. ಪಟ್ಟಣದಲ್ಲಿ ಉದ್ವಿಘ್ನ ಪರಿಸ್ಥಿತಿ ತಲೆದೂರಿತ್ತು. ಯುವಕರು ಅಂಗಡಿ ಮುಗ್ಗಟ್ಟುಗಳನ್ನು ಬಂದ ಮಾಡಿಸಿದರು ಇದರಿಂದ ಕೆಲಹೊತ್ತು ಪ್ರಯಾಣಿಕರು ಭಯಭೀತರಾದರು. ರಸ್ತೆ ಸಂಚಾರ ಎಂದಿನಂತೆ ಸುಗಮವಾಗಿ ನಡೆಯಿತು.

ಹೆಚ್ಚುವರಿ ಡಿಆರ್ ವ್ಯಾನಗಳು ಸ್ಥಳದಲ್ಲಿ ಠಿಕಾಣಿ ಹೂಡಿದು. ಯಾವುದೇ ಅಹೀತಕ ಘಟನೆ ನಡೆದಿಲ್ಲ ಎಂದು ಮೂಲಗಳಿಂದ ತಿಳಿದು ಬಂದಿದೆ. ಈ ಕುರಿತು ತನಿಖೆ ಮುಂದುವರೆದಿದ್ದು, ಕಮಲನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ಜರುಗಿದೆ. ಸೈಯದ್ ಪೀರ್ ಭಾಷಾ ಅಂಗಳದಲ್ಲಿ ಆಕಳ ಅಂತ್ಯ ಕ್ರಿಯೆ ವಿಧಿ ವಿಧಾನ ಮೂಲಕ ನೆರವೇರಿಸಲಾಯಿತು. ಮೆರವಣಿಗೆಯಲ್ಲಿ ನೂರಾರು ಹಿಂದು ಪರ್ ಸಂಘಟನೆ ಕಾರ್ಯಕರ್ತರು, ಯುವಕರು ಮುಖಂಡರು ಹಾಗೂ ಮಕ್ಕಳು ಇದ್ದರು.



ಶ್ರೀಗಂಧ
ಸಾಂಸ್ಕೃತಿಕ ಸಂಸ್ಥೆ, ಶಿವಮೊಗ್ಗ

ಸದ್ಭಾವ
ಸದ್ವಿಚಾರ
ಸದಭಿರುಚಿ
ಸತ್ಕಾರ್ಯ



# ಶ್ರೀ ಕೆ.ಎಸ್. ಈಶ್ವರಪ್ಪನವರ 77ನೇ ಹುಟ್ಟುಹಬ್ಬದ ಶುಭಾಶಯಗಳು

ದಿನಾಂಕ: 10 ಮತ್ತು 11, 2025 । ಸ್ಥಳ: ಶುಭಮಂಗಳ ಕಲ್ಯಾಣಮಂಟಪ ಅವರಣ, ವಿನೋಬನಗರ, ಶಿವಮೊಗ್ಗ





ಶ್ರೀ ಕೆ.ಈ. ಕಾಂತೇಶ್
ಕಾರ್ಯಾಧ್ಯಕ್ಷರು

ದಿನಾಂಕ: 10.06.2025ರ ಮಂಗಳವಾರ ಬೆಳಿಗ್ಗೆ 08:00ಕ್ಕೆ
ಲಲಿತ ಸಹಸ್ರನಾಮ ಪಾರಾಯಣ, ವಿಷ್ಣು ಸಹಸ್ರನಾಮ ಪಾರಾಯಣ,
ಚಂಡಿಕಾ ಹೋಮ, ರುದ್ರ ಹೋಮ, 11:00ಕ್ಕೆ ಪೂರ್ಣಾಹುತಿ

ಬೆಳಿಗ್ಗೆ 11:00ರಿಂದ **ಧರ್ಮಸಭೆ**
ಅಧ್ಯಕ್ಷತೆ: ಶ್ರೀಯುತ ಕೆ.ಎಸ್. ಈಶ್ವರಪ್ಪನವರು, ಮಾಜಿ ಉಪಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ
ದಿವ್ಯ ಸಾನಿಧ್ಯ: ಪರಮಪೂಜ್ಯರುಗಳಾದ ಶ್ರೀ ವಿಶ್ವಪ್ರಸನ್ನತೀರ್ಥ ಸ್ವಾಮಿಗಳು, ಪೇಜಾವರ ಮಠ
ಶ್ರೀ ಮಲ್ಲಿಕಾರ್ಜುನ ಮುರುಘರಾಜೇಂದ್ರ ಮಹಾಸ್ವಾಮಿಗಳು, ಬೆಕ್ಕಿನಕಲ್ಮಠ
ಶ್ರೀ ಅಭಿನವ ಶಂಕರ ಭಾರತೀ ಮಹಾಸ್ವಾಮಿಗಳು, ಕೂಡ್ಲಿ ಮಠ
ಶ್ರೀ ಬಸವಮೂರ್ತಿ ಮಾದಾರ ಚನ್ನಯ್ಯ ಮಹಾಸ್ವಾಮಿಗಳು, ಚಿತ್ರದುರ್ಗ
ಶ್ರೀ ಈಶ್ವರಾನಂದಪುರಿ ಸ್ವಾಮಿಗಳು, ಕಾಗಿನೆಲೆ ಗುರುಪೀಠ, ಹೊಸದುರ್ಗ
ಶ್ರೀ ಸಾಯಿನಾಥ ಸ್ವಾಮಿಗಳು, ಆದಿಚುಂಚನಗಿರಿ ಮಠ, ಶಿವಮೊಗ್ಗ

ಮಧ್ಯಾಹ್ನ 12:30ಕ್ಕೆ **ಮಂಗಳ ನಿಧಿ ಸಮರ್ಪಣೆ**
ಉಪಸ್ಥಿತಿ: ಶ್ರೀ ಸು. ರಾಮಣ್ಣ

ಸಂಜೆ 06:00ರಿಂದ ದಿಕ್ಸೂಚಿ ಭಾಷಣ: ಶ್ರೀ ಚಕ್ರವರ್ತಿ ಸೂಲಿಬೆಲೆ
**ಸ್ವಾಭಿಮಾನಿ ಭಾರತ**
ವಿಶೇಷ ಅತಿಥಿ: ಶ್ರೀ ಶೈಲೇಶ್ ತಿಲಕ್ (ಶ್ರೀ ಲೋಕಮಾನ್ಯ ಬಾಲಗಂಗಾಧರ ತಿಲಕ್ ಅವರ ಮರಿಮಗ)

ದಿನಾಂಕ: 11.06.2025ರ ಬುಧವಾರ ಸಂಜೆ 06:00ಕ್ಕೆ
**ಪ್ರತಿಭಾ ಪುರಸ್ಕಾರ**
ಅಧ್ಯಕ್ಷತೆ: ಶ್ರೀಯುತ ಕೆ.ಎಸ್. ಈಶ್ವರಪ್ಪನವರು, ಮಾಜಿ ಉಪಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ
ದಿವ್ಯ ಸಾನಿಧ್ಯ ಮತ್ತು ಆಶೀರ್ವಚನ ಪರಮಪೂಜ್ಯರುಗಳಾದ
ಶ್ರೀ ಅದೃಶ್ಯ ಕಾಡಸಿದ್ದೇಶ್ವರ ಸ್ವಾಮಿಗಳು, ಸಿದ್ಧಗಿರಿ ಮಠ, ಕೊಲ್ಹಾಪುರ, ಮಹಾರಾಷ್ಟ್ರ
ಶ್ರೀ ಅಮರೇಶ್ವರ ಮಹಾಸ್ವಾಮಿಗಳು, ಕವಲಗುಡ್ಡ ಗುರುಪೀಠ
2024-25ನೇ ಸಾಲಿನಲ್ಲಿ ನಡೆದ ಎಸ್.ಎಸ್.ಎಲ್.ಸಿ. ಮತ್ತು ದ್ವಿತೀಯ ಪಿ.ಯು.ಸಿ. ವಾರ್ಷಿಕ ಪರೀಕ್ಷೆಯಲ್ಲಿ ಅತ್ಯುನ್ನತ ಶ್ರೇಣಿಯಲ್ಲಿ ಉತ್ತೀರ್ಣರಾದ ಸುಮಾರು 1500 ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ "ವಿದ್ಯಾ ಪ್ರೋತ್ಸಾಹ ನಿಧಿ" ನೀಡಿ ಸನ್ಮಾನಿಸಲಾಗುವುದು.

ಮುಖ್ಯ ಅತಿಥಿ: ಡಾ. ಮೋಹನ್ ಆಳ್ವ

## ಸರ್ವರಿಗೂ ಆದರದ ಸ್ವಾಗತ